# ಬೆಳಗಾವಿ ವರದಿ

ಕನ್ನಡ ದಿನಪತ್ರಿಕೆ
24 ಏಪ್ರಿಲ್ । ಬುಧವಾರ
24 APRIL 2024

ಪ್ರಧಾನ ಸಂಪಾದಕ : ಸತೀಶ ಬ ಗುಡಗೆನಟ್ಟಿ

BELAGAVI VARADI KANNADA DAILY NEWS PAPER

ಗಡಿ ಜಿಲ್ಲೆಯ ಧ್ವನಿ...

₹4 ಸಂಪುಟ – 5 ಸಂಚಿಕೆ – 57 ಪುಟ – 4 | RNI. KARKAN/2020/79084 | ADVRT EMAIL. BELAGAVIVARADIEDITOR@GMAIL.COM | NEWSBELAGAVI@GMAIL.COM | 9900332089 | REG.NO G-2/PMG/KA/NK/BM/139/2024-26





## ಇಂದು 'ನಿಷೇಧಾಜ್ಞೆ' ಜಾರಿ: 'ಮದ್ಯ ಮಾರಾಟ'ವೂ ಬಂದ್

ಬೆಂಗಳೂರು: ಏಪ್ರಿಲ್. 26ರಂದು ಕರ್ನಾಟಕದಲ್ಲಿ ಲೋಕಸಭಾ ಚುನಾವಣೆಗಾಗಿ ಮೊದಲ ಹಂತದ ಮತದಾನ ನಡೆಯಲಿದೆ. ಈ ಕಾರಣಕ್ಕಾಗಿ ಮುಂಜಾಗ್ರತಾ ಕ್ರಮವಾಗಿ ಬೆಂಗಳೂರಲ್ಲಿ ಇಂದು ಸಂಜೆ 6 ಗಂಟೆಯಿಂದ 144 ಸೆಕ್ಷನ್ ಅಡಿಯಲ್ಲಿ ನಿಷೇಧಾಜ್ಞೆ ಜಾರಿಗೊಳಿಸಲಾಗಿದೆ. ಅಲ್ಲದೇ ಮದ್ಯ ಮಾರಾಟಕ್ಕೂ ನಿಷೇಧ ಹೇರಲಾಗಿದೆ.

ಈ ಸಂಬಂಧ ಬೆಂಗಳೂರು ನಗರ ಪೊಲೀಸ್ ಕಮೀಷನರ್ ಬಿ.ದಯಾನಂದ್ ಆದೇಶ ಹೊರಡಿಸಿದ್ದಾರೆ. ಇಂದು ಸಂಜೆ 6 ಗಂಟೆಯಿಂದ ಬೆಂಗಳೂರು ವ್ಯಾಪ್ತಿಯಲ್ಲಿ 144 ಸೆಕ್ಷನ್ ಅಡಿಯಲ್ಲಿ ನಿಷೇಧಾಜ್ಞೆ ಜಾರಿಗೊಳಿಸಲಾಗಿದೆ. ಐದು ಲೋಕಸಭಾ ಕ್ಷೇತ್ರಗಳಲ್ಲಿ ಹೆಚ್ಚುವರಿ ಭದ್ರತೆಯನ್ನು ಕೈಗೊಳ್ಳಲಾಗಿದೆ ಎಂದಿದ್ದಾರೆ.

ಇಂದು ಸಂಜೆ 6 ಗಂಟೆಯಿಂದ ಏಪ್ರಿಲ್.26ರ ಮಧ್ಯರಾತ್ರಿಯವರೆಗೆ ನಿಷೇಧಾಜ್ಞೆ ಜಾರಿಯಲ್ಲಿರಲಿದೆ. ಈ ವೇಳೆಯಲ್ಲಿ ಮದ್ಯ ಮಾರಾಟಕ್ಕೆ ಅವಕಾಶವಿಲ್ಲ ಎಂಬುದಾಗಿ ತಿಳಿಸಿದ್ದಾರೆ.

ಬೆಂಗಳೂರಿನ ಐದು ಲೋಕಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಹೆಚ್ಚುವರಿ ಪೊಲೀಸ್ ಭದ್ರತೆ ಕೈಗೊಳ್ಳಲಾಗಿದೆ. 13 ಸಾವಿರಕ್ಕೂ ಹೆಚ್ಚು ಪೊಲೀಸರನ್ನು ನಿಯೋಜಿಸಲಾಗಿದೆ. 11 ಸಿಆರ್ ಪಿಎಫ್, 14 ಕೆಎಸ್‌ಆರ್‌ಪಿ ಹಾಗೂ 40 ಸಿಎಆರ್ ತುಕಡಿಯನ್ನು ಭದ್ರತೆಗಾಗಿ ನಿಯೋಜಿಸಲಾಗಿದೆ. ನಗರ ಪೊಲೀಸ್ ಆಯುಕ್ತರ ನೇತೃತ್ವದಲ್ಲಿ ಭದ್ರತೆ ಕೈಗೊಳ್ಳಲಾಗಿದೆ ಎಂದಿದ್ದಾರೆ.


## ಇಂದು ಡಾ.ರಾಜಕುಮಾರ್ ಜಯಂತಿ ಆಚರಣೆ

ಬೆಳಗಾವಿ: ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ವತಿಯಿಂದ ಬುಧವಾರ(ಏ.24) ಬೆಳಿಗ್ಗೆ 10.30 ಗಂಟೆಗೆ ವಾರ್ತಾಭವನದಲ್ಲಿ ಡಾ.ರಾಜ–ಕುಮಾರ್ ಜಯಂತಿಯನ್ನು ಸರಳ ರೀತಿಯಲ್ಲಿ ಹಮ್ಮಿಕೊಳ್ಳಲಾಗಿದೆ.

ಲೋಕಸಭಾ ಚುನಾವಣೆ ಹಿನ್ನೆಲೆಯಲ್ಲಿ ಮಾದರಿ ನೀತಿಸಂಹಿತೆ ಜಾರಿಯಲ್ಲಿರುವುದರಿಂದ ಸಾಂಕೇತಿಕವಾಗಿ ಜಯಂತಿ ಕಾರ್ಯಕ್ರಮ ನಡೆಸಲಾಗುವುದು.

ಸಾರ್ವಜನಿಕರು ಕಾರ್ಯ ಕ್ರಮದಲ್ಲಿ ಭಾಗವಹಿಸಬೇಕು ಎಂದು ಉಪ ನಿರ್ದೇಶಕ ಗುರುನಾಥ ಕಡಬೂರ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಬೆಳಗಾವಿ: ಸಿಡಿಲು ಬಡಿದು ವ್ಯಕ್ತಿ ಸಾವು



ಬೆಳಗಾವಿ: ಬೈಲಹೊಂಗಲ್ ತಾಲೂಕಿನ ಹನುಮನಹಟ್ಟಿ ಗ್ರಾಮದಲ್ಲಿ ಜಮೀನಿನಲ್ಲಿ ಕೆಲಸ ಮಾಡುತ್ತಿದ್ದ ವೇಳೆ ಸಿಡಿಲು ಬಡಿದು ರೈತ ಮೃತಪಟ್ಟಿದ್ದಾನೆ.

ಕೆಂಚಪ್ಪ ಕಾವಲದ (32) ಮೃತ ರೈತ. ನೇಸರಗಿ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಘಟನೆ ನಡೆದಿದೆ.

## ಮುರುಘಾ ಶ್ರೀಗಳಿಗೆ ನಾಲ್ಕು ತಿಂಗಳ ನ್ಯಾಯಾಂಗ ಬಂಧನ: ಸುಪ್ರೀಂಕೋರ್ಟ್ ಆದೇಶ



ಚಿತ್ರದುರ್ಗ: ಪ್ರಕರಣ ಸಂಬಂಧ ವಿಚಾರಣೆ ಎದು–ರಿಸುತ್ತಿರುವ ಚಿತ್ರ ದುರ್ಗದ ಮುರುಘಾ ಮಠದ ಸ್ವಾಮೀಜಿ ಅವರ ಜಾಮೀನು ರದ್ದು ಗೊಳಿಸಿ, ನಾಲ್ಕು ತಿಂಗಳ ಕಾಲ ನ್ಯಾಯಾಂಗ ಬಂಧನ ವಿಧಿಸಿ ಸುಪ್ರೀಂಕೋರ್ಟ್ ಆದೇಶಿಸಿದೆ.

ಒಂದು ವಾರದಲ್ಲಿ ನ್ಯಾಯಾಂಗ ಬಂಧನಕ್ಕೆ ತೆರಳುವಂತೆ ಸೂಚನೆ ಕೂಡ ನೀಡಿದೆ. ಜೊತೆಗೆ ವಿಶೇಷ ಕೋರ್ಟ್‌ನಲ್ಲಿ ಸಂತ್ರಸ್ತ ಮಕ್ಕಳ ವಿಚಾರಣೆಗೆ 'ಸುಪ್ರೀಂ' ಆದೇಶಿಸಿದೆ.

ಇನ್ನು 4 ತಿಂಗಳಲ್ಲಿ ತನಿಖೆ ಪೂರ್ಣಗೊಳ್ಳದಿದ್ದರೆ ಬಂಧನದ ಅವಧಿಯನ್ನು ಇನ್ನೆರಡು ತಿಂಗಳ ಕಾಲ ವಿಸ್ತರಣೆ ಮಾಡಬಹುದು.

ಡಾ. ಶ್ರೀ ಶಿವಮೂರ್ತಿ ಮುರುಘಾ ಶರಣರು ಎಸ್ಜೆಎಂ ವಿದ್ಯಾಪೀಠದಲ್ಲಿನ ವಿದ್ಯಾರ್ಥಿನಿಯರಿಗೆ ಲೈಂಗಿಕ ದೌರ್ಜನ್ಯ ಎಸಗಿದ ಆರೋಪ ಪ್ರಕರಣ ಸಂಬಂಧ ಮುರುಘಾ ಮಠದ ಪೀಠಾಧ್ಯಕ್ಷ ಮುರುಘಾ ಶ್ರೀಯನ್ನು ಬಂಧಿಸಲಾಗಿತ್ತು.

ಬಳಿಕ ಹೈಕೋರ್ಟ್ ಮುರುಘಾ ಶ್ರೀಗೆ ಷರತ್ತು ಬದ್ಧ ಜಾಮೀನು ನೀಡಿತ್ತು. ಹಾಗೇ ಜಾಮೀನಿನ ಮೇಲೆ ಹೊರ ಬಂದ ಅವರು, ಮುರುಘಾ ಶ್ರೀ ಮಠ ಹಾಗೂ ಎಸ್ಜೆಎಂ ವಿದ್ಯಾಪೀಠದ ಆಡಳಿತ ನೋಡಿಕೊಳ್ಳುತ್ತಿದ್ದರು.

# ಬೆಳಗಾವಿಯಲ್ಲಿ ಕಾಂಗ್ರೆಸ್ ಗೆದ್ದರೆ ರಾಜ್ಯ ಸರ್ಕಾರಕ್ಕೆ ಬಲ: ಸಚಿವ ಸತೀಶ್ ಜಾರಕಿಹೊಳಿ

ಅರಭಾವಿ: ಬೆಳಗಾವಿ ಹಾಗೂ ಚಿಕ್ಕೋಡಿ ಎರಡೂ ಕ್ಷೇತ್ರಗಳಲ್ಲೂ ಕಾಂಗ್ರೆಸ್ ಗೆದ್ದರೆ ಸಿದ್ದರಾಮಯ್ಯ ನೇತೃತ್ವದ ಕಾಂಗ್ರೆಸ್ ಸರ್ಕಾರಕ್ಕೆ ಬಲ ತುಂಬಿದಂತಾಗುತ್ತದೆ. ಹಾಗಾಗಿ ಕಾಂಗ್ರೆಸ್ ಅಭ್ಯರ್ಥಿಗಳಿಗೆ ಮತ ನೀಡಿ ಎಂದು ಲೋಕೋಪಯೋಗಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಸತೀಶ್ ಜಾರಕಿಹೊಳಿ ಮನವಿ ಮಾಡಿದ್ದಾರೆ.

ಅರಭಾವಿ ವಿಧಾನಸಭಾ ಕ್ಷೇತ್ರದ ದುರದುಂಡಿ, ರಾಜಾಪೂರ, ಶಿವಾಪೂರ, ಖಾನಟ್ಟಿ ಹಾಗೂ ಮುನ್ಯಾಳ ಗ್ರಾಮಗಳಲ್ಲಿ ಕಾಂಗ್ರೆಸ್ ಅಭ್ಯರ್ಥಿ ಮೃಣಾಲ್ ಹೆಬ್ಬಾಳ್ಕರ್ ಪರ ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ಜೊತೆಗೂಡಿ ಮತಯಾಚಿಸಿದ ಸಚಿವರು, ಕಾಂಗ್ರೆಸ್ ಪಕ್ಷದಿಂದ ಮಾತ್ರ ಬಡವರ ಏಳಿಗೆ ಎಂದು ಹೇಳಿದರು

ಗೃಹಲಕ್ಷ್ಮಿ, ಶಕ್ತಿ ಯೋಜನೆ, ಗೃಹ ಜ್ಯೋತಿ, ಅನ್ನಭಾಗ್ಯ ಯೋಜನೆಗಳನ್ನು ಜಾರಿಗೆ ತರುವ ಮೂಲಕ ಮಹಿಳೆಯ–ರಿಗೆ ಸಿದ್ದರಾಮಯ್ಯ ಸಹಾಯ ಹಸ್ತ ಚಾಚಿದ್ದಾರೆ. ಮತಗಳ ಮೂಲಕ ಸರ್ಕಾರವನ್ನು ಬೆಂಬಲಿಸಬೇಕು. ಸರ್ಕಾರ ಎಲ್ಲರ ಪರವಾಗಿ ಕೆಲಸ ಮಾಡುತ್ತಿದ್ದು, ಕಾರ್ಮಿಕರಿಗೆ, ರೈತರಿಗೆ, ದಲಿತರಿಗೆ ಉತ್ತಮ ಅನುಕೂಲ ಮಾಡಿಕೊಟ್ಟಿದೆ ಎಂದು ಸಚಿವರು ಹೇಳಿದರು.



ಕಾಂಗ್ರೆಸ್ ಅಭ್ಯರ್ಥಿ ಮೃಣಾಲ್ ಹೆಬ್ಬಾಳ್ಕರ್ ಯುವಕರಿದ್ದು ಅವರಿಗೊಂದು ಅವಕಾಶ ಮಾಡಿಕೊಡಿ.

ಎಲ್ಲರನ್ನೂ ಒಟ್ಟಿಗೆ ಕರೆದುಕೊಂಡು ಹೋಗುವ ಪಕ್ಷ ಕಾಂಗ್ರೆಸ್ ಪಕ್ಷದ ಹು–ರಿಯಾಳುಗಳಾದ ಚಿಕ್ಕೋಡಿಯಲ್ಲಿ ಪ್ರಿಯಾಂಕಾ, ಬೆಳಗಾವಿಯಲ್ಲಿ ಮೃಣಾಲ್ ಅವರನ್ನು ಗೆಲ್ಲಿಸಿ. ಯುವಕರನ್ನು ಗೆಲ್ಲಿಸುವ ಮೂಲಕ ಇತಿಹಾಸ ನಿರ್ಮಿಸುವ ಅವಕಾಶವಿದೆ. ಅರಭಾವಿ ಭಾಗದಲ್ಲಿ ಬಾಕಿ ಉಳಿದಿರುವ ನೀರಾವರಿ ಯೋಜನೆಗಳನ್ನು ಶೀಘ್ರವೇ ಮುಕ್ತಾಯಗೊಳಿಸುವುದಾಗಿ ಸಚಿವ ಸತೀಶ್ ಜಾರಕಿಹೊಳಿ ಭರವಸೆ ನೀಡಿದರು.

**ಬಿಜೆಪಿಗೆ ತಕ್ಕ ಪಾಠ ಕಲಿಸಿ:**

ಈ ವೇಳೆ ಮಾತನಾಡಿದ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್, ಬೆಳಗಾವಿ ಜಿಲ್ಲೆಯಲ್ಲಿ ಕಾಂಗ್ರೆಸ್ ಅಭ್ಯರ್ಥಿಗಳನ್ನು ಗೆಲ್ಲಿಸುವ ಮೂಲಕ ಬಿಜೆಪಿಗೆ ತಕ್ಕ ಪಾಠವನ್ನು ಕಲಿಸಬೇಕು. ಕಳೆದ 10 ವರ್ಷಗಳಿಂದ ಸುಳ್ಳುಗಳನ್ನೆ ಬಂಡವಾಳ ಮಾಡಿಕೊಂಡಿರುವ ಬಿಜೆಪಿಗೆ ಈ ಸೋಲು ಗ್ಯಾರಂಟಿ ಎಂದು ಹೇಳಿದರು.

ನಾವು ಕೊಟ್ಟ ಮಾತನ್ನು ಉಳಿಸಿಕೊಂಡಿದ್ದೇವೆ. ಯಾವುದೇ ಮಧ್ಯವರ್ತಿಗಳ ಹಾವಳಿ ಇಲ್ಲದೆ ಪಂಚ ಗ್ಯಾರಂಟಿ ಯೋಜನೆಗಳು ಜನ–ರಿಗೆ ತಲುಪುತ್ತಿವೆ. ಲೋಕಸಭೆ ಚುನಾವಣೆ ಮುಗಿದ ಮೇಲೂ ಗ್ಯಾರಂಟಿ ಯೋಜನೆಗಳು ನಿಲ್ಲುವುದಿಲ್ಲ.




ಈ ಯೋಜನೆಗಳು ನಿರಂತರವಾಗಿ ಸಾಗಲಿವೆ. ಯೋಜನೆಗಳ ವಿರುದ್ಧ ಬಿಜೆಪಿಗರು ಸುಳ್ಳು ಪ್ರಚಾರ ಮಾಡುತ್ತಿದ್ದಾರೆ ಎಂದು ಸಚಿವರು ಆರೋಪಿಸಿದರು.

ನಿಮ್ಮೆಲ್ಲರ ಸೇವೆ ಮಾಡಲು ಮೃಣಾಲ್ ಬಂದಿದ್ದಾನೆ. ಮನೆ ಬಾಗಿಲಿಗೆ ಬಂದು ಸೇವೆ ಮಾಡುತ್ತಾನೆ, ಮೃಣಾಲ್ ಹೆಬ್ಬಾಳ್ಕರ್ ಅವ್ರಿಗೆ ನಿಮ್ಮ ಮತ ನೀಡಿ, ಜನ ಸೇವೆಗೆ ಅವಕಾಶ ಮಾಡಿಕೊಡಬೇಕು. ಇದಕ್ಕೆ ಎಲ್ಲರೂ ಸಹಕಾರ ನೀಡಬೇಕು ಎಂದು ಹೇಳಿದರು.

ಈ ವೇಳೆ ಮುಖಂಡರಾದ ಅರವಿಂದ್ ದಳವಾಯಿ, ಸೊನವಾಲಕರ, ಭೀಮಪ್ಪ ಹಂದಿಗುಂದ್, ಸುರೇಶ್ ಮಗದುಮ್ಮ, ರಮೇಶ್ ಉಟಗಿ, ಅಶೋಕ್ ದಳವಾಯಿ, ಪ್ರಕಾಶ್ ಅರಳಿ, ಭರಮಣ್ಣ ಉಪ್ಪಾರ್, ಕಲ್ಲಪ್ಪ ಗೌಡ ಲಕ್ಕಾರ, ಲಕ್ಕಣ್ಣ ಸವಸುದ್ದಿ, ಬಸವರಾಜ ಬೆಳಕೋಡ ಸೇರಿದಂತೆ ಹಲವು ಮುಖಂಡರು ಉಪಸ್ಥಿತರಿದ್ದರು.

## ಅಪ್ಪ ಮಕ್ಕಳ ಕುತಂತ್ರದಿಂದ ಬಿಜೆಪಿಯಿಂದ ನನ್ನ ಉಚ್ಚಾಟನೆ: ಕೆ.ಎಸ್. ಈಶ್ವರಪ್ಪ ಆಕ್ರೋಶ

ಶಿವಮೊಗ್ಗ: ಅಪ್ಪ–ಮಕ್ಕಳ ಕುತಂತ್ರದಿಂದ ನನ್ನನ್ನು ಬಿಜೆಪಿಯಿಂದ ಉಚ್ಚಾಟನೆ ಮಾಡಲಾಗಿದೆ. ಆದರೆ ಇದು ತಾತ್ಕಾಲಿಕ. ಲೋಕಸಭೆ ಚುನಾವಣೆಯಲ್ಲಿ ಗೆದ್ದು ಮತ್ತೆ ಬಿಜೆಪಿ ಸೇರುತ್ತೇನೆ' ಎಂದು ಶಿವಮೊಗ್ಗ ಕ್ಷೇತ್ರದ ಪಕ್ಷೇತರ ಅಭ್ಯರ್ಥಿ ಕೆ. ಎಸ್.ಈಶ್ವರಪ್ಪ ಶಪಥ ಮಾಡಿದರು.



ಎಳಸು ರಾಜ್ಯ ಘಟಕದ ಅಧ್ಯಕ್ಷ ವಿಜಯೇಂದ್ರ ಅವರು ತಮ್ಮ ಅಪ್ಪನ (ಯಡಿಯೂರಪ್ಪ) ಮಾತು ಕೇಳಿ ಉಚ್ಚಾಟನೆ ಮಾಡಿದ್ದಾರೆ. ಇದು ಪಕ್ಷದ ಕಾರ್ಯಕರ್ತರಿಗೆ ಬಹಳ ನೋವುಂಟು ಮಾಡಿದೆ.

ಬಿಜೆಪಿ ಕಟ್ಟಿದ ನಿಮಗೆ ಹೀಗಾಗಬಾರದಿತ್ತು ಎಂದು ಅವರು ನನಗೆ ಹೇಳುತ್ತಿದ್ದಾರೆ. ಬಿಜೆಪಿಗೆ ವಿಜಯೇಂದ್ರನ ಕೊಡುಗೆ ಶೂನ್ಯವೆಂದು ಬಿಜೆಪಿಯ ನಿಷ್ಠಾವಂತ ಕಾರ್ಯಕರ್ತರು ಹೇಳುತ್ತಿದ್ದಾರೆ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಯಡಿಯೂರಪ್ಪ ಅವರು ಡೂಪ್ಲಿಕೇಟ್ ಬಿಜೆಪಿ ಕಾರ್ಯಕರ್ತ. ಅವರು ಕೆಜೆಪಿಗೆ ಹೋಗಿ ಬಂದಿದ್ದಾರೆ. ರಾಘವೇಂದ್ರ ಸೋತ ಬಳಿಕ ಒಂದು ಸಮಸ್ಯೆ ನಿವಾರಣೆ ಆಗಲಿದೆ. ಲೋಕಸಭೆ ಚುನಾವಣೆ ಬಳಿಕ ವಿಜಯೇಂದ್ರ ರಾಜ್ಯ ಘಟಕದ ಅಧ್ಯಕ್ಷ ಸ್ಥಾನಕ್ಕೆ ರಾಜೀನಾಮೆ ನೀಡಲಿದ್ದಾರೆ. ಇದರಿಂದ ಇನ್ನೊಂದು ಸಮಸ್ಯೆ ನಿವಾರಣೆ ಆದಂತಾಗಲಿದೆ. ನಾನು ಶಿವಮೊಗ್ಗ ಕ್ಷೇತ್ರದಲ್ಲಿ ಗೆದ್ದ ಕೂಡಲೇ ವಿಜಯೇಂದ್ರನ ಅಪ್ಪ ಯಡಿಯೂರಪ್ಪ ಬಂದು ಅವರೇ ಬಿಜೆಪಿಗೆ ಕರೆದುಕೊಂಡು ಹೋಗಲಿದ್ದಾರೆ ಎಂದರು.

ಪಕ್ಷೇತರ ಅಭ್ಯರ್ಥಿ ಆಗಿ ಎರಡು ಕಬ್ಬು ಹಿಡಿದಿರುವ ರೈತನ ಚಿಹ್ನೆ ನನಗೆ ಸಿಕ್ಕಿದೆ ಎಂದರು.

ಬಿಜೆಪಿಯಿಂದ ಉಚ್ಚಾಟನೆ ಮಾಡಿದ್ದಾರೆ ಎಂದು ಕಾಂಗ್ರೆಸ್ ಪಕ್ಷವನ್ನು ಸೇರುವುದಿಲ್ಲ. ಅದು ಈ ಜನುಮದಲ್ಲಿ ಸಾಧ್ಯವಿಲ್ಲ. ಬಿಜೆಪಿಯಿಂದ ಹೊರಗೆ ಬಂದಿದ್ದರೂ ಹಿಂದುತ್ವವಾದಿ ಕಾರ್ಯಕರ್ತರು ದೊಡ್ಡ ಸಂಖ್ಯೆಯ ಬಲವೇ ನನಗಿದೆ ಎಂದರು.

## ಲೋಕಸಭೆ ಚುನಾವಣೆ: ಏಪ್ರಿಲ್ 28ರಂದು ಬೆಳಗಾವಿಗೆ ನರೇಂದ್ರ ಮೋದಿ

ಬೆಳಗಾವಿ: 'ಪ್ರಧಾನಿ ನರೇಂದ್ರ ಮೋದಿ ಏಪ್ರಿಲ್ 28ರಂದು ಬೆಳಗಾವಿಗೆ ಆಗಮಿಸಲಿದ್ದು, ಬಿ.ಎಸ್.ಯಡಿಯೂರಪ್ಪ ಮಾರ್ಗದ ಮಾಲಿನಿ ಸಿಟಿಯಲ್ಲಿ ಮಧ್ಯಾಹ್ನ 12ಕ್ಕೆ ನಡೆಯಲಿರುವ ಬೆಳಗಾವಿ ಮತ್ತು ಚಿಕ್ಕೋಡಿ ಲೋಕಸಭೆ ಕ್ಷೇತ್ರದ ಬಿಜೆಪಿ ಅಭ್ಯರ್ಥಿಗಳ ಪ್ರಚಾರ ಸಭೆಯಲ್ಲಿ ಮಾತನಾಡುವರು' ಎಂದು ಬಿಜೆಪಿ ರಾಜ್ಯ ಘಟಕದ ಉಪಾಧ್ಯಕ್ಷ ಅನಿಲ ಬೆನಕೆ ತಿಳಿಸಿದರು.



ಮಂಗಳವಾರ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, 'ಅಂದು ಬೆಳಿಗ್ಗೆ 11.30ಕ್ಕೆ ಸಾಂಬ್ರಾ ವಿಮಾನ ನಿಲ್ದಾಣಕ್ಕೆ ಬಂದಿಳಿದು, ಕಾರ್ಯಕ್ರಮ ವೇದಿಕೆಗೆ ಮೋದಿ ಆಗಮಿಸುವರು. ನಂತರ ಬಿಜೆಪಿ ಕಾರ್ಯಕರ್ತರು ಹಾಗೂ ಬೆಂಬಲಿಗರನ್ನು ಉದ್ದೇಶಿಸಿ ಮಾತನಾಡುವರು. ಪಕ್ಷದ ರಾಜ್ಯ ಘಟಕದ ಉಪಾಧ್ಯಕ್ಷ ಬಿ.ವೈ.ವಿ–ಜಯೇಂದ್ರ, ಸಂಸದೀಯ ಮಂಡಳಿ ಸದಸ್ಯ ಬಿ.ಎಸ್.ಯಡಿಯೂರಪ್ಪ, ಶಾಸಕರು ಮತ್ತು ಮಾಜಿ ಶಾಸಕರೂ ಪಾಲ್ಗೊಳ್ಳುವರು' ಎಂದರು.

'ಹಿಂದಿನ ವೇಳಾಪಟ್ಟಿ ಪ್ರಕಾರ, ಏ.28ರಂದು ಸಂಜೆ 6ಕ್ಕೆ ಮೋದಿ ಪ್ರಚಾರ ಸಭೆ ನಿಗದಿಯಾಗಿತ್ತು. ಪರಿಷ್ಕೃತ ವೇಳಾಪಟ್ಟಿಯಂತೆ ಈಗ ಅಂದು ಮಧ್ಯಾಹ್ನವೇ ಪ್ರಚಾರ ಸಭೆಯಲ್ಲಿ ಭಾಗವಹಿಸುವರು. ಸಭೆಗಾಗಿ ಈಗ ಆಯ್ಕೆ ಮಾಡಿದ ಸ್ಥಳ ಜನರ ಅನುಕೂಲತೆ ದೃಷ್ಟಿಯಿಂದ ಉತ್ತಮವಾಗಿದೆ. ಹಿಂದಿನ ವರ್ಷ ಇದೇ ಸ್ಥಳದಲ್ಲಿ ನಡೆದ ವಿಧಾನಸಭೆ ಚುನಾವಣೆ ಪ್ರಚಾರ ಸಭೆಯಲ್ಲೂ ಅವರು ಪಾಲ್ಗೊಂಡಿದ್ದರು' ಎಂದರು.

ರಾಮದುರ್ಗದಲ್ಲಿ ಜಗದೀಶ ಶೆಟ್ಟರ್ ಅವ–ರಿಗೆ ಪ್ರಚಾರ ಮಾಡಲು ಮುಖಂಡ ಚಿಕ್ಕರೇವಣ್ಣ ಅವರ ಬೆಂಬಲಿಗರು ಅವಕಾಶ ನೀಡದಿರುವ ಬಗ್ಗೆ ಪ್ರತಿಕ್ರಿಯಿಸಿದ ಬೆನಕೆ, 'ಚಿಕ್ಕರೇವಣ್ಣ ಅವರ ಕೆಲವೇ ಬೆಂಬಲಿಗರು ಈ ರೀತಿ ಮಾಡಿದ್ದಾರೆಯೇ ಹೊರತು, ಎಲ್ಲ ಬೆಂಬಲಿಗರೂ ಅಲ್ಲ. ಮಾಜಿ ಶಾಸಕ ಮಹಾದೇವಪ್ಪ ಯಾದವಾಡ ಮತ್ತು ಚಿಕ್ಕರೇವಣ್ಣ ಇಬ್ಬರೂ ಶೆಟ್ಟರ್ ಪರ ಪ್ರಚಾರ ಮಾಡುತ್ತಿದ್ದಾರೆ' ಎಂದರು.

ಎಂ.ಬಿ.ಝಿರಲಿ, ಸಂಜಯ ಪಾಟೀಲ, ಸುಭಾಷ ಪಾಟೀಲ ಇತರರಿದ್ದರು.


## ಕೈ ಅಭ್ಯರ್ಥಿ ಪ್ರಿಯಂಕಾ ಜಾರಕಿಹೊಳಿ ಗೆಲುವು ನಿಶ್ಚಿತ

ಬೆಳಗಾವಿ: ಚಿಕ್ಕೋಡಿ ಲೋಕಸಭಾ ಕಾಂಗ್ರೆಸ್ ಅಭ್ಯರ್ಥಿ ಕುಮಾರಿ ಪ್ರಿಯಂಕಾ ಜಾರಕಿಹೊಳಿ ಯವರನ್ನು ಹೆಚ್ಚಿನ ಮತಗಳ ಅಂತರದಿಂದ ಗೆಲ್ಲಿಸುವ ನಿಟ್ಟಿನಲ್ಲಿ, ರಾಜ್ಯದಲ್ಲಿ ಕಾಂಗ್ರೆಸ್ ಪಕ್ಷದ 20 ಸ್ಥಾನಗಳಲ್ಲಿ ಲೋಕಸಭಾ ಅಭ್ಯರ್ಥಿಗಳ ಗೆಲುವು ನಿಶ್ಚಿತ ಶಾಸಕ ಲಕ್ಷ್ಮಣ ಸವದಿ ಭವಿಷ್ಯ ನುಡಿದರು.



ಅಥಣಿ ಪಟ್ಟಣದ ಸೋಶಿಯಲ್ ಸ್ಪೋರ್ಟ್ಸ್ ಕ್ಲಬ್ ಆವರಣದಲ್ಲಿ ಕಾಂಗ್ರೆಸ್ ಪಕ್ಷದ ಅಧಿಕೃತ ಅಭ್ಯರ್ಥಿಯಾದ ಪ್ರಿಯಂಕಾ ಜಾರಕಿಹೊಳಿ ಅವರ ಪರ ಪ್ರಚಾರದ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಕೇಂದ್ರದ ಬಿಜೆಪಿ ಸರ್ಕಾರ ಚುನಾವಣೆ ಬಂದಾಗ ಮಾತ್ರ ಪ್ರಣಾಳಿಕೆಯನ್ನು ಬಿಡುಗಡೆ ಮಾಡಿ ಜನರ ದಿಕ್ಕ ತಪ್ಪಿಸುವಂತಹ ಕೆಲಸ ಮಾಡುತ್ತಾ ಬಂದಿದೆ. ಕಾರ್ಯಕರ್ತರು ಬಿಜೆಪಿಯ ಸುಳ್ಳು ಭರವಸೆಗಳಿಗೆ ಮೋಸ ಹೋಗದೆ. ಚಿಕ್ಕೋಡಿ ಲೋಕಸಭಾ ಕಾಂಗ್ರೆಸ್ ಅಭ್ಯರ್ಥಿ ಕುಮಾರಿ ಪ್ರಿಯಂಕಾ ಜಾರಕಿಹೊಳಿ ಯವರನ್ನು ಹೆಚ್ಚಿನ ಮತಗಳ ಅಂತರದಿಂದ ಗೆಲ್ಲಿಸುವ ನಿಟ್ಟಿನಲ್ಲಿ, ರಾಜ್ಯದಲ್ಲಿ ಕಾಂಗ್ರೆಸ್ ಪಕ್ಷದ 20 ಸ್ಥಾನಗಳಲ್ಲಿ ಲೋಕಸಭಾ ಅಭ್ಯರ್ಥಿಗಳ ಗೆಲುವು ನಿಶ್ಚಿತ ಶಾಸಕ ಲಕ್ಷ್ಮಣ ಸವದಿ ಭವಿಷ್ಯ ನುಡಿದರು. ಇದೆ ಸಮಯದಲ್ಲಿ ಚಿದಾನಂದ ಸವದಿ,ಸದಾಶಿವ ಬುಟಾಳಿ, ಮಹಾಂತೇಶ ಠಕ್ಕನ್ನವರ ಶಿವಾನಂದ ದಿವಾನಮಾಳ,ಶಿವು ಗುಡ್ಡಾಪೂರ, ಅಸ್ಲಂ ನಾಲಬಂದ, ಸುರೇಶ ಮಾಯಣ್ಣವರ,ಅಮೋಘ ಕೊಬ್ರಿ,ಸಿದ್ದಾರ್ಥ ಶಿಂಗೆ, ನ್ಯಾಯವಾದ ಕಲ್ಲಪ್ಪ ವಣಜೋಳ, ಸುಶೀಲಕುಮಾರ ಪತ್ತಾರ ಶ್ಯಾಮ ಪೂಜಾ–ರಿ,ರೇಖಾ ಪಾಟೀಲ,ಹಾಗೂ ಕಾಂಗ್ರೆಸ್ ಮುಖಂಡರು, ಪದಾಧಿಕಾರಿಗಳು, ಪುರಸಭೆ ಸದಸ್ಯರು, ಕಾರ್ಯಕರ್ತರು, ಅಭಿಮಾನಿಗಳು, ಅನೇಕರು ಉಪಸ್ಥಿತ–ರಿದ್ದರು.

## ಆರೋಗ್ಯದಲ್ಲಿ ಏರುಪೇರು



ಬೆಂಗಳೂರು: ಚಾಮರಾಜನಗರ ಕ್ಷೇತ್ರದ ಬಿಜೆಪಿ ಸಂಸದ ವಿ.ಶ್ರೀನಿವಾಸ್ ಪ್ರಸಾದ್ ಆರೋಗ್ಯದಲ್ಲಿ ಏರುಪೇರಾಗಿದ್ದು, ಬೆಂಗಳೂರಿನ ಖಾಸಗಿಆಸ್ಪತ್ರೆಗೆ ದಾಖಲಿಸಿ ಚಿಕಿತ್ಸೆ ನೀಡಲಾಗುತ್ತಿದೆ. ಶ್ರೀನಿವಾಸ್ ಪ್ರಸಾದ್ ಕಾಲಿನಲ್ಲಿ ಗಾಯ ಉಲ್ಬಣಗೊಂಡ ಕಾರಣ ಅವರನ್ನು ಬೆಂಗಳೂರಿನ ಮಣಿಪಾಲ್ ಆಸ್ಪತ್ರೆಗೆ ದಾಖಲಿಸಲಾಗಿದ್ದು. ಸದ್ಯ ಐಸಿಯು ವೆಂಟಿಲೇಟರ್‌ನಲ್ಲಿ ಚಿಕಿತ್ಸೆ ನೀಡಲಾಗುತ್ತಿದೆ. ಇನ್ನೆರಡು ದಿನಗಳು ಐಸಿಯುನಲ್ಲೇ ಚಿಕಿತ್ಸೆ ನೀಡಲಾಗುತ್ತದೆ. ನಂತರ ವಾರ್ಡ್‌ಗೆ ಶಿಫ್ಟ್ ಮಾಡಲಾಗುವುದು ಎಂದು ಆಸ್ಪತ್ರೆಯ ವೈದ್ಯರು ಮಾಹಿತಿ ನೀಡಿದ್ದಾರೆ. ನಿವಾಸ್ ಪ್ರಸಾದ್ ಇತ್ತೀಚೆಗಷ್ಟೇ ಚುನಾವಣಾ ರಾಜ–ಕೀಯದಿಂದ ನಿವೃತ್ತಿ ಘೋಷಿಸಿದ್ದಾರೆ. ಈ ನಡುವೆ ಶ್ರೀನಿವಾಸ್ ಪ್ರಸಾದ್ರನ್ನು ಇತ್ತೀಚೆಗೆ ಭೇಟಿಯಾಗಿ ಮಾತುಕತೆ ನಡೆಸಿದ್ದು, ರಾಜಕೀಯ ವಲಯದಲ್ಲಿ ತೀವ್ರ ಕುತೂಹಲಕ್ಕೆ ಕಾರಣವಾಗಿತ್ತು.

## ಗೃಹಲಕ್ಷ್ಮಿ ಫಲಾನುಭವಿಗಳಿಂದ ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ಗೆ ಅಭಯ

ಗೋಕಾಕ್: ಗೃಹಲಕ್ಷ್ಮಿ ಯೋಜನೆಯಿಂದ ನಮಗೆ ಎರಡು ಸಾವಿರ ರೂಪಾಯಿ ಬರ್ತಾಯಿದೆ. ಅದರಿಂದ ನಮ್ ಮನೆಯ ಎಷ್ಟೋ ಖರ್ಚು ನಿಭಾಯಿಸುತ್ತಿದ್ದೇವೆ. ನಿಮ್ಮ ಸಹಾಯಾನ ನಾವ್ ಮರೆಯೋದ್ ಹೆಂಗ.. ನಿಮ್ಮ ಹೆಸರು ಹೇಳಿ ಊಟಾ ಮಾಡ್ತಾ ಇದ್ದೇವೆ– ಇದು ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ಕಂಡು ಮಹಿಳೆಯರ ಗುಂಪೊಂದು ಹೇಳಿದ ಮಾತು.



ಹನುಮಾನ್ ಜಯಂತಿ ಹಿನ್ನೆಲೆಯಲ್ಲಿ ಗೋಕಾಕ್ ತಾಲೂಕಿನ ಸುಲಧಾಳ ಗ್ರಾಮದಲ್ಲಿರುವ ಹನುಮ ದೇವಾಲಯಕ್ಕೆ ಭೇಟಿ ನೀಡಿ ವಿಶೇಷ ಪೂಜೆ ಸಲ್ಲಿಸಿ ಸಚಿವರು ಹೊರಟಿದ್ದರು. ಆ ವೇಳೆ ಸುಲಧಾಳ ಗ್ರಾಮದ ಮಹಿಳೆಯರು ಸಚಿವರ ಬಳಿ ಬಂದರು. ಕಾರು ನಿಲ್ಲಿಸಿ ಲಕ್ಷ್ಮೀ ಹೆಬ್ಬಾಳಕರ್ ಮಾತನಾಡಿಸಿದರು. ಕ್ಷಣಾರ್ಧದಲ್ಲೆ ಸಚಿವರನ್ನು ಮಹಿಳೆಯರು ಮುತ್ತಿಕೊಂಡರು. ಬಳಿಕ ನಾನ್ಯಾರು ಎಂದ ಸಚಿವರು ಕೇಳಿದ್ದಕ್ಕೆ, ನಮಗೆ ಗೊತ್ತಿಲ್ವ. ನಮಗೆ ಎರಡು ಸಾವಿರ ರೂಪಾಯಿ ಹಾಕುವ ಮಿನಿಸ್ಟರ್ ಮೇಡಂ ನೀವೆ. ನಿಮ್ಮಿಂದ ನಮಗೆ ತುಂಬಾ ಸಹಾಯ ಆಗಿದೆ. ನಿಮ್ಮ ಮಗನಿಗೆ ನಮ್ಮ ಮತ ಎಂದು ಭರವಸೆ ನೀಡಿದರು. ಬಡ ಬಗ್ಗ–ರಿಗೆ ನಿಮ್ಮಿಂದ ಸಹಾಯ ಆಗಿದೆ. ನಿಮ್ ಹೆಸರು ಹೇಳಿಕೊಂಡು ನಾವೆಲ್ಲಾ ಅನ್ನ ತಿನ್ನುತ್ತಿದ್ದೇವೆ. ನಿಮಗೆ ವೋಟ್ ಹಾಕ್ತೀವ್ರಿ, ನಿಮ್ ಮಗ ಗೆಲ್ಲೋದ್ ಪಕ್ಕಾ ರೀ ಎಂದು ಮಹಿಳೆಯರು ಹೇಳಿದರು.

# ಚುನಾವಣೆ ಬಂದಾಗಷ್ಟೇ ಪ್ರಧಾನಿ ಮೋದಿಗೆ ಕರ್ನಾಟಕ ನೆನಪು: ಸಿಎಂ ಸಿದ್ದರಾಮಯ್ಯ

ಚಿತ್ರದುರ್ಗ: ಚುನಾವಣೆ ಸಂದರ್ಭದಲ್ಲಿ ಮಾತ್ರ ಪ್ರಧಾನಿ ನರೇಂದ್ರ ಮೋದಿಗೆ ಕರ್ನಾಟಕ ನೆನಪಾಗುತ್ತದೆ. ಕರ್ನಾಟಕ ರಾಜ್ಯ ಭೀಕರ ಬರಗಾಲವನ್ನು ಎದು–ರಿಸುತ್ತಿದೆ. ಪ್ರವಾಹ ಬಂದಾಗ, ಬರಗಾಲ ಬಂದಾಗ ರಾಜ್ಯಕ್ಕೆ ಬಂದು ಜನರ ಕಷ್ಟ ಕೇಳಲಿಲ್ಲ. ಈಗ ಮತ ಕೇಳಲು ನರೇಂದ್ರ ಮೋದಿ, ಅಮಿತ್ ಶಾ ಬಂದಿದ್ದಾರೆ. ಕರ್ನಾಟಕದಲ್ಲಿ ಮೋದಿ ಅಲೆಯಿಲ್ಲ. ಏಕೆಂದರೆ ಅವರ ಸುಳ್ಳು ಜನರಿಗೆ ಅರ್ಥ–ವಾಗಿದೆ. ಕರ್ನಾಟಕದಲ್ಲಿ ಗ್ಯಾರಂಟಿಗಳ ಅಲೆಯಿದೆ. ಅಲ್ಲದೆ, ಪ್ರಧಾನಿ ನರೇಂದ್ರ ಮೋದಿ ಮತ್ತು ಮಾಜಿ ಪ್ರಧಾನಿ ಎಚ್.ಡಿ. ದೇವೇಗೌಡ ಅವರು ಹಸೀ ಸುಳ್ಳು ಹೇಳಿದ್ದಾರೆ ಎಂದು ಸಿಎಂ ಸಿದ್ದರಾಮಯ್ಯ ಹೇಳಿದರು.

ಚಿತ್ರದುರ್ಗದಲ್ಲಿ ನಡೆದ ಕಾಂಗ್ರೆಸ್ ನ್ಯಾಯ ಸಂಕಲ್ಪ ಸಮಾವೇಶದಲ್ಲಿ ಮಾತನಾಡಿದ ಸಿಎಂ ಸಿದ್ದರಾಮಯ್ಯ, ಕಳೆದ ಹತ್ತು ವರ್ಷಗಳಿಂದ ಕೇಂದ್ರದಲ್ಲಿ ಬಿಜೆಪಿ ಅಧಿಕಾರ ಹೊಂದಿದೆ. ನರೇಂದ್ರ ಮೋದಿ ಪ್ರಧಾನಮಂತ್ರಿ ಆಗಿದ್ದಾರೆ. ಹತ್ತು ವರ್ಷಗಳಲ್ಲಿ ದಲಿತರು, ಹಿಂದುಳಿದವರು, ಮಹಿಳೆಯರು, ಬಡವರ ಪರವಾಗಿ ಅವರು ಏನೂ ಮಾಡಿಲ್ಲ. ಆರ್ಥಿಕ ಶಕ್ತಿ ತುಂಬುವಲ್ಲಿ ವಿಫಲರಾಗಿದ್ದಾರೆ. 2014ರಲ್ಲಿ ಮೋದಿಯವರು ಅನೇಕ ಭರವಸೆ ಕೊಟ್ಟಿದ್ದರು. ಆದರೆ ಯಾವುದನ್ನೂ ಈಡೇರಿಸಿಲ್ಲ ಎಂದು ಸಿಎಂ ಸಿದ್ದರಾಮಯ್ಯ ಕಿಡಿಕಾರಿದರು.



ಈ ಲೋಕಸಭಾ ಚುನಾವಣೆಯಲ್ಲಿ ಪ್ರಧಾನಿ ನರೇಂದ್ರ ಮೋದಿ ಮತ್ತು ಮಾಜಿ ಪ್ರಧಾನಿ ಎಚ್.ಡಿ. ದೇವೇಗೌಡರು ಒಂದಾಗಿದ್ದಾರೆ. ಸೋಲುವ ಭಯದಿಂದ ಈ ಇಬ್ಬರೂ ಒಂದಾಗಿದ್ದಾರೆ. ಸ್ವತಂತ್ರವಾಗಿ ಸ್ಪರ್ಧೆ ಮಾಡಿದರೆ ಸೋಲುತ್ತೇವೆ ಎಂದು ಅಪವಿತ್ರ ಮೈತ್ರಿ ಮಾಡಿಕೊಂಡಿದ್ದಾರೆ ಎಂದು ಸಿಎಂ ಸಿದ್ದರಾಮಯ್ಯ ಕಿಡಿಕಾ–ರಿದರು.

ಪೈಪೋಟಿ ಮೇಲೆ ಸುಳ್ಳು: ಈ ಮೊದಲು ನರೇಂದ್ರ ಮೋದಿ ಪ್ರಧಾನಿಯಾದರೆ ದೇಶ ಬಿಟ್ಟು ಹೋಗುತ್ತೇನೆ, ಮುಂದಿನ ಜನ್ಮದಲ್ಲಿ ಮುಸ್ಲಿಂ ಆಗಿ ಹುಟ್ಟುತ್ತೇನೆ ಎಂದು ಮಾಜಿ ಪ್ರಧಾನಿ ಎಚ್.ಡಿ. ದೇವೇಗೌಡ ಅವರು ಹೇಳಿದ್ದರು.

ಆದರೆ ಈಗ ಕೋಮುವಾದಿ ಬಿಜೆಪಿ ಪಕ್ಷದ ಜತೆಗೆ ಸೇರಿಕೊಂಡಿದ್ದಾರೆ. ಮನಮೋಹನ್ ಸಿಂಗ್ ಖಾಲಿ ಚೊಂಬು ಕೊಟ್ಟಿದ್ದರು, ಮೋದಿ ಅದನ್ನು ಅಕ್ಷಯ ಪಾತ್ರೆ ಮಾಡಿಟ್ಟಿದಾರೆ. ಮೋದಿ, ದೇವೇಗೌಡರು ಪೈಪೋಟಿ ಮೇಲೆ ಸುಳ್ಳು ಹೇಳುತ್ತಿದ್ದಾರೆ. ಹಸಿ ಸುಳ್ಳುಗಳನ್ನು ಹೇಳುತ್ತಿದ್ದಾರೆ ಎಂದು ಸಿಎಂ ಸಿದ್ದರಾಮಯ್ಯ ಆರೋಪಿಸಿದರು.

ಮೋದಿಗೆ ರೈತರ ಸಾಲ ಮನ್ನಾ ಮಾಡಲು ಸಾಧ್ಯವಾಗಲಿಲ್ಲ. ಆದ–ರೆ, ಬಂಡವಾಳಶಾಹಿಗಳ ಸಾಲಮನ್ನಾ ಮಾಡಿದ್ದಾರೆ. ಮೋದಿ ಯಾರ ಪರ ಎಂಬುದನ್ನು ಇದರಿಂದಲೇ ನೀವು ಅರ್ಥ ಮಾಡಿಕೊಳ್ಳಬೇಕು.

ಅಚ್ಛೇ ದಿನ ಆಯೇಗಾ ಅಂ–ದ್ರು ಬಂತಾ? ಡೀಸೆಲ್ ಬೆಲೆಯು ಆಗ ಎಷ್ಟಿತ್ತು? ಈಗ ಎಷ್ಟಾಗಿದೆ? ಅಂದು ಈ ಗ್ಯಾಸ್ ಬೆಲೆ, ಪೆಟ್ರೋಲ್ ಬೆಲೆ ಎಷ್ಟಿತ್ತು? ಇಂದು ಎಷ್ಟಾಗಿದೆ? ಅಚ್ಛೇ ದಿನ ಬರಲೇ ಇಲ್ಲ. ಕರ್ನಾಟಕಕ್ಕೆ ಮೋದಿಯವರ ಕೊಡುಗೆ ಏನೆಂದರೆ ಚೊಂಬು ಎಂದು ಸಿಎಂ ಸಿದ್ದರಾಮಯ್ಯ ದೂರಿದರು.

ಚುನಾವಣೆ ಬಳಿಕ ಗ್ಯಾರಂಟಿ ಯೋಜನೆಗಳನ್ನು ಸ್ಥಗಿತಗೊಳಿಸುತ್ತಾರೆ ಎಂದು ಬಿಜೆಪಿಯವರು ಪ್ರಚಾರ ಮಾಡುತ್ತಿದ್ದಾರೆ. ನಾವು ಬಿಜೆಪಿಯವರು ಅಲ್ಲ, 2028ರವರೆಗೆ ನಮಗೆ ಆಶೀರ್ವಾದ ಮಾಡಿದ್ದಾರೆ. ಅಲ್ಲಿಯವರೆಗೆ ಗ್ಯಾರಂಟಿ ಯೋಜನೆಗಳನ್ನು ಮುಂದುವ–ರಿಸುತ್ತೇವೆ. ಯಾವುದೇ ಕಾರಣಕ್ಕೂ ಗ್ಯಾರಂಟಿ ನಿಲ್ಲಿಸುವುದಿಲ್ಲ ಎಂದು ಸಿಎಂ ಸಿದ್ದರಾಮಯ್ಯ ಭರವಸೆ ನೀಡಿದರು. ಇದೇ ಏಪ್ರಿಲ್ 26ರಂದು ಕರ್ನಾಟಕದಲ್ಲಿ ಮೊದಲ ಹಂತದ ಚುನಾವಣೆ ನಡೆಯುತ್ತಿದೆ. ನೀವು ಎಲ್ಲರೂ ಕಾಂಗ್ರೆಸ್ ಅಭ್ಯರ್ಥಿಯನ್ನು ಹೆಚ್ಚು ಬಹುಮತದಿಂದ ಗೆಲ್ಲಿಸಿಕೊಡಬೇಕು ಎಂದು ಸಿಎಂ ಸಿದ್ದರಾಮಯ್ಯ ಮನವಿ ಮಾಡಿದರು.

# ಬಿಜೆಪಿ ಅಧಿಕಾರದಲ್ಲಿದ್ದ ರಾಜ್ಯಗಳಿಗೆ ಮಾತ್ರ ಪ್ರಧಾನಿ ಮೋದಿ ಹಣ ನೀಡುತ್ತಾರೆ: ಪ್ರಿಯಾಂಕಾ ಗಾಂಧಿ

ಚಿತ್ರದುರ್ಗ: ಸಿದ್ದರಾಮಯ್ಯ ಬರ ಪರಿಹಾರದ ಬಗ್ಗೆ ಕೇಂದ್ರಕ್ಕೆ ಪತ್ರ ಬರೆದು ಒಂದು ರೂಪಾಯಿ ಕೊಟ್ಟಿಲ್ಲ. ಕಳಸಾ ಬಂಡೂರಿ ಯೋಜನೆ ಬಗ್ಗೆ ಅನುಮತಿ ಕೊಟ್ಟಿಲ್ಲ. ಭದ್ರಾ ಯೋಜನೆಗೆ ಹಣ ಕೊಟ್ಟಿಲ್ಲ. ಕರ್ನಾಟಕಕ್ಕೆ ಯಾಕೆ ಮೋದಿ ಹೀಗೆ ಮಾಡ್ತಿದ್ದಾರೆ..? ಯಾವ ರಾಜ್ಯದಲ್ಲಿ ಅವರಿಗೆ ಅಧಿಕಾರ ಇರೋದಿಲ್ಲವೋ ಅಲ್ಲಿಗೆ ಹಣ ಕೊಡೋದಿಲ್ಲ. ಕೇವಲ ಬಿಜೆಪಿ ರಾಜ್ಯಗಳಿಗೆ ಮಾತ್ರ ಹಣ ಕೊಡ್ತಿದೆ ಎಂದು ಪ್ರಿಯಾಂಕಾ ಗಾಂಧಿ ಆರೋಪ ಮಾಡಿದರು.

ಚಿತ್ರದುರ್ಗದಲ್ಲಿ ಮಂಗಳವಾರ ನಡೆದ ಕಾಂಗ್ರೆಸ್ ಸಮಾವೇಶದಲ್ಲಿ ಮಾತನಾಡಿದ ಅವರು, ನನ್ನ ಅಜ್ಜಿ ಇಂದಿರಾ ಗಾಂಧಿ ಸಹ ಇದೇ ವೇದಿಕೆಯಲ್ಲಿ ನಿಂತು ಮಾತನಾಡಿದ್ದರು. ಈಗ ನಾನು ಅದೇ ವೇದಿಕೆಯಲ್ಲಿ ನಿಂತು ಮಾತನಾಡುತ್ತಿರೋದಕ್ಕೆ ಖುಷಿ ಇದೆ. ನೀವೆಲ್ಲ ಕಷ್ಟ ಜೀವಿಗಳು, ನಿಮ್ಮೆಲ್ಲರ ಕಷ್ಟ ಅರ್ಥವಾಗುತ್ತದೆ. ನಿಮ್ ಕಷ್ಟ ಜೊತೆ ನೀವು ದೇಶ ಬಲಪಡಿಸುವ ಕೆಲಸ ಮಾಡ್ತಿದ್ದೀರಾ. ಆದರೆ, ಮೋದಿ ಕಳಸಾ ಬಂಡೂರಿ ಯೋಜನೆಗೆ ಅನುಮತಿ ಹಾಗೂ ಭದ್ರಾ ಯೋಜನೆಗೆ ಹಣ ಕೊಟ್ಟಿಲ್ಲ. ಕರ್ನಾಟಕಕ್ಕೆ ಅನ್ಯಾಯ ಮಾಡ್ತಿದ್ದಾರೆ. ಯಾವ ರಾಜ್ಯದಲ್ಲಿ ಅವ–ರಿಗೆ ಅಧಿಕಾರ ಇರೋದಿಲ್ಲವೋ ಅಲ್ಲಿಗೆ ಹಣ ಕೊಡೋದಿಲ್ಲ. ಕೇವಲ ಬಿಜೆಪಿ ರಾಜ್ಯಗಳಿಗೆ ಮಾತ್ರ ಹಣ ಕೊಡ್ತಿದ್ದಾರೆ ಎಂದರು.

ರೈತರು ಶ್ರಮ ಪಟ್ಟ ಕಟ್ಟುತ್ತಿರುವ ದೇಶ ಇದು. ಹೊಲದಲ್ಲಿ ಕೆಲಸ ಮಾಡಿ ದೇಶದ ಜನರಿಗೆ ಅನ್ನದಾತರಾಗಿದ್ದೀರಾ. ಈ ದೇಶ ನಿಮ್ದು, ಈ ದೇಶ ಎಲ್ಲರದ್ದೂ. ಈ ದೇಶದ ಬಗ್ಗೆ ಎಲ್ಲರಿಗೂ ಚಿಂತೆ ಇದೆ. ಇವತ್ತು ದೇಶದಲ್ಲಿ ಎಂಥ ಪರಿಸ್ಥಿತಿ ಇದೆ ಅನ್ನೋದ್ರ ಬಗ್ಗೆ ನಾನು ಮಾತನಾಡ್ತೀನಿ. ಈ ದೇಶದಲ್ಲಿ ಎರಡು ಸತ್ಯ ಇದೆ. ಬೆಲೆ ಏರಿಕೆಯಿಂದ ಕಷ್ಟ ಪಡುತ್ತಿದ್ದೀರಾ. ನಿರುದ್ಯೋಗದಿಂದ ಕಷ್ಟ ಪಡುತ್ತಿದ್ದೀರಾ. ಎರಡನೇ ಸತ್ಯದ ಬಗ್ಗೆ ಮಾಧ್ಯಮಗಳಲ್ಲಿ ನೀವು ನೋಡ್ತಾ ಇದೀರಾ. ದೇಶದಲ್ಲಿ ಅತಿ ಹೆಚ್ಚು ಉದ್ಯೋಗ ಸಮಸ್ಯೆ ಇದೆ. ಮೋದಿಯವರು ದೊಡ್ಡ ದೊಡ್ಡ ಮಾತನಾಡಿದ್ರು. ಬೆಲೆ ಏರಿಕೆಯಿಂದ ಸಂಸಾರ ನಡೆಸಲು ಆಗ್ತಿದ್ಯಾ..? ಪೆಟ್ರೋಲ್ ಡಿಸೇಲ್ ಗ್ಯಾಸ್ ಬೆಲೆ ಸಹ ಏರಿಕೆ ಆಗಿದೆ. ಚಿನ್ನ ಬೆಳ್ಳಿ ಸಹ ಆಕಾಶ ಮುಟ್ಟುತ್ತಿದೆ. ನಿಮ್ಮ ಕಷ್ಟಗಳು



ಹಾಗೇ ಮುಂದುವರೆದಿದೆ. ರೈತರಿಗೆ ಕನಿಷ್ಠ ಬೆಂಬಲ ಬೆಲೆ ಸಿಗ್ತಿಲ್ಲ ಎಂದು ಹೇಳಿದರು.

ದೇಶದ ಆಸ್ತಿಯನ್ಮ ಬಂಡವಾಳ ಶಾಯಿಗೆ ಮಾರಲಾಗುತ್ತಿದೆ. ರೈತರ ಸಾಲಮನ್ನ ಮಾಡೋಕೆ ಆಗಲ್ಲಆದ್ರೆ ಬಂಡವಾಳ ಶಾಯಿಗಳ ಸಾಲಮನ್ನ ಮಾಡಿದ್ದಾರೆ. ದೇಶದ ಆಸ್ತಿಯನ್ನ ಅವರ ಸ್ನೇಹಿತ ಬಂಡವಾಳ ಶಾಯಿಗಳಿಗೆ ಮಾರುತ್ತಿದ್ದಾರೆ. ರೈತರು ಸಾಲದಲ್ಲೇ ಮುಳಗಿಹೋಗ್ತಿದ್ದಾರೆ. ವಿಪಕ್ಷಗಳ ಬಾಯಿ ಮುಚ್ಚುತ್ತಿದ್ದಾರೆ. ಕಾಂಗ್ರೆಸ್ ಪಕ್ಷದ ಬ್ಯಾಂಕ್ ಸೀಜ್ ಮಾಡ್ತಾರೆ. ಇಬ್ಬರು ಮುಖ್ಯಮಂತ್ರಿಗಳನ್ನ ಜೈಲಿಗೆ ಹಾಕಿದ್ದಾರೆ. ಈ ರೀತಿ ಕೇಸ್ ಹಾಕಿ ವಿಪಕ್ಷಗಳ ಬಾಯಿ ಮುಚ್ಚುವ ಕೆಲಸ ಮಾಡ್ತಿದ್ದಾರೆ. ಎಲೆಕ್ಟ್ ರೋಲ್ ಬಾಂಡ್ ನಲ್ಲಿ ಭ್ರಷ್ಟಾಚಾರವಾಗಿದೆ ಎಂದು ಟೀಕೆ ಮಾಡಿದರು.

ಎಲೆಕ್ಟರೋಲ್ ಬಾಂಡ್ ನಿಂದ ಗೊತ್ತಾಯ್ತು ಮೋದಿಯವರು ಯಾರ್ ಯಾರ್ ಬಳಿ ಚಂದಾ ಎತ್ತಿದ್ದಾರೆ ಅಂತ. ದುಡ್ಡು ಕೊಟ್ಟವರ ಕಂಪನಿಯ ಕೇಸ್ ಕ್ಲೋಸ್ ಮಾಡಿದ್ದಾರೆ.

ಕಪ್ಪು ಹಣ ತರ್ತಿನಿ ಅಂ–ದ್ರು, ಡಿಮಾನಿಟೈಸೇಷನ್ ಮಾಡಿ ಎಲ್ಲರನ್ನ ಕ್ಯೂನಲ್ಲಿ ನಿಲ್ಲಿಸಿದರು. ಅವರ ಮಾಡಿರುವ ಕೆಲಸವನ್ನ ಮುಚ್ಚಿ ಹಾಕಲು, ವಿಪಕ್ಷಗಳೆಲ್ಲರು ಭ್ರಷ್ಟರು ಅಂತ ಕರೆಯೋದು. ದೇಶವನ್ನ ಆರ್ಥಿಕವಾಗಿ ಹಾಳು ಮಾಡ್ತಿದ್ದಾರೆ. ಭ್ರಷ್ಟಾಚಾರ ದಿಂದ ಬೇರೆ ಕಡೆ ತಿರುಗಿಸಲು ಜಾತಿ ಧರ್ಮದ ಬಗ್ಗೆ ಮಾತನಾಡ್ತಾರೆ.

ನಿಮ್ಮ ಕಷ್ಟದ ಬಗ್ಗೆ ಅವರು ಅಲಿಸಲೇ ಇಲ್ಲ. ಈಗ ಸಂವಿಧಾನ ಬದಲಾಯಿಸುತ್ತೇವೆ ಅಂತಿದ್ದಾರೆ ಇದ್ರ ಅರ್ಥವೇನು. ಸಂವಿಧಾನ ಬದಲಾವಣೆ ಮಾಡಲು ಹೊರಟಿರುವರ ಬಗ್ಗೆ ಚಿಂತನೆ ಮಾಡಿ ಎಂದು ತಿಳಿಸಿದರು.

ಒಂದು ಕಾಲದಲ್ಲಿ ದೇಶದ ನಾಯಕರು ಸೇವಮನೋಭಾವದಿಂದ ಇರ್ತಿದ್ದರು. ಆದ್ರೆ ಇಂದಿನ ನಾಯಕನ ಬಳಿ ಅಹಾಂಕರ ಕಾಣ್ತಿದೆ.

ಮೋದಿ ಸರ್ಕಾರ ಸುಳ್ಳು ಬಿಟ್ಟರೆ ಬೇರೆ ಏನು ಹೇಳಿಲ್ಲ. ಸರ್ಕಾರವನ್ನ ಬಿಳಿಸಿದ್ದೇ ಮಾಸ್ಟರ್ ಸ್ಟ್ರೋಕ್ ಅಂತ ಮಾಧ್ಯಮಗಳು ಹೇಳುತ್ತವೆ. ಶಾಸಕರನ್ನ ಖರೀದಿ ಮಾಡಿ ಸರ್ಕಾರ ರಚನೆ ಮಾಡ್ತಾರೆ ಇದನ್ನೇ ಮಾಧ್ಯಮಗಳು ಮೋದಿ ಸರ್ಕಾರ ಮಾತ್ರ ಮಾಡಲು ಸಾಧ್ಯ ಎನ್ನುತ್ತವೆ.

ಮೋದಿ ವಿಶ್ವದ ದೊಡ್ಡ ನಾಯಕ ಅಂತ ಹೇಳಿದಾರಂತೆ ಚುಟಿಕೆ ಹೊಡೆದ್ರೆ ಯುದ್ಧ ನಿಲ್ಲಿಸುತ್ತಾರೆ ಅಂತ ಮಾಧ್ಯಮಗಳು ಹೇಳ್ತಿವೆ. ಮೋದಿ ಅಧಿಕಾರಕ್ಕೆ ಬಂದ 10 ವರ್ಷದಲ್ಲಿ ನಿಮ್ಗೆ ಏನಾದರೂ ಒಳ್ಳೆಯದ್ ಆಗಿದ್ಯಾ? ಮಕ್ಕಳಿಗೆ ಏನಾದರೂ ಒಳ್ಳೆಯದ್ ಆಗಿದ್ಯಾ? ಉದ್ಯೋಗ ಸಿಕ್ಕಿದ್ಯಾ? ಒಳ್ಳೆಯ ಆಸ್ಪತ್ರೆ ಕಟ್ಟಿದ್ದಾರಾ? ಮತ್ತೇ ಏನು ಕೆಲಸ ಮಾಡಿದ್ದಾರೆ.

ಅವರು ಕೆಲಸ ಮಾಡಿದ್ರೆ ಕೆಲಸದ ಅಧಾರಿತದ ಮೇಲೆ ಮತ ಕೇಳಬೇಕಿತ್ತು ಅಲ್ವಾ ಎಂದು ಪ್ರಿಯಾಂಕಾ ಗಾಂಧಿ ಪ್ರಶ್ನೆ ಮಾಡಿದರು.

# ಕರ್ನಾಟಕಕ್ಕೆ ಅನ್ಯಾಯ; ಮೋದಿ ಸರ್ಕಾರ ರೈತರನ್ನು ದ್ವೇಷಿಸುತ್ತಿದೆ: ಸಿಎಂ ಸಿದ್ದರಾಮಯ್ಯ



ಬೆಂಗಳೂರು: ಬರ ಪರಿಹಾರ ವಿಳಂಬ ಖಂಡಿಸಿ ಕಾಂಗ್ರೆಸ್ ನಾಯಕರು ವಿಧಾನಸೌಧ ಗಾಂಧಿ ಪ್ರತಿಮೆ ಮುಂದೆ ಪ್ರತಿಭಟನೆ ನಡೆಸಿದರು.

ಸಿಎಂ ಸಿದ್ದರಾಮಯ್ಯ ನೇತೃತ್ವದಲ್ಲಿ ರಾಜ್ಯ ಕಾಂಗ್ರೆಸ್ ಉಸ್ತುವಾರಿ ಸುರ್ಜೆವಾಲ, ಸಚಿವರಾದ ರಾಮಲಿಂಗ ರೆಡ್ಡಿ, ಕೆ.ಜೆ. ಜಾರ್ಜ್ ಹಾಗೂ ಕೃಷ್ಣ ಬೈರೇಗೌಡ ಕೇಂದ್ರ ಸರ್ಕಾರದ ವಿರುದ್ಧ ಪೋಸ್ಟರ್ ಪ್ರದರ್ಶಿಸಿ ಕಿಡಿಕಾರಿದರು.

ಬೇಡ ಬೇಡ ಖಾಲಿ ಚೊಂಬು ಬೇಡ. ಚೋಂಬೇಶ್ವರನಿಗೆ ಚೊಂಬು ಕೊಟ್ಟ ಮೋದಿಗೆ ಧಿಕ್ಕಾರ. ನರೇಂದ್ರ ಚೊಂಬೇಶ್ವರನಿಗೆ ಧಿಕ್ಕಾರ ಎಂದು ಘೋಷಣೆ ಕೂಗಿ ಆಕ್ರೋಶ ಹೊರಹಾಕಿದರು.

ಕಾಂಗ್ರೆಸ್ ಪಕ್ಷದ ವತಿಯಿಂದ ಕರ್ನಾಟಕ ಬಗ್ಗೆ ಕೇಂದ್ರದ ಮಲತಾಯಿ ಧೋರಣೆ ಖಂಡಿಸಿ ಪ್ರತಿಭಟನೆ ಮಾಡಿದ್ದೇವೆ.

ಮೋದಿ ಮತ್ತು ಅಮಿತ್ ಶಾ ಕರ್ನಾಟಕ ರೈತರನ್ನು ದ್ವೇಷ ಮಾಡುತ್ತಿದ್ದಾರೆ. ಕರ್ನಾಟಕದ 220 ತಾಲೂಕಿನಲ್ಲಿ ಬರ ಇದೆ. ನಾವು ಗ್ಯಾರಂಟಿ ಯೋಜನೆಗೆ ದುಡ್ಡು ಕೇಳುತ್ತಿಲ್ಲ. ಬರದ ಪರಿಹಾರವನ್ನು ಕೇಳುತ್ತಿದ್ದೇವೆ ಎಂದು ಹೇಳಿದರು.

ಅಮಿತ್ ಶಾ ಹಾಗೂ ಮೋದಿ ಯಾವ ಮುಖ ಇಟ್ಟುಕೊಂಡು ರಾಜ್ಯಕ್ಕೆ ಬರುತ್ತೀರಿ? 18 ಸಾವಿರ ಕೋಟಿ ಬರ ಪರಿಹಾರ ಕೊಡದೇ ಸುಳ್ಳು ಹೇಳುತ್ತಿದ್ದಾರೆ.

ಕರ್ನಾಟಕದ ಬಗ್ಗೆ ಮಲತಾಯಿ ಧೋರಣೆ ಯಾಕೆ? ಕನ್ನಡಿಗರ ಮೇಲೆ ದ್ವೇಷ ಯಾಕೆ ಎಂದು ಪ್ರಶ್ನಿಸಿ ಸಿಎಂ ವಾಗ್ದಾಳಿ ನಡೆಸಿದರು.

# ಕಾಂಗ್ರೆಸ್ ಸರ್ಕಾರ ಜನರ ಜೀವನಕ್ಕೆ ಭದ್ರತೆ ಒದಗಿಸಿದೆ




ಚಿಕ್ಕೋಡಿ ಕ್ಷೇತ್ರದಿಂದ ಪ್ರಿಯಂಕಾ ಜಾರಕಿಹೊಳಿ ಅವರನ್ನು ಆಯ್ಕೆ ಮಾಡುವ ಮೂಲಕ ಕೇಂದ್ರದಲ್ಲೂ ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ತನ್ನಿ

ಯಮಕನಮರಡಿ: ರಾಜ್ಯದ ಕಾಂಗ್ರೆಸ್ ಸರ್ಕಾರ ಗ್ಯಾರಂಟಿ ಯೋಜನೆ ಜಾರಿ ಮಾಡಿ ಜನರ ಜೀವನಕ್ಕೆ ಭದ್ರತೆ ಒದಗಿಸಿದೆ. ಆದರೆ ಬಿಜೆಪಿ ನೇತೃತ್ವದ ಕೇಂದ್ರ ಸರ್ಕಾರ ಕಳೆದ ಹತ್ತು ವರ್ಷಗಳಲ್ಲಿ ಬರೀ ಭರವಸೆ ನೀಡಿದೆಯೇ ಹೊರತು ಯಾವುದನ್ನು ಅನುಷ್ಠಾನಕ್ಕೆ ತಂದಿಲ್ಲ ಎಂದು ಸತೀಶ್ ಶುಗರ್ಸ್ ನಿರ್ದೇಶಕ, ಯುವ ನಾಯಕ ರಾಹುಲ್ ಜಾರಕಿಹೊಳಿ ಹೇಳಿದರು.

ಯಮಕನಮರಡಿ ವಿಧಾನಸಭಾ ಕ್ಷೇತ್ರದ ವಿವಿಧ ಗ್ರಾಮಗಳಲ್ಲಿ ಹಮ್ಮಿಕೊಂಡಿದ್ದ ಸಾರ್ವಜನಿಕ ಸಭೆಗಳಲ್ಲಿ ಪಾಗ್ಲೊಂಡು, ಚಿಕ್ಕೋಡಿ ಲೋಕಸಭೆ ಕಾಂಗ್ರೆಸ್ ಪಕ್ಷದ ಅಭ್ಯರ್ಥಿ, ಸಹೋದರಿ ಪ್ರಿಯಂಕಾ ಜಾರಕಿಹೊಳಿ ಅವರ ಪರ ಮತಯಾಚಿಸಿ ಅವರು ಮಾತನಾಡಿದರು.

ಬಿಜೆಪಿಯವರು ಜನರ ಭಾವನೆ ಕೆರಳಿಸಿ ರಾಜ–ಕಾರಣ ಮಾಡುತ್ತಿದ್ದಾರೆ. ಕೇಂದ್ರದಲ್ಲಿಯೂ ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದಲ್ಲಿ ಅಲ್ಲಿಯೂ ಗ್ಯಾರಂಟಿ ಅನುಷ್ಠಾನ ಮಾಡುತ್ತೇವೆ.

ಈ ಮೂಲಕ ಇಡೀ ದೇಶದ ಜನರ ಬದುಕಿಗೆ ಭದ್ರತೆ ಒದಗಿಸುತ್ತೇವೆ ಎಂದು ತಿಳಿಸಿದರು.

ದೇಶದ ಸಣ್ಣ ರೈತರ ಸಾಲ ಇರುವುದು ಕೇವಲ 2 ಲಕ್ಷ ಕೋಟಿ ಮಾತ್ರ. ಈ ಸಾಲವನ್ನು ಮನ್ನಾ ಮಾಡುತ್ತೇವೆ ಎಂದಾಕ್ಷಣ ಬಿಜೆಪಿಗರು ದೇಶ ದಿವಾಳಿಯಾಗುತ್ತದೆ ಎನ್ನುತ್ತಾರೆ. ಆದರೆ ಬಿಜೆಪಿ ನೇತೃತ್ವದ ಕೇಂದ್ರ ಸರ್ಕಾರ ದೊಡ್ಡ ದೊಡ್ಡ ಉದ್ಯಮಿಗಳ 15 ಲಕ್ಷ ಕೋಟಿ ರೂ. ಸಾಲ ಮನ್ನಾ ಮಾಡಿದಾಗ ದೇಶ ದಿವಾಳಿಯಾಗಲಿಲ್ಲವೇ ಎಂದು ಪ್ರಶ್ನಿಸಿದರು.

ಕಳೆದ ಹತ್ತು ವರ್ಷಗಳ ಬಿಜೆಪಿ ಅವಧಿಯಲ್ಲಿ ಅಗತ್ಯ ವಸ್ತುಗಳ ಬೆಲೆ ಗಗನಕ್ಕೇರಿದೆ.

ಇದರಿಂದಾಗಿ ಜನಸಾಮಾನ್ಯರು ಜೀವನ ನಡೆಸಲು ದುಸ್ತರವಾದ ಸ್ಥಿತಿ ನಿರ್ಮಾಣವಾಗಿದೆ.

ಬೆಲೆ ಏರಿಕೆಯನ್ನು ನಿಯಂತ್ರಣ ಮಾಡಿ ಜನ ನೆಮ್ಮದಿಯಿಂದ ಜೀವನ ನಡೆಸಲು ಕಾಂಗ್ರೆಸ್ ಸರ್ಕಾರವನ್ನು ಅಧಿಕಾರಕ್ಕೆ ತರಬೇಕು.

ಕಾರಣ ದೇಶದಲ್ಲಿ ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದರೆ ರೈತರ ಸಾಲ ಮನ್ನಾ ಮಾಡುತ್ತೇವೆ. ಅದೇ ಬಿಜೆಪಿ ಸರ್ಕಾರ ಅಧಿಕಾರಕ್ಕೆ ಬಂದಲ್ಲಿ ಉದ್ಯಮಿಗಳ ಸಾಲ ಮನ್ನಾ ಮಾಡುತ್ತಾರೆ.

ಆದ್ದರಿಂದ ಚಿಕ್ಕೋಡಿ ಲೋಕಸಭೆ ಚುನಾವಣೆಯಲ್ಲಿ ಚಿಕ್ಕೋಡಿ ಲೋಕಸಭೆ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಪ್ರಿಯಂಕಾ ಜಾರಕಿಹೊಳಿ ಅವರನ್ನು ಆಯ್ಕೆ ಮಾಡುವ ಮೂಲಕ ಕೇಂದ್ರದಲ್ಲೂ ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ತರಬೇಕೆಂದು ಮನವಿ ಮಾಡಿದರು. ಈ ಸಂದರ್ಭದಲ್ಲಿ ಯಮಕನಮರಡಿ ವಿಧಾನಸಭಾ ಕ್ಷೇತ್ರದ ಹಲವು ಕಾಂಗ್ರೆಸ್ ಮುಖಂಡರು ಇದ್ದರು.

# ಜಿಲ್ಲಾ ಸ್ವೀಪ್ ಸಮಿತಿ; ಬೋಟಿಂಗ್ ಮುಖಾಂತರ ಮತದಾನ ಜಾಗೃತಿ

## ಪ್ರತಿಯಬ್ಬರೂ ಕಡ್ಡಾಯವಾಗಿ ಮತ ಚಲಾಯಿಸಿ: ಜಿಲ್ಲಾಧಿಕಾರಿ ನಿತೇಶ್ ಪಾಟೀಲ

ಬೆಳಗಾವಿ: ಲೋಕಸಭಾ ಚುನಾವಣೆಯ ಹಿನ್ನೆಲೆಯಲ್ಲಿ ಮತದಾರರಲ್ಲಿ ಜಾಗೃತಿ ಮೂಡಿಸುವ ಉದ್ದೇಶದಿಂದ ಜಿಲ್ಲಾ ಸ್ವೀಪ್ ಸಮಿತಿ ವತಿಯಿಂದ ಕೋಟೆ ಕೆರೆಯಲ್ಲಿ (ಕಿಲ್ಲಾ ಕೆರೆ) ಮಂಗಳವಾರ (ಏ.23) ಬೋಟಿಂಗ್ ಮುಖಾಂತರ ಏರ್ಪಡಿಸಲಾದ ಮತದಾನ ಜಾಗೃತಿ ಕಾರ್ಯಕ್ರಮಕ್ಕೆ ಜಿಲ್ಲಾಧಿಕಾರಿ ಹಾಗೂ ಚುನಾವಣಾಧಿಕಾರಿ ನಿತೇಶ್ ಪಾಟೀಲ ಅವರು ಚಾಲನೆ ನೀಡಿದರು.

ಈ ವೇಳೆ ಮಾತನಾಡಿದ ಜಿಲ್ಲಾಧಿಕಾರಿ ನಿತೇಶ್ ಪಾಟೀಲ ಚಿಕ್ಕೋಡಿ, ಬೆಳಗಾವಿ ಲೋಕಸಭಾ ಮತ ಕ್ಷೇತ್ರಗಳ ಚುನಾವಣೆ ಮೇ.07 ರಂದು ನಡೆಯಲಿದೆ. ಬೆಳಿಗ್ಗೆ 7 ಗಂಟೆಯಿಂದ ಸಂಜೆ 6 ಗಂಟೆಯವರೆಗೆ ಮತದಾನದ ಸಮಯ ನಿಗದಿ ಪಡಿಸಲಾಗಿದೆ. ಎಲ್ಲ ಮತದಾರರು ಕಡ್ಡಾಯವಾಗಿ ಮತ ಚಲಾಯಿಸಬೇಕು ಹೇಳಿದರು.

ಭಾರತ ಸಂವಿಧಾನ ನೀಡಿದ



ಮತದಾನದ ಹಕ್ಕನ್ನು ಪ್ರತಿ ಮತದಾರರು ಚಲಾಯಿಸಬೇಕು. ಈಗಾಗಲೇ ಜಿಲ್ಲಾಡಳಿತ, ಜಿಲ್ಲಾ ಸ್ವೀಪ್ ಸಮಿತಿಯ ವತಿಯಿಂದ ಬಹಳಷ್ಟು ಮತದಾನ ಜಾಗೃತಿ ಅಭಿಯಾನ ಹಮ್ಮಿಕೊಳ್ಳಲಾಗುತ್ತಿದೆ. ಎಲ್ಲರೂ ಕಡ್ಡಾಯವಾಗಿ ಮತದಾನ ಮಾಡಬೇಕು ಎಂದು ಜಿಲ್ಲಾಧಿಕಾರಿ ನಿತೇಶ್ ಪಾಟೀಲ ಅವರು ತಿಳಿಸಿದರು.

ಜಿಲ್ಲಾ ಸ್ವೀಪ್ ಸಮಿತಿಯ ವತಿಯಿಂದ ಬೆಳಗಾವಿ ಹಾಗೂ ಚಿಕ್ಕೋಡಿ ಲೋಕಸಭಾ ಮತ ಕ್ಷೇತ್ರಗಳಲ್ಲಿ ಮತದಾರರ ಜಾಗೃತಿ ಅಭಿಯಾನಗಳನ್ನು ಹಮ್ಮಿಕೊಳ್ಳಲಾಗುತ್ತಿದೆ. ನಮ್ಮ ಮತ ನಮ್ಮ ಹಕ್ಕು, ಎರಡು ಮತ ಕ್ಷೇತ್ರದ ಮತದಾರರು ಕಡ್ಡಾಯವಾಗಿ ಮತ ಚಲಾಯಿಸುವ ಮೂಲಕ ದೇಶ ಕಟ್ಟುವಲ್ಲಿ ಪಾತ್ರ ವಹಿಸಬೇಕು ಎಂದು ಚಿಕ್ಕೋಡಿ ಲೋಕಸಭಾ ಮತ ಕ್ಷೇತ್ರದ ಚುನಾವಣಾಧಿಕಾರಿ ಹಾಗೂ ಜಿಲ್ಲಾ ಸ್ವೀಪ್ ಸಮಿತಿ ಅಧ್ಯಕ್ಷರಾದ ರಾಹುಲ್ ಶಿಂಧೆ ಅವರು ತಿಳಿಸಿದರು.

**ಮತದಾನ ಜಾಗೃತಿ ಫಲಕ ಪ್ರದರ್ಶನ:** ಚುನಾವಣೆ ಪರ್ವ ದೇಶದ ಗರ್ವ, ಮತದಾನ ನಿಮ್ಮ ಹಕ್ಕು ಹಾಗೂ ನಿಮ್ಮ ಜವಾಬ್ದಾರಿ, ನೈತಿಕ ಮತದಾನ ಮಾಡಿ, ನನ್ನ ಮತ ನನ್ನ ಹಕ್ಕು, ನಿಮ್ಮ ಮತ ನಿಮ್ಮ ಭವಿಷ್ಯ, ಮತ ಚಲಾವಣೆ ನಿಮ್ಮ ಹಕ್ಕು, ನಿಮ್ಮ ಮತ ಅಮೂಲ್ಯ ತಪ್ಪದೇ ಮತ ಚಲಾಯಿಸಿ ಎಂಬ ವಿವಿಧ ಜಾಗೃತಿ ಫಲಕಗಳನ್ನು ಬೋಟಿಂಗ್ ಮೂಲಕ ಪ್ರದರ್ಶಿಸಲಾಯಿತು.

ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಕಾಧಿಕಾರಿ ರಾಹುಲ್ ಶಿಂಧೆ, ಜಿಲ್ಲಾ ಪಂಚಾಯತ್ ಮುಖ್ಯ ಯೋಜನಾ ನಿರ್ದೇಶಕ ಗಂಗಾಧರ ದಿವಟರ, ಯೋಜನಾ ನಿರ್ದೇಶಕ ಕೃಷ್ಣರಾಜು, ಲೆಕ್ಕಾಧಿಕಾರಿ ಗಂಗಾ ಹಿರೇಮಠ್, ಮಹಾನಗರ ಪಾಲಿಕೆ ಸಿಬ್ಬಂದಿಗಳು, ಪೌರ ಕಾರ್ಮಿಕರು, ಜಿಲ್ಲಾ ಪಂಚಾಯತ್ ಸಿಬ್ಬಂದಿಗಳು, ಮತದಾನ ಜಾಗೃತಿ ಅಭಿಯಾನದಲ್ಲಿ ಪಾಲ್ಗೊಂಡಿದ್ದರು.

# ಹಲ್ಲೆ, ಕಿರುಕುಳ ಆರೋಪ; ಐಪಿಎಸ್ ಅಧಿಕಾರಿ ರವೀಂದ್ರ ಗಡಾದಿ ಸೇರಿ 14 ಜನರ ವಿರುದ್ಧ ಎಫ್ಐಆರ್



ಅಥಣಿ: ಕರ್ನಾಟಕದ ಐಪಿಎಸ್ ಅಧಿಕಾರಿಯೊಬ್ಬರು ತಮ್ಮ ಇತರ ಸಂಬಂಧಿಕರೊಂದಿಗೆ ಸೇರಿ ತಮ್ಮ ಸ್ವಂತ ಊರಿನಲ್ಲಿ ಮಹಿಳೆ ಮತ್ತು ಆಕೆಯ ಪತಿಯ ಮೇಲೆ ಹಲ್ಲೆ ನಡೆಸಿದ ಆರೋಪದ ಮೇಲೆ ತಾಲ್ಲೂಕಿನ ಐಗಳಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಐಗಳಿ ಗ್ರಾಮದ ನಕುಶಾ ಸೈದಪ್ಪ ಗಡಾದೆ ಎಂಬುವವರು ಐಗಳಿ ಠಾಣೆಗೆ ತಮ್ಮ ಮೇಲೆ ಕಿರುಕುಳ ಹಾಗೂ ಹಲ್ಲೆ ನಡೆದಿರುವ ಬಗ್ಗೆ ದೂರು ಸಲ್ಲಿಸಿದ್ದು ಐಪಿಸಿ 307 ಸೇರಿ ಇತರ ಕಲಂಗಳ ಅಡಿ 14ಜನರ ವಿರುದ್ಧ ಪ್ರಕರಣ ದಾಖಲಾಗಿದೆ.

ಐಗಳಿ ಗ್ರಾಮದ ಸಾರ್ವಜನಿಕ ಕುಡಿಯುವ ಬಾವಿ ನೀರಿನ ಬಳಕೆ, ಸ್ಥಳೀಯ ಗ್ರಾ.ಪಂ. ಅನುಮತಿ ಮೇರೆಗೆ ಹೊಸ ಮನೆ ಕಟ್ಟುವ ಕೆಲಸಕ್ಕೆ ಬಳಕೆ ಮಾಡುವಾಗ, ಆರೋಪಿತರು ಕ್ಯಾತೆ ತೆಗೆದು ಹಲ್ಲೆ ನಡೆಸಿದ್ದಾರೆ ಎಂದು ದೂರುದಾರರು ಆರೋಪಿಸಿದ್ದಾರೆ.

ರವೀಂದ್ರ ಗಡಾದೆ ಎಂಬುವವರು ಪೊಲೀಸ್ ಇಲಾಖೆಯಲ್ಲಿದ್ದು, ಈ ಪ್ರಕರಣದಲ್ಲಿ ನೊಂದ ಕುಟುಂಬದೊಂದಿಗೆ ಬಹಳ ದಿನಗಳಿಂದ ಅಸಮಾಧಾನ ಹೊಂದಿದ್ದಾರೆ. ಅಕ್ರಮವಾಗಿ ಗುಂಪು ಕಟ್ಟಿಕೊಂಡು ಅಶ್ಲೀಲ ಪದಗಳನ್ನು ಬಳಸಿ ಹಲ್ಲೆ ಮಾಡಿದ್ದಾರೆ ಎಂದು ಎಫ್ ಐಆರ್ ನಲ್ಲಿ ನಮೂದಾಗಿದೆ. ಘಟನೆ ಎಪ್ರೀಲ್ 12ಕ್ಕೇ ಮಧ್ಯಾಹ್ನ ನಡೆದಿದ್ದು, ಏ.20ಕ್ಕೆ ರವೀಂದ್ರ ಗಡಾದಿ ಅವರಯ ಸಹಿತ 14ಜನರ ಮೇಲೆ ಅಥಣಿ ತಾಲ್ಲೂಕಿನ ಐಗಳಿ ಠಾಣೆಯಲ್ಲಿ ಎಫ್ಐಆರ್ ದಾಖಲಾಗಿದೆ. ಪ್ರಕರಣ ದಾಖಲಿಸಿರುವ ಪಿಎಸ್ಐ ಸುಮಲತಾ ಅವರು ಎಫ್ಐಆರ್ ಪ್ರತಿಯನ್ನು ಅಥಣಿ ನ್ಯಾಯಾಲಯಕ್ಕೆ ಸಲ್ಲಿಸಿದ್ದಾರೆ.


ನಮ್ಮ ದೂರದ ಸಂಬಂಧಿ ಆಗಿರುವ ಐಪಿಎಸ್ ಅಧಿಕಾರಿ ರವೀಂದ್ರ ಗಡಾದಿ ಅವರು ನಮ್ಮ ವಿರುದ್ಧ ದ್ವೇಷ ಕಾರುತ್ತ ಬಂದಿದ್ದಾರೆ. ಗುಂಪು ಕಟ್ಟಿಕೊಂಡು ಅಶ್ಲೀಲ ಪದ ಬಳಸಿ ಸಹ ಹಲ್ಲೆ ಮಾಡಿದ್ದಾರೆ. ತತಕ್ಷಣ ಪೊಲೀಸರು ಅವರನ್ನು ಬಂಧಿಸಬೇಕು. ಅವರ ವಿರುದ್ದ ಸರಕಾರ ಶಿಸ್ತು ಕ್ರಮ ಕೈಗೊಳ್ಳಬೇಕು ಎಂದು ನಕುಶಾ ಮನವಿ ಮಾಡಿದ್ದಾರೆ.

ವೈಯಕ್ತಿಕ ಕಾರಣದಿಂದ ನಡೆದಿರುವ ಗಲಾಟೆ ವಿಚಾರದಲ್ಲಿ ದೂರು ನೀಡಲಾಗಿದೆ. ಈ ಕುರಿತು ಪ್ರಕರಣ ದಾಖಲಿಸಿಕೊಂಡು ತನಿಖೆ ಕೈಗೊಂಡಿದ್ದೇವೆ ಎಂದು ಬೆಳಗಾವಿ ಹಿರಿಯ ಪೊಲೀಸ್ ಅಧಿಕಾರಿ ಮಾಹಿತಿ ನೀಡಿದ್ದಾರೆ.

ರವೀಂದ್ರ ಕಾಶನಾಥ ಗಡಾದಿ ಅವರು ಕೆಎಸ್‌ಪಿ–ಎಸ್ ಅಧಿಕಾರಿಯಾಗಿದ್ದವರು. ಆನಂತರ ಐಪಿ–ಎಸ್‌ಗೆ ಹುದ್ದೆಗೆ ಬಡ್ತಿ ಪಡೆದಿದಾರೆ. ಬೆಳಗಾವಿಯಲ್ಲಿ ಡಿಸಿಪಿಯಾಗಿದ್ದ ಅವರು ಸದ್ಯ ಬೆಂಗಳೂರಿನಲ್ಲಿ ಗುಪ್ತಚರ ವಿಭಾಗದ ಎಸ್ಪಿಯಾಗಿದ್ದಾರೆ.

# ಬರ ಪರಿಹಾರ: ಕೇಂದ್ರಕ್ಕೆ ಸುಪ್ರೀಂ ಕೋರ್ಟ್ ನಿರ್ದೇಶನ ನೀಡಿಲ್ಲ; ಮಾನಗೆಟ್ಟ ಕಾಂಗ್ರೆಸ್'ನಿಂದ ತಪ್ಪು ವ್ಯಾಖ್ಯಾನ: ಆರ್.ಅಶೋಕ್

ಬೆಂಗಳೂರು: ಬರ ಪರಿಹಾರ ಬಿಡುಗಡೆ ಸಂಬಂಧಿಸಿದಂತೆ ಸುಪ್ರೀಂ ಕೋರ್ಟ್ ಕೇಂದ್ರ ಸರ್ಕಾರಕ್ಕೆ ಯಾವುದೇ ನಿರ್ದೇಶನ ನೀಡಿಲ್ಲ. ಆದರೆ, ಮಾನಗೆಟ್ಟ ಕಾಂಗ್ರೆಸ್ ತಪ್ಪು ವ್ಯಾಖ್ಯಾನ ಮಾಡಿ ಜಯವೆಂದು ಬಿಂಬಿಸಿಕೊಳ್ಳುತ್ತಿದೆ ಎಂದು ವಿಧಾನಸಭೆ ಪ್ರತಿಪಕ್ಷ ನಾಯಕ ಆರ್.ಅಶೋಕ್ ಚಾಟಿ ಬೀಸಿದರು.



ಬಿಜೆಪಿ ಮಾಧ್ಯಮ ಕೇಂದ್ರದಲ್ಲಿ ಮಂಗಳವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ರಾಜ್ಯ ಸರ್ಕಾರದ ವಿರುದ್ಧ ವಾಗ್ದಾಳಿ ನಡೆಸಿದರು.

ಬರ ಪರಿಹಾರ ಬಿಡುಗಡೆ ವಿಚಾರದಲ್ಲಿ ಸುಪ್ರೀಂ ಕೋರ್ಟ್ ಕೇಂದ್ರ ಸರ್ಕಾರಕ್ಕೆ ಯಾವುದೇ ನಿರ್ದೇಶನ ನೀಡಿಲ್ಲ. ಕೇಂದ್ರ ಸರ್ಕಾರವೇ ಚುನಾವಣಾ ಆಯೋಗದ ಅನುಮತಿ ಕೇಳಿದ್ದು, ಅದಕ್ಕೆ ಚುನಾವಣಾ ಆಯೋಗ ಅನುಮತಿ ನೀಡಿದೆ. ಈ ವಿಷಯವನ್ನು ನ್ಯಾಯಾಲಯದ ಗಮನಕ್ಕೆ ತಂದಿದೆ. ಇದೇ ವಿಷಯವನ್ನು ಸುಪ್ರೀಂ ಕೋರ್ಟ್ ನಲ್ಲಿ ಕೇಂದ್ರ ಸರ್ಕಾರದ ಪರವಾಗಿ ಹಾಜರಿದ್ದ ಅಟಾರ್ನಿ ಜನರಲ್ ಪ್ರಸ್ತಾಪಿಸಿ, 'ನೆಕ್ಸ್ಟ್ ಮಂಡೆ ( ಏಪ್ರಿಲ್ 29) ಸಮ್ ಥಿಂಗ್ ವಿಲ್ ಬಿ ಹ್ಯಾಪನ್' ಎಂದಾಗ ಕಾಂಗ್ರೆಸ್ ಪರ ವಕೀಲ ಕಪಿಲ್ ಸಿಬಲ್ ಸಹಮತ ವ್ಯಕ್ತಪಡಿಸಿದ್ದಾರೆ. ಈ ಕೇಸ್ ನಲ್ಲಿ ವಾದ ಮಾಡುವ ಅಗತ್ಯವೇನಿಲ್ಲವೆಂದು ನ್ಯಾಯಾಲಯ ಹೇಳಿದೆ.

ಕೇಂದ್ರ ಸರ್ಕಾರದಿಂದ ಅನ್ಯಾಯವಾಗಿದೆ, ತೊಂದರೆ ನೀಡುತ್ತಿದೆ ಎಂದು ರಾಜ್ಯದ ಪರ ವಕೀಲ ವಾದ ಮಾಡಿಲ್ಲ. ಸುಪ್ರೀಂ ಕೋರ್ಟ್ ಅವಕಾಶ ಕೊಟ್ಟಿಲ್ಲ. ವಾರದೊಳಗೆ ಬಿಡುಗಡೆ ಮಾಡಿ ಎಂದೂ ಆದೇಶಿಸಿಲ್ಲ. ಕೇಂದ್ರ ಸರ್ಕಾರ ಈ ನಿಟ್ಟಿನಲ್ಲಿ ಮಾಡಿರುವ ಪ್ರಯತ್ನಗಳಿಗೆ ರಾಜ್ಯದ ಪರ ವಕೀಲ ಸಹಮತ ವ್ಯಕ್ತಪಡಿಸಿದರೆ, ವಾದ ಅಗತ್ಯವಿಲ್ಲವೆಂದು ಸುಪ್ರೀಂ ಕೋರ್ಟ್ ಗೆ ನಿವೇದಿಸಿಕೊಂಡಿದ್ದಾರೆ.

# ಬಿಜೆಪಿ ಅಭ್ಯರ್ಥಿಗೆ ಥ್ಯಾಂಕ್ಸ್ ಕೊಟ್ಟು, ತಬ್ಬಿಕೊಂಡಿದ್ದಕ್ಕೆ ಮಹಿಳಾ ಎಎಸ್ಐ ಅಮಾನತು




ಹೈದರಾಬಾದ್: ಹೈದರಾಬಾದ್ನ ಬಿಜೆಪಿ ಅಭ್ಯರ್ಥಿ ಮಾಧವಿ ಲತಾ ಅವರು ಪ್ರಚಾರ ಮಾಡುವಾಗ ಮಹಿಳಾ ಎಎಸ್‌ಐಯೊಬ್ಬರು ತಬ್ಬಿಕೊಂಡು ಥ್ಯಾಂಕ್ಸ್ ನೀಡಿ ದ್ದರಿಂದ ಅಮಾನತುಗೊಂಡಿದ್ದಾರೆ.

ಸೈದಾಬಾದ್‌ನ ಎಎಸ್‌ಐ ಪೊಲೀಸ್ ಠಾಣೆಯ ಎಎಸ್‌ಐ ಉಮಾದೇವಿಯವರನ್ನು ಹೈದರಾಬಾದ್ ನಗರದ ಪೊಲೀಸ್ ಕಮಿಷನರ್ ಕೆ.ಶ್ರೀನಿವಾಸ್ ರೆಡ್ಡಿಯವರು ಮಾದರಿ ನೀತಿ ಸಂಹಿತೆ ಉಲ್ಲಂಘನೆ ಮೇಲೆ ಅಮಾನತು ಮಾಡಿ ಆದೇಶ ಹೊರಡಿಸಿದ್ದಾರೆ.

ಸೈದಾಬಾದ್ ಠಾಣಾ ವ್ಯಾಪ್ತಿಯಲ್ಲಿ ಬಿಜೆಪಿ ಅಭ್ಯರ್ಥಿ ಮಾಧವಿ ಲತಾ ಅವರು ಪ್ರಚಾರ ನಡೆಸುತ್ತಿದ್ದರು. ಈ ವೇಳೆ ಭದ್ರತೆಗಾಗಿ ಮಹಿಳಾ ಎಎಸ್‌ಐ ಉಮಾದೇವಿಯವರನ್ನು ಕರ್ತವ್ಯಕ್ಕೆ ನಿಯೋಜನೆ ಮಾಡಲಾಗಿತ್ತು. ಆದರೆ ಪ್ರಚಾರ ಮಾಡುವಾಗ ಬಿಜೆಪಿ ಅಭ್ಯರ್ಥಿಯನ್ನು ಕಂಡು ಮುಗುಳು ನಗು ನಕ್ಕು, ಕೈ ಕುಲುಕಿ, ಅಪ್ಪಿಕೊಂಡಿದ್ದರು.

ಈ ವಿಡಿಯೋ ಸೋಷಿಯಲ್ ಮೀಡಿಯಾದಲ್ಲಿ ಫುಲ್ ವೈರಲ್ ಆಗಿತ್ತು. ಅಲ್ಲದೇ ಲೋಕಸಭೆ ಚುನಾವಣೆ ಹಿನ್ನೆಲೆಯಲ್ಲಿ ದೇಶದಲ್ಲಿ ನೀತಿ ಸಂಹಿತೆ ಜಾರಿಯಲ್ಲಿದೆ. ಈ ಅವಧಿಯಲ್ಲಿ ಸರ್ಕಾರಿ ಅಧಿಕಾ–ರಿಯಾಗಿ ರಾಜಕಾರಣಿಯ ಕೈ ಕುಲುಕಿ, ಥ್ಯಾಂಕ್ಸ್ ನೀಡಿದ್ದಕ್ಕೆ ನೀತಿ ಸಂಹಿತೆ ಉಲ್ಲಂಘನೆ ಮಾಡಿದ್ದರೆಂದು ಅಮಾನತುಗೊಳಿಸಲಾಗಿದೆ ಎಂದು ತಿಳಿದು ಬಂದಿದೆ.

# ಮಿಷಕ್ಕೆ ಬಲಿಯಾಗಬೇಡಿ: ಈರಣಗೌಡ ಪಾಟೀಲ

ಯರಗಟ್ಟಿ: 'ಭಾರತ ಅತ್ಯಂತ ದೊಡ್ಡ ಪ್ರಜಾಪ್ರಭುತ್ವ ದೇಶವಾಗಿದ್ದು, ಇಲ್ಲಿನ ಸಂವಿಧಾನ ನೀಡಿದ

ಮತದಾನದ ಹಕ್ಕನ್ನು ಕಡ್ಡಾಯವಾಗಿ ಚಲಾಯಿಸಬೇಕು' ಎಂದು ರೈತ ಸಂಘದ ಮುಖಂಡ ಈರಣಗೌಡ ಪಾಟೀಲ ಹೇಳಿದರು.

ಪಟ್ಟಣದಲ್ಲಿ ಅಖಿಲ ಕರ್ನಾಟಕ ಜನಜಾಗೃತಿ ವೇದಿಕೆ ಮತ್ತು ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ಬಿ.ಸಿ. ಟ್ರಸ್ಟ್ ವತಿಯಿಂದ ಈಚೆಗೆ ನಡೆದ ಚುನಾವಣೆ ಜಾಗೃತಿ ಕಾರ್ಯಕ್ರಮದಲ್ಲಿ ಮಾತನಾಡಿದರು.

# ಮಾಜಿ ಮೇಯರ್ ಮನೆಯಲ್ಲಿ ಚಿನ್ನಾಭರಣ–ನಗದು ದೋಚಿದ ಸೆಕ್ಯೂರಿಟಿ ಗಾರ್ಡ್

ಬೆಂಗಳೂರು: ಮಾಜಿ ಮೇಯರ್ ಆರ್.ನಾರಾಯಣಸ್ವಾಮಿ ಅವರ ಮನೆಯಲ್ಲಿ ನಗದು ಸೇ–ರಿದಂತೆ 1.29 ಕೋಟಿ ರು. ಮೌಲ್ಯದ ಬೆಲೆಬಾಳುವ ವಸ್ತುಗಳು ಕಳ್ಳತನವಾಗಿರುವ ಸಂಬಂಧ ಸಂಜಯನಗರ ಪೊಲೀಸ್ ಠಾಣೆಯಲ್ಲಿ ದೂರು ದಾಖಲಾಗಿದೆ.

ಈ ಸಂಬಂಧ ಮಾಜಿ ಮೇಯರ್ ನಾರಾಯಣಸ್ವಾಮಿ ನೀಡಿದ ದೂರಿನ ಮೇರೆಗೆ ಸೆಕ್ಯೂರಿಟಿ ಗಾರ್ಡ್ ನೇಪಾಳದ ನರಬಹುದ್ದೂರ್ ಶಾಯಿ ಎಂಬಾತನ ವಿರುದ್ಧ ಎಫ್ ಐಆರ್ ದಾಖಲಿಸಿಕೊಂಡು ಆತನ ಪತ್ತೆಗೆ ಶೋಧಿಸ ಲಾಗುತ್ತಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

**ಏನಿದು ಘಟನೆ?:** ದೂರುದಾರ ನಾರಾಯಣಸ್ವಾಮಿ ಅವರು ಏ.18ರಂದು ಬೆಳಗ್ಗೆ 7.30ಕ್ಕೆ ಮನೆಯಿಂದ ಜಾಲಹಳ್ಳಿಗೆ ಚುನಾವಣಾ ಪ್ರಚಾರಕ್ಕೆ ತೆರಳಿದ್ದರು. ಈ ವೇಳೆ ಅವರ ಪತ್ನಿ ಮತ್ತು ಪುತ್ರ ತಮಿಳುನಾಡಿನ ತಿರುವಣ್ಣಾಮಲೈ ದೇವಸ್ಥಾನಕ್ಕೆ ತೆರಳಿದ್ದರು. ಪ್ರಚಾರ ಮುಗಿಸಿ ಮಧ್ಯಾಹ್ನ 3 ಗಂಟೆಗೆ ಮನೆಗೆ ಬಂದಿರುವ ನಾರಾಯಣಸ್ವಾಮಿ ಊಟ ಮಾಡಿ, ಸೆಕ್ಯೂ–ರಿಟಿ ಗಾರ್ಡ್ ನರಬಹುದ್ದೂರ್ ಶಾಯಿಗೂ ಊಟ ನೀಡಿದ್ದಾರೆ. ನಂತರ ಮನೆಗೆ ಬೀಗ ಹಾಕಿಕೊಂಡು ಮಧ್ಯಾಹ್ನ 3.30ಕ್ಕೆ ನಾರಾಯಣಸ್ವಾಮಿ



ಮತ್ತೆ ಚುನಾವಣಾ ಪ್ರಚಾರಕ್ಕೆ ತೆರಳಿದ್ದಾರೆ. ಹಿಂಬದಿ ಬಾಗಿಲು ತೆರೆದು ಕಳ್ಳತನ: ಚುನಾವಣಾ ಪ್ರಚಾರ ಮುಗಿಸಿಕೊಂಡು ರಾತ್ರಿ 8 ಗಂಟೆಗೆ ಮನೆಗೆ ವಾಪಾಸ್ ಬಂದಾಗ, ಮನೆಯ ಹಿಂಬದಿ ಬಾಗಿಲು ತೆರೆದಿರುವು ಕಂಡು ಬಂದಿದೆ. ಈ ವೇಳೆ ಸೆಕ್ಯೂರಿಟಿ ನರಬಹುದ್ದೂರ್ ಶಾಯಿಯನ್ನು ಕರೆದಿದ್ದು, ಆತ ಎಲ್ಲಿಯೂ ಕಂಡು ಬಂದಿಲ್ಲ. ಆತನ ಮೊಬೈಲ್‌ಗೆ ಕರೆ ಮಾಡಿದಾಗ ಸ್ವಿಚ್ ಆಫ್ ಬಂದಿದೆ.

**ಸೆಕ್ಯೂರಿಟಿ ಗಾರ್ಡ್ ನಾಪತ್ತೆ:** ಮನೆಯ ಒಳಗೆ ತೆರಳಿ ನೋಡಿದಾಗ ಮನೆಯ ಮೂರು ರೂಮ್ ವಾಡ್ 9ರೂಬ್‌ಗಳು ತೆರೆದಿದ್ದು, ಎಲ್ಲಾ ವಸ್ತುಗಳು ಚೆಲ್ಲಾಪಿಲ್ಲಿಯಾಗಿ ಬಂದಿರುವುದು ಕಂಡು ಬಂದಿದೆ. ವಾರ್ಡ್‌ಬ್‌ನಲ್ಲಿ ಇರಿಸಿದ್ದ ನಗದು, ಚಿನ್ನಾಭರಣಗಳು, ಬೆಳ್ಳಿವಸ್ತುಗಳು ಸೇರಿದಂತೆ ಬೆಲೆಬಾಳುವ ವಸ್ತುಗಳು ಕಳ್ಳತನವಾಗಿರುವುದು ಬೆಳಕಿಗೆ ಬಂದಿದೆ. ನಾಪತ್ತೆಯಾಗಿರುವ ಸೆಕ್ಯೂರಿಟಿ ಗಾರ್ಡ್ ನರಬಹುದ್ದೂರ್‌ಶಾಯಿಯೇ ಕಳ್ಳತನ ಮಾಡಿ ಪರಾರಿಯಾಗಿರುವ ಅನುಮಾನವ್ಯಕ್ತವಾಗಿದೆ. ಈ ಸಂಬಂಧ ಸಂಜಯನಗರ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ತನಿಖೆ ಮುಂದುವರೆದಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

**ಏನೆಲ್ಲಾ ಕಳ್ಳತನ?:** ಸಂ–ಜಯನಗರದ ಆರ್‌ಎಂವಿ 2ನೇ ಹಂತದ ಮನೆಯಲ್ಲಿ ಏ.18ರಂದು ಈ ಘಟನೆ ನಡೆದಿದೆ. 4 ಲಕ್ಷ ರು. ನಗದು, 99.75 ಲಕ್ಷ ರು. ಮೌಲ್ಯದ 1.4 ಕೆಜಿ ತೂಕದ ಚಿನ್ನಾಭರಣಗಳು, 18.92 ಲಕ್ಷ ರು. ಮೌಲ್ಯದ 22 ಕೆ.ಜಿ. ಬೆಳ್ಳಿವಸ್ತುಗಳು, 6.50 ಲಕ್ಷ ರು. ಮೌಲ್ಯದ ಮೂರು ವಾಚ್‌ಗಳು ಸೇರಿದಂತೆ ಒಟ್ಟು 1.29 ಕೋಟಿ ರು. ಮೌಲ್ಯದ ಬೆಲೆಬಾಳುವ ವಸ್ತುಗಳು ಕಳ್ಳತನವಾಗಿದೆ.

# ಮಾದರಿ ನೀತಿಸಂಹಿತೆ ಉಲ್ಲಂಘಿಸಿದರೆ ಕ್ರಮ: ಜಿಲ್ಲಾ ಚುನಾವಣಾಧಿಕಾರಿ ನಿತೇಶ್ ಪಾಟೀಲ

ಬೆಳಗಾವಿ: ಚುನಾವಣೆಗೆ ಸ್ಪರ್ಧಿಸಿರುವ ಅಭ್ಯರ್ಥಿಗಳು ಆಯಾ ಪಕ್ಷದ ತಾರಾಪ್ರಚಾರಕರ ಜತೆ ಪ್ರಚಾರ ಕಾರ್ಯಕ್ರಮದ ವೇದಿಕೆಯನ್ನು ಹಂಚಿಕೊಂಡರೆ ಆ ಕಾರ್ಯಕ್ರಮದ ಸಂಪೂರ್ಣ ವೆಚ್ಚವನ್ನು ಅಭ್ಯರ್ಥಿಗಳ ವೆಚ್ಚಕ್ಕೆ ಸೇರಿಸಲಾಗುವುದು ಎಂದು ಜಿಲ್ಲಾ ಚುನಾವಣಾಧಿಕಾರಿ ನಿತೇಶ್ ಪಾಟೀಲ ತಿಳಿಸಿದರು.

ಬೆಳಗಾವಿ ಲೋಕಸಭಾ ಕ್ಷೇತ್ರದ ಸಾಮಾನ್ಯ ವೀಕ್ಷಕರು, ವೆಚ್ಚ ವೀಕ್ಷಕರ ಉಪಸ್ಥಿತಿಯಲ್ಲಿ ಜಿಲ್ಲಾಧಿಕಾರಿ ಕಚೇರಿಯ ಸಭಾಂಗಣದಲ್ಲಿ ಮಂಗಳವಾರ(ಏ.23) ನಡೆದ ವಿವಿಧ ರಾಜಕೀಯ ಪಕ್ಷಗಳ ಪ್ರತಿನಿಧಿಗಳು, ಸಹಾಯಕ ಚುನಾವಣಾಧಿಕಾರಿಗಳು ಮತ್ತು ನೋಡಲ್ ಅಧಿಕಾರಿಗಳ ಸಭೆಯಲ್ಲಿ ಅವರು ಮಾತನಾಡಿದರು.

ಮಂದಿರ, ಮಸೀದಿ, ಚರ್ಚ್ ಸೇ-ರಿದಂತೆ ಯಾವುದೇ ಧಾರ್ಮಿಕ ಸ್ಥಳಗಳಲ್ಲಿ ಚುನಾವಣಾ ಪ್ರಚಾರ ಮಾಡಬಾರದು. ಇಂತಹ ಪ್ರಕರಣಗಳು ಕಂಡುಬಂದರೆ ಪ್ರಕರಣ ದಾಖಲಿಸಲಾಗುವುದು.

ಯಾವುದೇ ಶಿಕ್ಷಕಣ ಸಂಸ್ಥೆಗಳಲ್ಲಿ ಪ್ರಚಾರಕಾರ್ಯ ಕೈಗೊಳ್ಳಬೇಕಾದರೆ ಮುಂಚಿತವಾಗಿ ಸಂಬಂಧಿಸಿದ ಸಂಸ್ಥೆಯಿಂದ ಅನುಮತಿ ಪಡೆದುಕೊಳ್ಳಬೇಕು ಎಂದರು.

ಚುನಾವಣಾ ಆಯೋಗದಿಂದ ನಿಯೋಜಿತಗೊಂಡಿರುವ ಸಾಮಾನ್ಯ ವೀಕ್ಷಕರು, ಪೊಲೀಸ್ ವೀಕ್ಷಕರು ಹಾಗೂ ವೆಚ್ಚ ವೀಕ್ಷಕರು ಸಾರ್ವಜನಿಕರ ಭೇಟಿಗೆ ಲಭ್ಯವಿರುತ್ತಾರೆ. ಆದ್ದರಿಂದ ಚುನಾವಣೆಗೆ ಸಂಬಂಧಿಸಿದಂತೆ ಯಾವುದೇ ದೂರು ಅಥ-ವಾ ಲೋಪದೋಷಗಳು ಕಂಡುಬಂದರೆ ವೀಕ್ಷಕರಿಗೆ ಮಾಹಿತಿಯನ್ನು ನೀಡಬಹುದು ಎಂದು ಜಿಲ್ಲಾ ಚುನಾವಣಾಧಿಕಾರಿ ನಿತೇಶ್ ಪಾಟೀಲ ತಿಳಿಸಿದರು.

**ಅಭ್ಯರ್ಥಿಗಳ ಚುನಾವಣಾ ವೆಚ್ಚದ ಮಿತಿ 95 ಲಕ್ಷ:**

ವೆಚ್ಚ ನೋಡಲ್ ಅಧಿಕಾರಿ ಶಂಕರಾನಂದ ಬನಶಂಕರಿ ಅವರು, ಚುನಾವಣೆಗಾಗಿ ಅಭ್ಯರ್ಥಿಗಳು ಮಾಡಬಹುದಾದ





ಕಾನೂನುಬದ್ಧ ಖರ್ಚು-ವೆಚ್ಚಗಳ ಕುರಿತು ಮಾಹಿತಿಯನ್ನು ನೀಡಿದರು.

ರಾಜ್ಯದಲ್ಲಿರುವ ಪ್ರತಿ ಲೋಕಸಭಾ ಕ್ಷೇತ್ರಗಳ ಅಭ್ಯರ್ಥಿಯು 95 ಲಕ್ಷ ರೂಪಾಯಿ ವೆಚ್ಚ ಮಾಡಬಹುದು.

ಚುನಾವಣಾ ಪ್ರಚಾರ, ವಾಹನ ಬಳಕೆ, ಜಾಹೀರಾತು ಇತ್ಯಾದಿ ಕಾನೂನು ಬದ್ಧ ವೆಚ್ಚಗಳನ್ನು ಮಾಡಬಹುದು. ಆದ-ರೆ ಮತದಾರರಿಗೆ ಊಟೋಪಹಾರ ಅಥವಾ ಆಮಿಷಗಳನ್ನು ಒಡ್ಡುವಂತಿಲ್ಲ ಎಂದರು.

ಅಭ್ಯರ್ಥಿಗಳು ತಮ್ಮ ಜಂಟಿ ಖಾತೆಯ ಮೂಲಕವೇ ಚುನಾವಣಾ ಪ್ರಚಾರದ ವೆಚ್ಚ ಮಾಡಬಹುದು. ಹತ್ತು ಸಾವಿರಕ್ಕಿಂತ ಹೆಚ್ಚಿನ ಮೊತ್ತವನ್ನು ಕಡ್ಡಾಯವಾಗಿ ಚೆಕ್ ಮೂಲಕವೇ ಮಾಡಬೇಕು. ಯುಪಿಐ ಮೂಲಕ ಕೂಡ ವೆಚ್ಚ ಪಾವತಿಸಬಹುದು ಎಂದು ಬನಶಂಕರಿ ತಿಳಿಸಿದರು.

ತಾರಾ ಪ್ರಚಾರಕರ ಜತೆ ಅಭ್ಯರ್ಥಿಗಳು ವೇದಿಕೆ ಹಂಚಿಕೊಂಡರೆ ಅಥವಾ ತಾರಾ ಪ್ರಚಾರಕರು ಅಭ್ಯರ್ಥಿಗಳ ಹೆಸರು ಪ್ರಸ್ತಾಪಿಸಿದರೆ, ಕಾರ್ಯಕ್ರಮದ ವೇದಿಕೆ ಅಥವಾ ಕಾರ್ಯಕ್ರಮದಲ್ಲಿ ಅಭ್ಯರ್ಥಿಗಳ ಭಾವಚಿತ್ರ ಬಳಸಿದರೆ ಸದರಿ ಪ್ರಚಾರ ಕಾರ್ಯಕ್ರಮದ ಖರ್ಚು-ವೆಚ್ಚವನ್ನು ಸಂಬಂಧಿಸಿದ ಅಭ್ಯರ್ಥಿಗಳ ಲೆಕ್ಕಕ್ಕೆ ಸೇ-ರಿಸಲಾಗುವುದು ಎಂದು ಬನಶಂಕರಿ ವಿವ-ರಿಸಿದರು.

ಇದೇ ಸಂದರ್ಭದಲ್ಲಿ ಮಾದರಿ ನೀತಿಸಂಹಿತೆ ಕುರಿತು ವಿವರಿಸಿದ ನೋಡಲ್ ಅಧಿಕಾರಿ ಶಿವನಗೌಡ ಪಾಟೀಲ ಅವರು, ಪ್ರಚಾರದ ಸಮಯದಲ್ಲಿ ಜಾತಿ-ಧರ್ಮ, ಸಮುದಾಯ, ಭಾಷೆಗಳ ಮಧ್ಯೆ ಸಂಘರ್ಷಕ್ಕೆ ಪ್ರಚೋದನೆ ನೀಡುವುದು ಹಾಗೂ ಮತದಾರರಿಗೆ ಹಣ ಅಥ-ವಾ ಯಾವುದೇ ಬಗೆಯ ವಸ್ತುಗಳ ಉಡ-ುಗೊರೆಯ ಆಮಿಷಯೊಡ್ಡುವುದು ಮಾದರಿ ನೀತಿಸಂಹಿತೆಯ ಉಲ್ಲಂಘನೆಯಾಗುತ್ತದೆ ಎಂದು ತಿಳಿಸಿದರು.

ಚುನಾವಣಾ ಪ್ರಚಾರಕ್ಕೆ ಸಂಬಂಧಿಸಿದಂತೆ ಪ್ರತಿಯೊಂದಕ್ಕೂ ಅನುಮತಿಯ ಅಗತ್ಯವಿರುತ್ತದೆ. ಆದ್ದರಿಂದ ಕಡ್ಡಾಯವಾಗಿ ಅನುಮತಿ ಪಡೆದುಕೊಂಡು ಮಾಡಬೇಕಾಗಿರುತ್ತದೆ ಎಂದು ಹೇಳಿದರು.

ಸಾಮಾನ್ಯ ವೀಕ್ಷಕರಾದ ಎಂ.ಕೆ.ಅರವಿಂದ ಕುಮಾರ್, ಪೊಲೀಸ್ ವೀಕ್ಷಕರಾದ ಪವನ ಕುಮಾರ್, ವೆಚ್ಚ ವೀಕ್ಷಕರಾದ ಹರಕ್ರಿಪಾಲ್ ಖಟಾನಾ ಹಾಗೂ ನರಸಿಂಗರಾವ್ ಬಿ., ಪೊಲೀಸ್ ಆಯುಕ್ತರಾದ ಯಡಾ ಮಾರ್ಟಿನ್ ಮಾರ್ಬನ್ಯಾಂಗ್, ಡಿಸಿಪಿ ರೋಹನ್ ಜಗದೀಶ್, ಪ್ರೊಬೇಷನರಿ ಐ.ಎ.ಎಸ್. ಅಧಿಕಾರಿ ಶುಭಂ ಶುಕ್ಲಾ ಉಪಸ್ಥಿತರಿದ್ದರು.

ಎಲ್ಲ ರಾಜಕೀಯ ಪಕ್ಷಗಳ ಪ್ರತಿನಿಧಿಗಳು, ನೋಡಲ್ ಅಧಿಕಾರಿಗಳು ಸಭೆಯಲ್ಲಿ ಪಾಲ್ಗೊಂಡಿದ್ದರು.



## ಸಿಐಡಿ ಅಧಿಕಾರಿಗಳ ಹೆಸರಲ್ಲಿ ಮಹಿಳೆಗೆ ವಂಚಿಸಿದ್ದವರ ಬಂಧನ

ಹುಬ್ಬಳ್ಳಿ: ಸಿಐಡಿ ಅಧಿಕಾರಿಯೆಂದು ಹಳೇ ಹುಬ್ಬಳ್ಳಿಯ ಮಹಿಳೆಯೊಬ್ಬರಿಂದ ಹಣ ಪಡೆದು ವಂಚಿಸಿದ ಮೂವರು ಆರೋಪಿಗಳನ್ನು ಹಳೇಹುಬ್ಬಳ್ಳಿ ಠಾಣೆ ಪೊಲೀಸರು ಬಂಧಿಸಿ, ಎರಡು ಮೊಬೈಲ್ ಮತ್ತು ಬುಲೆಟ್ ಬೈಕ್ ವಶಪಡಿಸಿಕೊಂಡಿದ್ದಾರೆ.

ಹಳೇ ಹುಬ್ಬಳ್ಳಿ ಕೃಷ್ಣಾಪುರ ಓಣಿಯ ಚೇತನ ಹಡಪದ, ಲಿಂಗಸೂರಿನ ಪರಶುರಾಮಗೌಡ ಪಾಟೀಲ ಮತ್ತು ಗಂಗಾವತಿ ಕಾರಟಗಿಯ ಮಧು ಎಂ. ಬಂಧಿತರು.

ಹಳೇಹುಬ್ಬಳ್ಳಿ ಚೈತನ್ಯ ನಗರದ ಯಶೋಧಾ ಅವರಿಗೆ ಸಿಐಡಿ ಕ್ರೈಂ ಬ್ರ್ಯಾಂಚ್ ಪೋಲಿಸರು ಎಂದು ಸುಳ್ಳು ಹೇಳಿ, ಬೆದರಿಸಿ ಹಣ ಪಡೆದುಕೊಂಡಿದ್ದರು.

ಈ ಕುರಿತು ಮಹಿಳೆ ಹಳೇಹುಬ್ಬಳ್ಳಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಿಸಿದ್ದರು. ತನಿಖೆ ಕೈಗೊಂಡಿದ್ದ ಇನ್‌ಸ್ಪೆಕ್ಟರ್ ಸುರೇಶ ಯಳ್ಳೂರ, ಹಿರಿಯ ಅಧಿಕಾರಿಗಳ ಮಾರ್ಗದರ್ಶನದಲ್ಲಿ ಕಾರ್ಯಾಚರಣೆ ನಡೆಸಿದ್ದರು.

## ಕೇಂದ್ರದಲ್ಲಿ ಗ್ಯಾರಂಟಿ ಈಡೇರಿಸಲು ಕಾಂಗ್ರೆಸ್‌ಗೆ ಮತ ನೀಡಿ: ಸಚಿವ ತಿಮ್ಮಾಪೂರ

ಮುಧೋಳ : ರಾಜ್ಯದಲ್ಲಿ ನುಡಿದಂತೆ ನಡೆದ ಕಾಂಗ್ರೆಸ್ ಸರ್ಕಾರ, ಚುನಾವಣಾ ಪೂರ್ವದಲ್ಲಿ ನೀಡಿದ್ದ ಪಂಚ ಗ್ಯಾರಂಟಿಗಳನ್ನು ಈಡೇರಿಸಿದೆ. ಅದರಂತೆ ಕೇಂದ್ರದಲ್ಲಿ ಕಾಂಗ್ರೆಸ್ ನೀಡಿರುವ ಗ್ಯಾರಂಟಿ ಈಡೇರಿಸಲು ಕಾಂಗ್ರೆಸ್‌ಗೆ ಮತ ನೀಡುವ ಮೂಲಕ ಅಧಿಕಾರಕ್ಕೆ ತರಬೇಕೆಂದು ಅಬಕಾರಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಆರ್.ಬಿ.ತಿಮ್ಮಾಪೂರ ವಿನಂತಿಸಿದರು.

ಕಾಂಗ್ರೆಸ್ ಘೋಷಿಸಿದ್ದ ಗ್ಯಾರಂಟಿಗಳ ಮೇಲೆ ನಂಬುಗೆಯಿಟ್ಟು ರಾಜ್ಯದಲ್ಲಿ ಕಾಂಗ್ರೆಸ್ ಪಕ್ಷವನ್ನು ಬಹುಮತದೊಂದಿಗೆ ಆಯ್ಕೆ ಮಾಡಿದ್ದೀರಿ. ಮುಖ್ಯಮಂತ್ರಿ ಸಿದ್ಧರಾಮಯ್ಯನವರು ಹಾಗೂ ಡಿಸಿಎಂ ಡಿ.ಕೆ.ಶಿವಕುಮಾರ ಅವರ ನೇತೃತ್ವದಲ್ಲಿ ರಾಜ್ಯದ ಜನತೆಗೆ ನೀಡಿದ್ದ ಗ್ಯಾರಂಟಿಗಳನ್ನು ಈಡೇರಿಸುವ ಮೂಲಕ ನುಡಿದಂತೆ ನಡೆದ ಸರ್ಕಾರ ನಮ್ಮದು.

ಇಂತಹ ಭೀಕರ ಬರಗಾಲದ ನಡುವೆಯೂ ಗ್ಯಾರಂಟಿಗಳನ್ನು ರಾಜ್ಯದ ಜನತೆಗೆ ನೀಡಲಾಗುತ್ತಿದೆ. ಮುಂದೆಯೂ ನೀಡುತ್ತೇವೆ. ಅದರಂತೆ ಕೇಂದ್ರದ ನಮ್ಮ ನಾಯಕರಾದ ರಾಹುಲಗಾಂಧಿ ಹಾಗೂ ಮಲ್ಲಿಕಾರ್ಜುನ ಖರ್ಗೆಯವರು ದೇಶದ ಜನತೆಗೆ ನೀಡಿರುವ ಗ್ಯಾರಂಟಿಗಳಾದ ಪ್ರತಿಯೊಬ್ಬ ವಿದ್ಯಾವಂತರಿಗೆ ಪ್ರತಿವರ್ಷ ಯುವನ್ಯಾಯದಡಿ ರೂ. 1 ಲಕ್ಷ ವೇತನವನ್ನು ನೀಡಲಾಗುವುದು, ಪ್ರತಿ ಬಡ ಕುಟುಂಬದ ಮಹಿಳೆಗೆ ರೂ. 1 ಲಕ್ಷ, ರೈತನ್ಯಾಯದಡಿ ಸಾಲಮನ್ನಾ, ಶ್ರಮಿಕ ನ್ಯಾಯದಡಿ ಕೂಲಿಕಾರ್ಮಿಕರಿಗೆ ಪ್ರತಿದಿನ ರೂ. 400 ವೇತನ,



ಸಾಮಾಜಿಕ ಮತ್ತು ಆರ್ಥಿಕ ಸಮಾನತೆಗಾಗಿ ರಾಷ್ಟ್ರವ್ಯಾಪ್ತಿ ಸಮುದಾಯದ ಜಾತಿಗಣತಿ ಸೇ-ರಿದಂತೆ ಹತ್ತು ಹಲವಾರು ಗ್ಯಾರಂಟಿಗಳನ್ನು ಈಡೇರಿಸಲು ತಮ್ಮ ಮತ ಕಾಂಗ್ರೆಸ್ ಪಕ್ಷಕ್ಕೆ ನೀಡುವುದು ಅತ್ಯವಶ್ಯವಾಗಿದೆ.

ತಾವೆಲ್ಲರೂ ಕಾಂಗ್ರೆಸ್ ಅಭ್ಯರ್ಥಿ ಸಂಯುಕ್ತಾ ಪಾಟೀಲ ಅವರನ್ನು ಅತ್ಯಂತ ಅಧಿಕ ಮತಗಳ ಅಂತರದಿಂದ ಗೆಲ್ಲಿಸಬೇಕೆಂದು ಅವರು ಮನವಿ ಮಾಡಿದರು.

ಇದೇ ಸಂದರ್ಭದಲ್ಲಿ ರಾಜ್ಯದ ವಿಧಾನಸಭಾ ಚುನಾವಣಾ ಸಂದರ್ಭದಲ್ಲಿ ನೀಡಿದಂತೆ ಕೇಂದ್ರದ ಗ್ಯಾರಂಟಿ ಕಾರ್ಡುಗಳನ್ನು ವಿತ-ರಿಸಲಾರಂಭಿಸಿದಾಗ ನೆರೆದಿದ್ದ ಜನ ಒಬ್ಬರ ಮೇಲೊಬ್ಬರು ಮುಗಿಬಿದ್ದು ಗ್ಯಾರಂಟಿ ಕಾರ್ಡುಗಳನ್ನು ಪಡೆದರು.

ಈ ಸಂದರ್ಭದಲ್ಲಿ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷರುಗಳಾದ ಧರೆಪ್ಪ ಸಾಂಗ್ಲೀಕರ, ಅಶೋಕ ಕಿವಡಿ, ಸಿದ್ದು ಸೂರ್ಯವಂಶಿ, ಮಿರ್ಜಾ ನಾಯಿಕವಾಡಿ, ರಾಜಮಾ ಬೇಪಾರಿ, ಶೋಭಾ ಜಿಗಜಿನ್ನಿ, ಯುಸೂಫ್ ಜಮಾದಾರ, ದಾನೇಶ ತಡಸಲೂರ, ಎಸ್.ಪಿ.ದಾನಪ್ಪಗೋಳ, ಜಾಗೀರದಾರ, ಮೈಬೂಬ ಬಿಸ್ತಿ, ಬಸವರಾಜ ಬಳೆಗಾರ ಸೇರಿದಂತೆ ಅನೇಕರು ಭಾಗವಹಿಸಿದ್ದರು.



## ಈಜಲು ಹೋದ ಮೂವರು ಬಾಲಕರ ದುರ್ಮರಣ

ಕೆಂಭಾವಿ: ಈಜಲು ಕೆರೆಗೆ ಹೋಗಿ ಮೂವರು ಬಾಲಕರು ನೀರು ಪಾಲಾಗಿರುವ ದುರ್ಘಟನೆ ಮಂಗಳವಾರ ಪಟ್ಟಣ ಸಮೀಪ ನಗನೂರ ಗ್ರಾಮದಲ್ಲಿ ನಡೆದಿದೆ.

ಹೈಯಾಳಪ್ಪ (11),ಶರಣಬಸವ (10) ಹಾಗೂ ಮನೋಜ (10) ಮೃತ ದುರ್ದೈವಿಗಳಾಗಿದ್ದಾರೆ.

ಬಿಸಿಲಿನ ಝಳದಿಂದ ತಪ್ಪಿಸಿಕೊಳ್ಳಲು ಮೂವರು ಸ್ನೇಹಿತರು ಈಜಾಡಲು ನಗನೂರ ಗ್ರಾಮದ ಹೊರವಲಯದಲ್ಲಿರುವ ಕೆರೆಗೆ ತೆರಳಿದ ವೇಳೆ ನೀರು ಪಾಲಾಗಿದ್ದಾರೆ. ಬಾಲಕರ ಶವಗಳನ್ನು ಸ್ಥಳೀಯರು ಹೊರತೆಗಿದಿದ್ದು , ಶಹಾಪುರ ತಾಲೂಕಾಸ್ಪತ್ರೆಗೆ ರವಾನಿಸಲಾಗಿದೆ. ಮಕ್ಕಳನ್ನು ಕಳೆದುಕೊಂಡ ಪಾಲಕರ ಆಕ್ರಂದನ ಮುಗಿಲು ಮುಟ್ಟಿದೆ.

ಘಟನಾ ಸ್ಥಳಕ್ಕೆ ಎಸ್ಪಿ ಸಂಗೀತಾ ಅವರು ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ. ಈ ಕುರಿತು ಕೆಂಭಾವಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

## ಸರ್ಕಾರದ ಯೋಜನೆ ಮನೆ ಮನೆಗೆ ಮುಟ್ಟಿಸಿ ಕಾಂಗ್ರೆಸ್ ಅಭ್ಯರ್ಥಿ ಗೆಲ್ಲಿಸಿ: ಪ್ರಕಾಶ ಹುಕ್ಕೇರಿ



ಚಿಕ್ಕೋಡಿ: ಪಕ್ಷದ ಕಾರ್ಯಕರ್ತರೆಲ್ಲರೂ ಒಗ್ಗಟ್ಟಾಗಿ ಕಾಂಗ್ರೆಸ್ ಸರ್ಕಾರದ ಯೋಜನೆಗಳನ್ನು ಜನರ ಮನೆ ಮನಗೆ ಮುಟ್ಟಿಸುವ ಪ್ರಯತ್ನ ಮಾಡಿ ಕಾಂಗ್ರೆಸ್ ಅಭ್ಯರ್ಥಿ ಪ್ರಿಯಂಕಾ ಜಾರಕಿಹೊಳಿ ಅವರನ್ನು ಗೆಲ್ಲಿಸಲು ಶ್ರಮಿಸಬೇಕೆಂದು ವಿಧಾನ ಪರಿಷತ್ ಸದಸ್ಯರು ಹಾಗೂ ಕರ್ನಾಟಕ ಸರ್ಕಾರದ ದೆಹಲಿ ವಿಶೇಷ ಪ್ರತಿನಿಧಿ ಪ್ರಕಾಶ ಹುಕ್ಕೇರಿ ಅವರು ಹೇಳಿದರು.

ಚಿಕ್ಕೋಡಿ ಲೋಕಸಭಾ ಚುನಾವಣೆ ಹಿನ್ನೆಲೆಯಲ್ಲಿ ಚಿಕ್ಕೋಡಿ ಲೋಕಸಭಾ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಪ್ರಿಯಂಕಾ ಜಾರಕಿಹೊಳಿ ಪರ ಸದಲಗಾ ಪಟ್ಟಣದಲ್ಲಿ ಹಮ್ಮಿಕೊಂಡಿದ್ದ ಕಾಂಗ್ರೆಸ್ ಪಕ್ಷದ ಕಾರ್ಯಕರ್ತರ ಸಭೆಯನ್ನು ಉದ್ದೇಶಿಸಿ ಮಾತನಾಡಿದ ಅವರು, ಸರ್ಕಾರದ ಗ್ಯಾರಂಟಿಗಳು ಕಾಂಗ್ರೆಸ್ ಅಭ್ಯರ್ಥಿ ಗೆಲುವಿಗೆ ಸಹಕಾ-ರಿಯಾಗಲಿವೆ ಎಂದು ತಿಳಿಸಿದರು. ಮುಖ್ಯಮಂತ್ರಿ ಸಿದ್ದರಾಮಯ್ಯನವರ ನೇತೃತ್ವದ ರಾಜ್ಯ ಸರ್ಕಾರವು ಹಲವು ಅಭಿವೃದ್ಧಿ ಯೋಜನೆಗಳನ್ನು ಜಾರಿಗೆ ತಂದಿದೆ. 2023ರ ವಿಧಾನಸಭೆ ಚುನಾವಣೆಯ ಪೂರ್ವದಲ್ಲಿ ಘೋಷಿಸಿದಂತೆ ಪಂಚ ಗ್ಯಾರಂಟಿಗಳನ್ನು ಜಾರಿಗೆ ತಂದು ನುಡಿದಂತೆ ನಡೆಯುವ ಸರ್ಕಾರವೆಂದು ಸಾಬೀತು ಪಡಿಸಿದೆ. ಈಗಾಗಲೇ ಪಕ್ಷವು ಚುನಾವಣಾ ಪ್ರಣಾಳಿಕೆಯಲ್ಲಿ ಮಹಾಲಕ್ಷ್ಮಿ ಯೋಜನೆಯನ್ನು ಅನಾವರಣಗೊಳಿಸಿದೆ, ಇದು ಬಡವರಿಗೆ ಬೇಷರತ್ತಾದ ನಗದು ವರ್ಗಾವಣೆಯಾಗಿ ವರ್ಷಕ್ಕೆ ರೂ 1 ಲಕ್ಷವನ್ನು ನೀಡುತ್ತದೆ. ಕೇಂದ್ರದಲ್ಲಿ ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದರೆ ಅನೇಕ ಯೋಜನೆಗಳನ್ನು ಜಾರಿಗೊಳಿಸುವುದಾಗಿ ಕಾಂಗ್ರೆಸ್ ಪಕ್ಷ ತಿಳಿಸಿದೆ. ಆದ್ದರಿಂದ ಸರ್ವರೂ ಕಾಂಗ್ರೆಸ್ ಪಕ್ಷವನ್ನು ಬೆಂಬಲಿಸಬೇಕೆಂದು ಮನವಿ ಮಾಡಿದರು.

## ಎರಡನೇ ಹಂತದ ರ್‍ಯಾಂಡಮೈಜೇಷನ್ ಪೂರ್ಣ

# ಮತಗಟ್ಟೆವಾರು ಇವಿಎಂ ಹಂಚಿಕೆ: ಜಿಲ್ಲಾ ಚುನಾವಣಾಧಿಕಾರಿ ನಿತೇಶ್ ಪಾಟೀಲ

ಬೆಳಗಾವಿ: ಲೋಕಸಭಾ ಚುನಾವಣೆಗಾಗಿ 02-ಬೆಳಗಾವಿ ಲೋಕಸಭೆ ಕ್ಷೇತ್ರದ ಮತಗಟ್ಟೆವಾರು ಎಲೆಕ್ಟ್ರಾನಿಕ್ ಮತಯಂತ್ರ(ಇವಿಎಂ) ಗಳ ವಿಂಗಡಣೆಯನ್ನು ಚುನಾವಣಾ ಆಯೋಗದ ಮಾರ್ಗಸೂಚಿ ಪ್ರಕಾರ ಎರಡನೇ ಹಂತದ ರ್‍ಯಾಂಡಮೈಜೇಷನ್ ಮೂಲಕ ನಿರ್ಧರಿಸಲಾಯಿತು.

ಬೆಳಗಾವಿ ಲೋಕಸಭಾ ಕ್ಷೇತ್ರದ ಸಾಮಾನ್ಯ ವೀಕ್ಷಕರು, ವೆಚ್ಚ ವೀಕ್ಷಕರ ಉಪಸ್ಥಿತಿಯಲ್ಲಿ ಜಿಲ್ಲಾಧಿಕಾರಿ ಕಚೇರಿಯ ಸಭಾಂಗಣದಲ್ಲಿ ಮಂಗಳವಾರ(ಏ.23) ನಡೆದ ವಿವಿಧ ರಾಜಕೀಯ ಪಕ್ಷಗಳ ಪ್ರತಿನಿಧಿಗಳ ಸಮ್ಮುಖದಲ್ಲಿ ರ್‍ಯಾಂಡಮೈಜೇಷನ್ ಪ್ರಕ್ರಿಯೆ ನಡೆಯಿತು.

ಈಗಾಗಲೇ ಮೊದಲ ಹಂತದ ರ್‍ಯಾಂಡಮೈಜೇಷನ್ ಪೂರ್ಣಗೊಳಿಸಿ ಲೋಕಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿರುವ ಎಂಟು ವಿಧಾನಸಭಾ ಕ್ಷೇತ್ರದ ಸ್ಟ್ರಾಂಗ್



ರೂಮ್ ಗಳಿಗೆ ಕಳಿಸಲಾಗಿದ್ದು, ಎರಡನೇ ಹಂತದ ರ್‍ಯಾಂಡಮೈಜೇಷನ್ ಮೂಲಕ ಮತಗಟ್ಟೆವಾರು ಕಳಿಸಬೇಕಾದ ಎಲೆಕ್ಟ್ರಾನಿಕ್ ಮತಯಂತ್ರ(ಇವಿಎಂ) ಗಳನ್ನು ವಿಂಗಡಿಸಲಾಯಿತು.

ರ್‍ಯಾಂಡ ಮೈಜೇಷನ್ ಪ್ರಕ್ರಿಯೆ ಬಳಿಕ ಮಾತನಾಡಿದ ಜಿಲ್ಲಾ ಚುನಾವಣಾಧಿಕಾರಿ ನಿತೇಶ್ ಪಾಟೀಲ ಅವರು, ಎರಡನೇ ಹಂತದ ರ್‍ಯಾಂಡಮೈಜೇಷನ್ ಮೂಲಕ ನಿರ್ಧರಿಸಲಾಗಿರುವ ಎಲೆಕ್ಟ್ರಾನಿಕ್ ಮತಯಂತ್ರ(ಇವಿಎಂ)ಗಳನ್ನು ಮಸ್ಟ-ರಿಂಗ್ ದಿನ ಮತಗಟ್ಟೆ ಅಧಿಕಾ-ರಿಗಳ ತಂಡದ ಮೂಲಕ ಆಯಾ ಮತಗಟ್ಟೆಗಳಿಗೆ ಕಳಿಸಲಾಗುವುದು ಎಂದರು.

ಶೇ.130 ರಷ್ಟು ಕಂಟ್ರೋಲ್ ಯುನಿಟ್, ಬ್ಯಾಲೆಟ್ ಯುನಿಟ್ ಮತ್ತು ವಿವಿಪ್ಯಾಟ್ ಗಳನ್ನು ರ್‍ಯಾಂಡಮೈಜೇಷನ್ ಮೂಲಕ ಅಂತಿಮಗೊಳಿಸಲಾಗುತ್ತದೆ. ಶೇ.100 ರಷ್ಟು ಮತಯಂತ್ರಗಳು ಮತಗಟ್ಟೆಗಳಿಗೆ ಕಳಿಸಲಾಗುತ್ತದೆ. ಹೆಚ್ಚುವರಿ ಇರುವ ಶೇ.30 ರಷ್ಟು ಮತಯಂತ್ರಗಳನ್ನು ಕಾಯ್ದಿರಿಸಲಾಗುತ್ತದೆ.

ಮತಗಟ್ಟೆಗಳಿಗೆ ಕಳಿಸಲಾಗಿರುವ ಮತಯಂತ್ರಗಳಲ್ಲಿ ತಾಂತ್ರಿಕ ದೋಷ ಕಂಡುಬಂದಲ್ಲಿ ಕಾಯ್ದಿ-ರಿಸಲಾಗಿರುವ ಮತಯಂತ್ರಗಳನ್ನು ಬಳಕೆ ಮಾಡಲಾಗುತ್ತದೆ ಎಂದು ಜಿಲ್ಲಾ ಚುನಾವಣಾಧಿಕಾರಿ ನಿತೇಶ್ ಪಾಟೀಲ ತಿಳಿಸಿದರು.

ಮನೆ ಮನೆಯಿಂದ ಮತಸಂಗ್ರಹ ಏ.26 ರಿಂದ:

ಏ.25, 26 ಹಾಗೂ 27 ರಂದು ಮನೆ ಮನೆಗಳಿಗೆ ತೆರಳಿ ಮತಸಂಗ್ರಹ ನಡೆಯಲಿದೆ. ಈಗಾಗಲೇ ನಿಗದಿತ ನಮೂನೆ ಭರ್ತಿಮಾಡುವ ಮೂಲಕ ಮನೆಯಿಂದ ಮತ ಚಲಾವಣೆಗೆ ಒಪ್ಪಿಗೆ ನೀಡಿರುವ 85 ವರ್ಷ ಮೇಲ್ಪಟ್ಟವರು ಹಾಗೂ ವಿಕಲಚೇತನ-ರಿಂದ ಮತಸಂಗ್ರಹ ಮಾಡಲಾಗುವುದು ಎಂದು ಚುನಾವಣಾಧಿಕಾರಿ ನಿತೇಶ್ ಪಾಟೀಲ ವಿವರಿಸಿದರು.

ಮನೆ ಮನೆಗಳಿಗೆ ತೆರಳಿ ಮತ ಸಂಗ್ರಹಿಸುವ ಸಂದರ್ಭದಲ್ಲಿ ರಾಯಕೀಯ ಪಕ್ಷಗಳ ಏಜೆಂಟರು ಉಪಸ್ಥಿತರಿರಬಹುದು. ಆದರೆ ಈ ಬಗ್ಗೆ ಆಯಾ ಪಕ್ಷ ಅಥವಾ ಅಭ್ಯರ್ಥಿಗಳು ಏಜೆಂಟರನ್ನು ನೇಮಿಸಿ ಮುಂಚಿತವಾಗಿ ತಿಳಿಸಬೇಕು ಎಂದರು.

ಸಾಮಾನ್ಯ ವೀಕ್ಷಕರಾದ ಎಂ.ಕೆ. ಅರವಿಂದ ಕುಮಾರ್, ಪೊಲೀಸ್ ವೀಕ್ಷಕರಾದ ಪವನ ಕುಮಾರ್, ವೆಚ್ಚ ವೀಕ್ಷಕರಾದ ಹರಕ್ರಿಪಾಲ್ ಖಟಾನಾ ಹಾಗೂ ನರಸಿಂಗರಾವ್ ಬಿ., ಪೊಲೀಸ್ ಆಯುಕ್ತರಾದ ಯಡಾ ಮಾರ್ಟಿನ್ ಮಾರ್ಬನ್ಯಾಂಗ್, ಡಿಸಿಪಿ ರೋಹನ್ ಜಗದೀಶ್, ಪ್ರೊಬೇಷನರಿ ಐ.ಎ.ಎಸ್. ಅಧಿಕಾರಿ ಶುಭಂ ಶುಕ್ಲಾ ಉಪಸ್ಥಿತ-ರಿದ್ದರು.

ಎಲ್ಲ ರಾಜಕೀಯ ಪಕ್ಷಗಳ ಪ್ರತಿನಿಧಿಗಳು, ನೋಡಲ್ ಅಧಿಕಾರಿಗಳು ಸಭೆಯಲ್ಲಿ ಪಾಲ್ಗೊಂಡಿದ್ದರು.

# ಹತಾಶ ಬಿಜೆಪಿಯಿಂದ ಸಾವಿನ ಮನೆಯಲ್ಲಿ ರಾಜಕೀಯ: ಚನ್ನರಾಜ ಹಟ್ಟಿಹೊಳಿ ಆರೋಪ; ಬೃಹತ್ ರ್‍ಯಾಲಿ ನಡೆಸಿದ ಕಾಂಗ್ರೆಸ್

ಬೆಳಗಾವಿ: ಚುನಾವಣೆಗೆ ಹೋಗಲು ಯಾವುದೇ ವಿಷಯವಿಲ್ಲದೆ ಹತಾಶರಾಗಿರುವ ಭಾರತೀಯ ಜನತಾಪಾರ್ಟಿವರು ನೇಹಾ ಹಿರೇಮಠ ಸಾವಿನ ಪ್ರಕರಣವನ್ನು ರಾಜ-ಕೀಯಕ್ಕೆ ಬಳಸುವಂತಹ ನೀಚತನಕ್ಕಿಳಿದಿದ್ದಾರೆ ಎಂದು ವಿಧಾನ ಪರಿಷತ್ ಸದಸ್ಯ ಚನ್ನರಾಜ ಹಟ್ಟಿಹೊಳಿ ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಬೆಳಗಾವಿಯಲ್ಲಿ ಮಂಗಳವಾರ ನೇಹಾ ಹಿರೇಮಠ ಆತ್ಮಕ್ಕೆ ಶಾಂತಿ ಸಿಗಲಿ, ಅಪರಾಧಿಗೆ ಕಠಿಣ ಶಿಕ್ಷೆಯಾಗಲಿ ಎಂದು ಆಗ್ರಹಿಸಿ ಕಾಂಗ್ರೆಸ್ ಪಕ್ಷದಿಂದ ಹಮ್ಮಿಕೊಳ್ಳಲಾಗಿದ್ದ ರ್‍ಯಾಲಿಯ ಸಂದರ್ಭದಲ್ಲಿ ಮಾಧ್ಯಮಗಳಿಗೆ ಅವರು ಪ್ರತಿಕ್ರಿಯೆ ನೀಡಿದರು.

ನೇಹಾ ಹಿರೇಮಠ ಆತ್ಮಕ್ಕೆ ಶಾಂತಿ ಸಿಗಲಿ, ನ್ಯಾಯ ಸಿಗಲಿ ಎಂದು ಈ ರ್‍ಯಾಲಿಯ ಮೂಲಕ ಜಿಲ್ಲಾಧಿಕಾರಿಗಳಿಗೆ ಮನವಿ ಮಾಡುತ್ತಿದ್ದೇವೆ. ಇಂತಹ ನೀಚ ಕೃತ್ಯವನ್ನು ವಿಕೃತ ಮನುಷ್ಯನಷ್ಟೇ ಮಾಡಬಹುದು. ಕಾನೂನು ಪ್ರಕಾರ ಅಪರಾಧಿಗೆ ಕಠಿಣ ಶಿಕ್ಷೆ ಕೊಡಬೇಕು ಎಂದು ಅವರು ಆಗ್ರಹಿಸಿದರು.




ಸರಕಾರ ಈಗಾಗಲೆ ಮಹಿಳೆಯ-ರಿಗೆ ಆಗುವ ಅನ್ಯಾಯ ಪ್ರಕರಣಗಳನ್ನು ಶೀಘ್ರ ವಿಲೇವಾರಿ ಮಾಡಲೆಂದು ವಿಶೇಷ ನ್ಯಾಯಾಲಯ ಸ್ಥಾಪನೆ ಮಾಡಲು ನಿರ್ಧರಿಸಿದೆ. ತನ್ಮೂಲಕ ಮಹಿಳೆಯರ ಜೊತೆಗಿದ್ದೇವೆ ಎನ್ನುವುದನ್ನು ತೋರಿಸಿದ್ದೇವೆ. ಈ ವಿಷಯವನ್ನು ರಾಜಕೀಯ ಮಾಡಬೇಡಿ ಎಂದು ಈಗಾಗಲೆ ನೇಹಾ ತಂದೆ ನಿರಂಜನ ಹಿರೇಮಠ ಅವರು ಮನವಿ ಮಾಡಿದ್ದಾರೆ. ಎಲ್ಲ ಪಕ್ಷದವರೂ ತಮ್ಮ ಮನೆಗೆ ಬಂದು ಸಾಂತ್ವನ ಹೇಳಿದ್ದಾರೆ, ನ್ಯಾಯ ಕೊಡಿಸುವ ಭರವಸೆ ಸಿಕ್ಕಿದೆ ಎಂದು ಅವರು ಹೇಳಿದ್ದಾರೆ. ಇಷ್ಟಾದರೂ ಬಿಜೆಪಿಯವರು ಪ್ರಕರಣವನ್ನು ರಾಜಕೀಯಕ್ಕೆ ಬಳಸುತ್ತಿರುವುದನ್ನು ನಾವು ಖಂಡಿಸುತ್ತೇವೆ ಎಂದು ಚನ್ನರಾಜ ತಿಳಿಸಿದರು.




ಸಾವಿನ ಮನೆಯಲ್ಲಿ ರಾಜಕೀಯ ಮಾಡುವ ಬಿಜೆಪಿಯ ಹಿಡನ್ ಅಜೆಂಡಾ ಯಶಸ್ವಿಯಾಗುವುದಿಲ್ಲ. ಜನರು ಎಲ್ಲವನ್ನೂ ಗಮನಿಸುತ್ತಿದ್ದಾರೆ. ಕುಟುಂಬಕ್ಕೆ ನ್ಯಾಯ ಸಿಗಬೇಕು. ಮುಂದೆ ಯಾರೂ ಇಂತಹ ಕೃತ್ಯಕ್ಕೆ ಇಳಿಯಬಾರದು ಎನ್ನುವುದು ನಮ್ಮ ಕಳಕಳಿ ಎಂದ ಅವರು, ಪ್ರಧಾನಿ ನರೇಂದ್ರ ಮೋದಿಯವರು ಕೇವಲ ಬೇಜವಾಬ್ದಾ-ರಿಯುತ ಭಾಷಣ ಮಾಡುವುದನ್ನು ಬಿಟ್ಟು, ದೇಶದಲ್ಲಿ ಮಹಿಳೆಯರ ರಕ್ಷಣೆಗೆ ಕಠಿಣ ಕಾನೂನು ತರಲಿ. ರಾಜ್ಯ ಸರಕಾರ ಕೈಗೊಂಡಂತೆ ವಿಶೇಷ ನ್ಯಾಯಾಲಯ ಸ್ಥಾಪನೆಯಂತಹ ಸೂಕ್ತ ಕ್ರಮಗಳನ್ನು ಕೈಗೊಳ್ಳಲಿ ಎಂದು ಒತ್ತಾಯಿಸಿದರು.

ಇಂತಹ ಕೃತ್ಯ ಯಾವ ಹೆಣ್ಣು ಮಗಳಿಗೂ ಆಗಬಾರದು. ಅಂತಹ ಶಿಕ್ಷೆ ಅಪರಾಧಿಗೆ ಆಗಬೇಕು. ಹಾಗಾಗಿ ಪ್ರಕರಣವನ್ನು ಸಿಐಡಿಗೆ ವಹಿಸಲಾಗಿದೆ. ವಿಶೇಷ ನ್ಯಾಯಾಲಯ ಸ್ಥಾಪನೆ ಮಾಡಲಾಗಿದೆ. ಆದರೆ ಬಿಜೆಪಿಯವರನ್ನು ನೋಡಿದರೆ ಪಾಪ ಎನಿಸುತ್ತಿದೆ. ಚುನಾವಣೆಗೆ ಹೋಗಲು ಅವರ ಬಳಿ ವಿಷಯವಿಲ್ಲ. ಬರಗಾಲಕ್ಕೆ ಕೇಂದ್ರ ಪರಿಹಾರ ಕೊಡಲಿಲ್ಲ ಎಂದು ಜನರು ಅವರು ಹೋದಲ್ಲೆಲ್ಲ ಕೇಳುತ್ತಿದ್ದಾರೆ. ಹಾಗಾಗಿ ದಿಕ್ಕು ತೋಚದೆ ಹತಾಶ ಮನೋಭಾವದಿಂದ ಸಾವಿನ ಮನೆಯಲ್ಲಿ ರಾಜಕೀಯ ಮಾಡುತ್ತಿದ್ದಾರೆ ಎಂದು ಚನ್ನರಾಜ ಹಟ್ಟಿಹೊಳಿ ಹೇಳಿದರು.

ಕಾಂಗ್ರೆಸ್ ಕಾರ್ಯಕರ್ತರು ಕಾಂಗ್ರೆಸ್ ಭವನದಿಂದ ಜಿಲ್ಲಾಧಿಕಾರಿ ಕಚೇರಿವರೆಗೆ ರ್‍ಯಾಲಿ ನಡೆಸಿ, ಮನವಿ ಸಲ್ಲಿಸಿದರು.

ಶಾಸಕರಾದ ರಾಜು ಸೇಠ್, ಬಾಬಾಸಾಹೇಬ ಪಾಟೀಲ, ಕಾಂಗ್ರೆಸ್ ಜಿಲ್ಲಾಧ್ಯಕ್ಷ ವಿನಯ ನಾವಲಗಟ್ಟಿ, ನ್ಯಾಯವಾದಿ ಆರ್.ಪಿ.ಪಾಟೀಲ, ಜಯಶ್ರೀ ಇದ್ದರು.

## ಹೆಂಡತಿಗೆ ಪೋಲಿ ಮೆಸೇಜ್
### ಕಿಡಿಗೇಡಿಯನ್ನು ಕೊಲೆಗೈದು ಪೊಲೀಸ್ ಸ್ಟೇಷನ್‌ಗೆ ಬಂದ ಪತಿ ಪೂಜಾರಿ



ರಾಯಚೂರು: ತನ್ನ ಹೆಂಡತಿಗೆ ಮೆಸೇಜ್ ಮಾಡುತ್ತಿದ್ದಾನೆಂದು ಅನ್ಯ ಕೋಮಿನ ವ್ಯಕ್ತಿಯೊಬ್ಬನನ್ನು ದೇವಾಲಯದ ಪೂಜಾ–ರಿಯೇ ಭೀಕರವಾಗಿ ಕೊಲೆ ಮಾಡಿ ಪೊಲೀಸ–ರಿಗೆ ಶರಣಾಗಿದ್ದಾನೆ. ಈ ಘಟನೆಯು ಮಸ್ಕಿ ತಾಲೂಕಿನ ಬಳಗಾನೂರು ಗ್ರಾಮದಲ್ಲಿ ನಡೆದಿದೆ.

ಬಳಗಾನೂರಿನ ಖಾದರಬಾಷಾ ಬಾಬುಸಾಬ (30) ಕೊಲೆಯಾದ ವ್ಯಕ್ತಿ. ಕೌತಾಳಂನ ಮಾರುತಿ ಎನ್ನುವ ವ್ಯಕ್ತಿಯ ಮೇಲೆ ಹತ್ಯೆ ಆರೋಪ ಮಾಡಲಾಗಿದೆ.

ಆಂಜನೇಯನ ಗುಡಿ ಪೂಜಾರಿಯ ಪತ್ನಿ ಮೇಲೆ ಹನುಮ ಜಯಂತಿಯಂದೆ ಅನ್ಯಕೋಮಿನ ವ್ಯಕ್ತಿ ಕಣ್ಣು ಹಾಕಿದ್ದನು. ಅಲ್ಲದೇ ಮೆಸೇಜ್ ಕೂಡ ಮಾಡುತ್ತಿದ್ದನು. ಇದರಿಂದ ಕೋಪಗೊಂಡ ಗಂಡ ಬಳಗಾನೂರು–ತುಗ್ಗಲದಿನ್ನಿ ರಸ್ತೆ ಮಧ್ಯೆ ವ್ಯಕ್ತಿಯನ್ನು ಭೀಕರವಾಗಿ ಕೊಲೆ ಮಾಡಿದ್ದಾನೆ.

ಹತ್ಯೆ ಮಾಡಿದ ಬಳಿಕ ವ್ಯಕ್ತಿಯು ನೇರ ಪೊಲೀಸ್ ಠಾಣೆಗೆ ತೆರಳಿ ಶರಣಾಗಿದ್ದಾನೆ. ಇನ್ನು ಕೊಲೆಯ ವೇಳೆ 6 ರಿಂದ 7 ಜನರು ಭಾಗಿಯಾಗಿರುವ ಅನುಮಾನವಿದೆ. ಆದರೆ ಓರ್ವ ಮಾತ್ರ ನಾನು ಹತ್ಯೆ ಮಾಡಿದ್ದು ಎಂದು ಶರಣಾಗಿದ್ದಾನೆ. ಸ್ಥಳಕ್ಕೆ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ನಿಖಿಲ್.ಬಿ ಭೇಟಿ ಕೊಟ್ಟು ಪರಿಶೀಲನೆ ನಡೆಸಿದ್ದಾರೆ. ಈ ಸಂಬಂಧ ಬಳಗಾನೂರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲು ಮಾಡಲಾಗಿದೆ.

## ಮೃತ ನೇಹಾ ಹಿರೇಮಠ ಹೆಸರಲ್ಲಿ ಬಿಜೆಪಿ ರಾಜಕೀಯ: ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್



ಬೈಲಹೊಂಗಲ: ಹುಬ್ಬಳ್ಳಿಯಲ್ಲಿ ಕೊಲೆಯಾದ ನೇಹಾ ಹಿರೇಮಠ ವಿಷಯದಲ್ಲಿ ಬಿಜೆಪಿ ಅನಾವಶ್ಯಕವಾಗಿ ರಾಜಕೀಯ ಮಾಡುತ್ತಿದೆ. ನಮ್ಮ ಸಮಾಜದ ಹೆಣ್ಣು ಮಗಳನ್ನು ಕಳೆದುಕೊಂಡ ದುಃಖ ನನಗೂ ಇದೆ. ಈಗಾಗಲೆ ಸರಕಾರ ಸಿಐಡಿ ತನಿಖೆಗೆ ಒಪ್ಪಿಸಿದೆ, ವಿಶೇಷ ನ್ಯಾಯಾಲಯ ಸ್ಥಾಪನೆ ನಿರ್ಧಾರ ತೆಗೆದುಕೊಂಡಿದೆ. ಆರೋಪಿಗೆ ಕಠಿಣ ಶಿಕ್ಷೆ ಆಗೋದು ಗ್ಯಾರಂಟಿ ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವರಾದ ಲಕ್ಷ್ಮೀ ಹೆಬ್ಬಾಳ್ಕರ್ ಹೇಳಿಯ.

ಬೈಲಹೊಂಗಲ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ ಹಿರೇಬುದನೂರ, ತಡಸಲೂರ, ಹಾರುಗೊಪ್ಪ ಹಾಗೂ ಮರಕುಂಬಿ ಗ್ರಾಮಗಳಲ್ಲಿ ಕಾಂಗ್ರೆಸ್ ಅಭ್ಯರ್ಥಿ ಮೃಣಾಲ್ ಹೆಬ್ಬಾಳ್ಕರ್ ಪರ ಸಚಿವರು ಪ್ರಚಾರ ಕೈಗೊಂಡರು. ನೇಹಾ ಪಾಟೀಲ್ ಪ್ರಕರಣವನ್ನು ರಾಜ್ಯ ಸರ್ಕಾರ ಈಗಾಗಲೇ ಸಿಐಡಿಗೆ ವಹಿಸಿದೆ. ತನಿಖೆ ವಿಳಂಬವಾಗಬಾರದೆನ್ನುವ ಕಾರಣ–ಕ್ಕೆ ವಿಶೇಷ ನ್ಯಾಯಾಲಯ ಸ್ಥಾಪನೆಗೂ ಕ್ರಮ ಕೈಗೊಳ್ಳಲಾಗಿದೆ ಎಂದರು.

**ದೇಶ ಕಟ್ಟಿದ್ದು ಕಾಂಗ್ರೆಸ್ ಪಕ್ಷ:**

ಕಳೆದ 10 ವರ್ಷಗಳಿಂದಷ್ಟೇ ದೇಶ ನಡೆಯುತ್ತಿದೆ ಎನ್ನುವ ಭ್ರಮೆಯನ್ನು ಬಿಜೆಪಿಹುಟ್ಟಿಸುತ್ತಿದೆ. ಸ್ವಾತಂತ್ರ್ಯದ ಬಳಿಕ ದೇಶ ಕಟ್ಟಿದ್ದು ಕಾಂಗ್ರೆಸ್ ಪಕ್ಷ. ದೇಶದಲ್ಲಿದ್ದ 502 ರಾಜ ಸಂಸ್ಥಾನಗಳನ್ನು ಒಗ್ಗೂಡಿಸುವುದೇ ದೊಡ್ಡ ಕೆಲಸವಾಯಿತು. ದೇಶದಲ್ಲಿ ಸೂಜಿ ತಯಾರಿಸಲೂ ಆಗದ ಪರಿಸ್ಥಿತಿ ಇತ್ತು. ಒಂದು ಹೊತ್ತು ಊಟಕ್ಕೂ ಪರದಾಡಬೇಕಿತ್ತು. ಇಂಥ ಪರಿಸ್ಥಿತಿಯನ್ನು ಸೂಕ್ತವಾಗಿ ನಿಭಾಯಿಸಿದ್ದು ಕಾಂಗ್ರೆಸ್ ಪಕ್ಷ ಎಂದು ಸಚಿವರು ಹೇಳಿದರು.

ರಾಜ್ಯ ಸರ್ಕಾರದ ಗ್ಯಾರಂಟಿ ಯೋಜನೆಗಳಿಂದ ಮಹಿಳೆಯರಷ್ಟೇ ಪುರುಷರಿಗೂ ಅನುಕೂಲವಾಗಿದೆ. ಉಚಿತ ಕರೆಂಟ್, ಗೃಹಲಕ್ಷ್ಮಿ ಹಣಗಳಿಂದ ಪುರುಷರಿಗೂ ಅನುಕೂಲ. ಮನೆಯ ಖರ್ಚು ವೆಚ್ಚವನ್ನು ಮಹಿಳೆಯರೇ ನಿಭಾಯಿಸುತ್ತಿದ್ದಾರೆ. ಬೆಳಗಾವಿಯ ಕಷ್ಟ ಸುಖಗಳು ಬಿಜೆಪಿ ಅಭ್ಯರ್ಥಿಗೆ ಗೊತ್ತಿಲ್ಲ. ಕಾಂಗ್ರೆಸ್ ಅಭ್ಯರ್ಥಿ ಮೃಣಾಲ್ ಹೆಬ್ಬಾಳ್ಕರ್ ಗೆದ್ದರೆ, ಶಾಸಕ ಮಹಾಂತೇಶ್ ಕೌಜಲಗಿ ಅವರ ಮಾರ್ಗದರ್ಶನದಲ್ಲಿ ಬೈಲಹೊಂಗಲ ಕ್ಷೇತ್ರದ ಅಭಿವೃದ್ಧಿಗೆ ಶ್ರಮಿಸಲಿದ್ದಾನೆ ಎಂದು ಹೇಳಿದರು.

ಈ ವೇಳೆ ಮಾತನಾಡಿದ ಶಾಸಕ ಮಹಾಂತೇಶ್ ಕೌಜಲಗಿ, ನುಡಿದಂತೆ ನಡೆದ ಪಕ್ಷ ಕಾಂಗ್ರೆಸ್, ಕೇಂದ್ರ ಸರ್ಕಾರದ ನೀತಿ ವಿರುದ್ಧ ಹೋರಾಡುವ ಸಮಯ ಬಂದಿದೆ. ಕಾಂಗ್ರೆಸ್ ಅಭ್ಯರ್ಥಿ ಯೋಗ್ಯನಾಗಿದ್ದು, ಈ ಬಾರಿ ಕಾಂಗ್ರೆಸ್ ಗೆಲುವಿಗೆ ಎಲ್ಲರೂ ಸಹಕರಿಸಬೇಕು ಎಂದು ಮನವಿ ಮಾಡಿದರು.

ಈ ವೇಳೆ ಕಿತ್ತೂರು ಶಾಸಕ ಬಾಬಾ ಸಾಹೇಬ್ ಪಾಟೀಲ್, ಶಿವರುದ್ರ ಹಟ್ಟಿಹೊಳಿ, ಮಹಾಂತೇಶ್ ಮತ್ತಿಕೊಪ್ಪ, ಶಂಕರಗೌಡ ಪಾಟೀಲ, ಕಾರ್ತಿಕ್ ಪಾಟೀಲ್, ಮಹಾಂತೇಶ್ ನರಸನ್ನವರ, ಗೀತಾಬಾಯಿ ದೇಸಾಯಿ, ಎಂ.ಎಸ್. ಪಟ್ಟಣ, ಸಿ.ಬಿ.ಜಕ್ಕಣ್ಣವರ, ಈರಣ್ಣ ಸಾಲಿ, ಶಿವಾನಂದ ನಿಲಪ್ಪನವರ, ಆನಂದ್ ಕುರುಬುರ್ , ಬಸಪ್ಪ ಮಾಳಗಿ, ಪತ್ರಯ್ಯ ಹಿರೇಮಠ, ವೆಂಕನಾಯ್ಕ್ ಪಾಟೀಲ, ಬಸವರಾಜ ಜಕಾತಿ, ಮಲ್ಲಿಕಾರ್ಜುನ ಕೆಂಗೇರಿ, ಲಕ್ಕಪ್ಪ ಶಿವಣ್ಣವರ್, ಹನುಮಂತ ತಳವಾರ್, ಯಲ್ಲಪ್ಪ ನಾಯ್ಕರ್, ಉಮೇಶ್ ಮರಗಲ್ಲ, ಮಹಾಂತೇಶ್ ಮರಗಲ್ಲ, ಲಕ್ಷ್ಮಣ್ ತಳವಾರ, ಸೋಮಪ್ಪ ಮರಗಲ್ಲ ಸೇ–ರಿದಂತೆ ಹಲವರು ಉಪಸ್ಥಿತರಿದ್ದರು.

## ಕಾಲುವೆಯಲ್ಲಿ ಈಜಲು ಹೋದ ಯುವಕ ನಾಪತ್ತೆ



ಕೆಂಭಾವಿ: ಪಟ್ಟಣದಲ್ಲಿ ಹಾದುಹೋಗಿರುವ ಮುಖ್ಯ ಕಾಲುವೆಯಲ್ಲಿ (ಕೆನಲ್) ಈಜಲು ಹೋದ ಯುವಕನೋರ್ವ ನಾಪತ್ತೆಯಾದ ಘಟನೆ ಮಂಗಳವಾರ ನಡೆದಿದೆ.

ವಿಜಯಪುರ ಜಿಲ್ಲೆಯ ಕಲಕೇರಿ ಗ್ರಾಮದ ಶ್ರೀಶೈಲ ಮಡಿವಾಳಪ್ಪ (21) ನಾಪತ್ತೆಯಾದ ಯುವಕ. ಯುವಕನು ಸೋಮವಾರ ತನ್ನ ಸೋದರಮಾವನ ವಿವಾಹಕ್ಕೆಂದು ಕೆಂಭಾವಿ ಪಟ್ಟಣಕ್ಕೆ ಆಗಮಿಸಿದ್ದನು. ಸೋಮವಾರ ಸಂಭ್ರಮದಿಂದ ಮದುವೆಯಲ್ಲಿ ಭಾಗಿಯಾಗಿದ್ದ ಯುವಕ ಮಂಗಳವಾರ ಬೆಳಗ್ಗೆ ಸ್ನಾನಕ್ಕೆಂದು ಕೆನಲ್‌ಗೆ ಹೋಗಿದ್ದಾನೆ. ಒಂದು ದಡದಿಂದ ಇನ್ನೊಂದು ದಡಕ್ಕೆ ಹೋಗಿ ವಾಪಸ್ ಬರುವಾಗ ಮಧ್ಯದಲ್ಲೇ ಗಾಬರಿಯಾಗಿ ಮುಳಗಲ್ಪಟ್ಟಿದ್ದಾನೆ ಎಂದು ಪ್ರತ್ಯಕ್ಷದರ್ಶಿಗಳು ತಿಳಿಸಿದ್ದಾರೆ.

ಯುವಕ ನೀರಿನಲ್ಲಿ ಮುಳಗಿದ ಸುದ್ದಿ ತಿಳಿಯುತ್ತಲೆ ಸ್ಥಳಕ್ಕಾಗಮಿಸಿದ ಸಂಬಂಧಿಗಳ ಆಕ್ರಂದನ ಮುಗಿಲುಮುಟ್ಟಿತ್ತು.

## ಕೈ ಅಭ್ಯರ್ಥಿ ಪ್ರಿಯಂಕಾಗೆ ಶಿವಸೇನೆ ಬೆಂಬಲ



ಬೆಳಗಾವಿ: ಚಿಕ್ಕೋಡಿ ಲೊಕಸಭಾ ಚುನಾವಣೆ ಕಾಂಗ್ರೆಸ್ ಅಭ್ಯರ್ಥಿ ಪ್ರಿಯಂಕಾ ಜಾರಕಿಹೊಳಿ ಅವರನ್ನು ಬೆಂಬಲಿಸುವಂತೆ ಕಾಂಗ್ರೆಸ್ ಮುಖಂಡರಾದ ವಿವೇಕ ಜತ್ತಿ ಹಾಗೂ ಮಂಜೂರ ಸಮಶೇರ ಅವರು ಕುರುಂದವಾಡ ನಗರದಲ್ಲಿರುವ ಶಿವಸೇನೆಯ ಜಿಲ್ಲಾಧ್ಯಕ್ಷ ವೈಭವ ಉಂಗಳೆ ಅವರ ನಿವಾಸಕ್ಕೆ ಭೇಟಿ ನೀಡಿ ಮನವಿ ಮಾಡಿದರು.

ಈ ಮನವಿಗೆ ಸ್ಪಂದಿಸಿದ ಶಿವಸೇನೆಯ ಜಿಲ್ಲಾಧ್ಯಕ್ಷ ವೈಭವ ಉಂಗಳೆ ಅವರು ಈ ಭಾರಿ ಚಿಕ್ಕೋಡಿ ಲೋಕಸಭಾ ಕಾಂಗ್ರೆಸ್ ಅಭ್ಯರ್ಥಿ ಪ್ರಿಯಂಕಾ ಜಾರಕಿಹೊಳಿ ಅವರಿಗೆ ಸಂಪೂರ್ಣ ಬೆಂಬಲ ನೀಡುವದಾಗಿ ತಿಳಿಸಿದ್ದಾರೆ. ಅಲ್ಲದೇ ಚಿಕ್ಕೋಡಿ ಹೊಂದಿಕೊಂಡಿರುವ ಗಡಿಗ್ರಾಮಗಳಿಗೆ ಹಾಗೂ ನಿಪ್ಪಾಣಿಗೆ ಆಗಮಿಸಿ ಶಿವಸೇನಾ ಕಾರ್ಯಕರ್ತರ ಜೊತೆಗೂಡಿ ಸಹೋದರಿ ಪ್ರಿಯಾಂಕಾ ಜಾರಕಿಹೊಳಿಯವರ ಪರವಾಗಿ ಮತಯಾಚಿಸಲಾಗುವುದು ಎಂದು ತಿಳಿಸಿದ್ದಾರೆ.

ಚಿಕ್ಕೋಡಿ ಲೋಕಸಭೆ ಚುನಾವಣೆಗೆ ಸ್ಪರ್ಧಿಸಿದ ಕಾಂಗ್ರೆಸ್ ಅಭ್ಯರ್ಥಿ ಪ್ರಿಯಂಕಾ ಜಾರಕಿಹೊಳಿ ಅವರಿಗೆ ಶಿವಸೇನೆ ಬೆಂಬಲ ನೀಡಿದ್ದರಿಂದ ಆನೆ ಬಲ ಬಂದಂತಾಗಿದೆ. ಮುಂದಿನ ದಿನಗಳಲ್ಲಿ ಚಿಕ್ಕೋಡಿ ಹೊಂದಿಕೊಂಡಿರುವ ಗಡಿಗ್ರಾಮಗಳಲ್ಲಿ ಕೈ ಅಭ್ಯರ್ಥಿ ಪ್ರಿಯಂಕಾ ಜಾರಕಿಹೊಳಿ ಪರ ಶಿವಸೇನೆ ಅಬ್ಬರದ ಪ್ರಚಾರ ಮಾಡಲು ಎಲ್ಲ ಸಿದ್ದತೆ ಮಾಡಿಕೊಳ್ಳುತ್ತಿದ್ದು, ಕೈ ಕಾರ್ಯಕರ್ತರಲ್ಲಿ ಹುಮ್ಮಸ್ಸು ಇನ್ನಷ್ಟು ಹೆಚ್ಚಿಸಿದೆ.

ಈ ಸಂದರ್ಭದಲ್ಲಿ ರೆಹಮಾನ್ ಮೊಕಾಶಿ, ತನವೀರ ಸಮಶೇರ, ಮುಸ್ತಕೀಮ ಕಮತನೂರ ಹಾಗೂ ಕುರುಂದವಾಡ ಶಿವಸೇನೆ ಕಾರ್ಯಕರ್ತರು ಉಪಸ್ಥಿತರಿದ್ದರು.

## ಲಿಂಗರಾಜ ಪಿಯು ಕಾಲೇಜಿನ ಸಾಧಕ ವಿದ್ಯಾರ್ಥಿಗಳಿಗೆ ಸತ್ಕಾರ



ಬೆಳಗಾವಿ: 2024 ಮಾರ್ಚದಲ್ಲಿ ಜರುಗಿದ ದ್ವಿತೀಯ ಪಿಯುಸಿ ವಾರ್ಷಿಕ ಪರೀಕ್ಷೆಯಲ್ಲಿ ಅದ್ವಿತೀಯ ಸಾಧನೆ ಮಾಡಿದ ಬೆಳಗಾವಿಯ ಕೆ. ಎಲ್.ಇ ಸಂಸ್ಥೆ ಲಿಂಗರಾಜ ಪದವಿಪೂರ್ವ ಕಲಾ ಮತ್ತು ವಾಣಿಜ್ಯ ಮಹಾವಿದ್ಯಾಲಯದ ರ್ಯಾಂಕ್ ವಿಜೇತ ವಿದ್ಯಾರ್ಥಿಗಳನ್ನು ಕಾಲೇಜಿನಲ್ಲಿ ಸತ್ಕ–ರಿಸಲಾಯಿತು.

ಕಲಾ ವಿಭಾಗದಲ್ಲಿ ರಾಜ್ಯಕ್ಕೆ 6ನೇ ರಾಂಕ್ ಪಡೆದ ಪಾರುಲ್ ಹುನ್ನರಗಿಕರ್, ರಾಜ್ಯಕ್ಕೆ 7ನೇ ರಾಂಕ್ ಪಡೆದ ಸೌಜನ್ಯ ಎಸ್ ಜತರಾತಿ, ವಾಣಿಜ್ಯ ವಿಭಾಗದಲ್ಲಿ ರಾಜ್ಯಕ್ಕೆ 10ನೇ ರಾಂಕ್ ತನಿಷ್ಕಾ ಪಾಟೀಲ ಹಾಗೂ ರಾಜ್ಯ ಪುಟ್ಬಾಲ್ ಅಸೋಸಿಯೇಶನ್ 17 ವಯೋಮಾನದವ–ರಿಗೆ ಆಯೋಜಿಸಿದ್ದ ರಾಜ್ಯಮಟ್ಟದ ಪುಟ್ಬಾಲ್ ಮ್ಯಾಚ್‌ದಲ್ಲಿ ಬೆಸ್ಟ್ ಡಿಪೆಂಡರ್ ಪ್ರಶಸ್ತಿಯನ್ನು ಪಡೆದ ಪಿಯುಸಿ ವಿದ್ಯಾರ್ಥಿ ಸುದರ್ಶನ ರಮೇಶ ಮಹಾಡಿಕ್ ಅವರನ್ನು ಕಾಲೇಜಿನ ಸ್ಥಾನಿಕ ಆಡಳಿತ ಮಂಡಳಿಯ ಅಧ್ಯಕ್ಷೆ ಶ್ರೀಮತಿ ಸುಧಾ ಉಪ್ಪಿನ, ಸದಸ್ಯರಾದ ಶ್ರೀಮತಿ ಸುವರ್ಣಾ ಕಿತ್ತೂರ, ಪ್ರಶಾಂತ ಖೋತ, ಶ್ರೀಮತಿ ಆರ್. ಎಸ್.ಸಂಬರಗಿಮಠ, ಪದವಿ ಪಾಚಾರ್ಯ ಡಾ.ಎಚ್.ಎಸ್.ಮೇಲಿನಮನಿ, ಪದವಿಪೂರ್ವ ಕಾಲೇಜಿನ ಪ್ರಾಚಾರ್ಯ ಗಿರಿಜಾ ಹಿರೇಮಠ ಅವರು ಸತ್ಕರಿಸಿ ಅಭಿನಂದಿಸಿದರು.

## ಹನುಮನ ಜಯಂತಿ ಆಚರಣೆ



ಬೆಳಗಾವಿ: ಅಪಹರಣ ಮಾಡಿದವನ್ನು ಉಪಚರಿಸಲಿಲ್ಲ ಹನುಮ. ರಾಮನ ಆಜ್ಞೆಯಂತೆ ರಾವಣನಿಗೆ ಪಾಠ ಕಲಿಸಿ ಸೀತೆಯನ್ನು ತಂದ ರಾಮನ ಬಲಗೈ ಬಂಟ ಹನುಮ. ಇವತ್ತು ಹನುಮನ ಜಯಂತಿ ಆಚರಿಸಯತ್ತಿದ್ದೇವೆ.

ಹನುಮನ ಆದರ್ಶವನ್ನು ನಾವು ಅಳವಡಿಸಿಕೊಳ್ಳಲೇ ಬೇಕು ಎಂದು ಹುಕ್ಕೇರಿ ಹಿರೇಮಠದ ಶ್ರೀ ಚಂದ್ರಶೇಖರ ಶಿವಾಚಾರ್ಯ ಸ್ವಾಮಿಜಿ ಹೇಳಿದರು.

ಮಂಗಳವಾರ ಇಲ್ಲಿನ ಮಹಾಂತೇಶ ನಗರದ ಬಳಿಯ ಕಣಬರಗಿ ರಸ್ತೆಯ ನ್ಯೂ ಬೃಂದಾವನ ಸಾಯಿ ಕಾಲೋನಿಯಲ್ಲಿ ಕೇವಲ 15 ದಿನದಲ್ಲಿ ಮಂದಿರ ಮತ್ತು ಹನುಮಂತನ ಮೂರ್ತಿ ಪ್ರತಿಷ್ಠಾಪನೆಯ ಕಾರ್ಯಕ್ರಮದಲ್ಲಿ ಭಾಗಿಯಾಗಿ ಮಾತನಾಡಿದರು.

ಕೇವಲ 15 ದಿನದಲ್ಲಿ ಹನುಮನ ಮಂದಿರ ಸ್ಥಾಪನೆ ಮಾಡಿ ಪವಾಡ ಸದೃಶ ಕಾರ್ಯಕ್ರಮ ಬೆಳಗಾವಿ ನಗರದಲ್ಲಿ ನಡೆದಿದೆ ಎಂದರು.

ನೇಹಾ ಹಿರೇಮಠಳ ಹತ್ಯೆಯನ್ನು ಮಾಡಿರುವ ಆ ದುಷ್ಟ ಯುವಕನಿಗೆ ಶಿಕ್ಷೆಯಾಗಬೇಕು ಎಂದು ನಾವು ಪ್ರಾರ್ಥಿಸಿಕೊಳ್ಳೋಣ.

ಅಲ್ಲದೆ, ನಮ್ಮವರಿಗೆ ಅನ್ಯಾಯವಾದಾಗ ಧ್ವನಿ ಎತ್ತುವ ಕಾರ್ಯ ಮಾಡೋಣ ಎಂದು ಶ್ರೀಗಳು ನೋವುನಿಂದ ನುಡಿದರು.

ನಿರಂಜನಯ್ಯ ಹಿರೇಮಠರ ಕುಟುಂಬಕ್ಕೆ ಸಾಂತ್ವನ ಹೇಳಿದರೆ ಸಾಲದು ಸರಕಾರಕ್ಕೆ ನಾವೆಲ್ಲರೂ ಕವಿಮಾತನ್ನು ಹೇಳಬೇಕು ಎಂದರು.

ಈ ಸಂದರ್ಭದಲ್ಲಿ ಮಹೇಶ ಹಿರೇಮಠ, ಕಿರಣ ತೋರಗಲ, ನಿಂಗಪ್ಪ ಹಟ್ಟಿ, ಸೋಹಾಸ ಜಗಜಂಪಿ, ಸಂತೋಷ ದೋರಲೆ, ಸಂತೋಷ ಪಾಟೀಲ್, ರಾಜು ಹಿರೇಮಠ, ವಿನೋದ್ ಮಾಲೇದಾರ, ಶ್ರೀಕಾಂತ ಮಾಲೇದಾರ, ಕಿರಣಗಣಾಚಾರಿ, ಚನ್ನಬಸಯ್ಯ ಹಿರೇಮಠ ಇದ್ದರು.

## ಮಾನವನ ದುರಾಸೆಯಿಂದ ಪರಿಸರ ಅಸಮತೋಲನ: ನ್ಯಾ. ರೊಟ್ಟೇರ್ ಕಳವಳ



ಹುಕ್ಕೇರಿ: ಮನುಷ್ಯನ ದುರಾಸೆಯಿಂದ ಭೂ ಸಂಪನ್ಮೂಲಗಳ ಮೇಲೆ ಒತ್ತಡ ಹೆಚ್ಚಾಗುತ್ತಿದೆ. ಇದರಿಂದ ಭೂಮಿಯ ತಾಪಮಾನ ವರ್ಷದಿಂದ ವರ್ಷಕ್ಕೆ ಏರುತ್ತಿದೆ ಎಂದು ಹಿರಿಯ ಸಿವಿಲ್ ನ್ಯಾಯಾಧೀಶ ಕೆ.ಎಸ್.ರೊಟ್ಟೇರ್ ಕಳವಳ ವ್ಯಕ್ತಪಡಿಸಿದರು.

ಪಟ್ಟಣದ ಹೊರವಲಯದ ಕೃಷಿ ಇಲಾಖೆ ಕಛೇ–ರಿಯಲ್ಲಿಏರ್ಪಡಿಸಿದ ವಿಶ್ವ ಭೂ ದಿನಾಚರಣೆ ಉದ್ಘಾಟಿಸಿ ಮಾತನಾಡಿದ ಅವರು, ಮಾನವನ ಅತಿಯಾದ ದುರಾಸೆಯಿಂದ ಪರಿಸರ ಅಸಮತೋಲನಕ್ಕೆ ಕಾರಣವಾಗಿದೆ. ಹಾಗಾಗಿ ಪರಿಸರ ಪ್ರೇಮಿಯಾಗಿ ಜೀವನ ಸಾಗಿಸುವ ತುರ್ತು ಅಗತ್ಯವಿದೆ. ಜತೆಗೆ ಪ್ಲಾಸ್ಟಿಕ್ ಮುಕ್ತ ಭೂಮಿ ನಿರ್ಮಿಸುವತ್ತ ಗಮನಹರಿಸಬೇಕು ಎಂದರು.

ಅಧ್ಯಕ್ಷತೆ ವಹಿಸಿದ್ದ ಸಹಾಯಕ ಕೃಷಿ ನಿರ್ದೇಶಕ ಆರ್ಬಿ.ನಾಯ್ಕರ ಮಾತನಾಡಿ, ಈ ವರ್ಷದ ಧ್ಯೇಯದಂತೆ ನಾವೆಲ್ಲರೂ ಪ್ಲಾಸ್ಟಿಕ್ ಬಳಕೆ ಕಡಿಮೆ ಮಾಡಬೇಕಿದೆ. ಕಬ್ಬಿನ ಬೆಳೆಯ ರವದಿ ಸುಡುವುದನ್ನು ನಿಲ್ಲಿಸಬೇಕು ಎಂದರು.

ಸಂಪನ್ಮೂಲ ವ್ಯಕ್ತಿ, ತೋಟಗಾರಿಕಾ ವಿಜ್ಞಾನಿ ಪರಶುರಾಮ ಪಾಟೀಲ್ ಮಾತನಾಡಿ, ಆಧುನಿಕತೆ ಹೆಚ್ಚಾದಂತೆ ಮರಗಳ ನಾಶ ಹೆಚ್ಚಾಗುತ್ತಿದೆ. ಇದರಿಂದ ಭೂಮಿ ಬರಡಾಗುತ್ತಿದ್ದು ಪ್ರತಿಯೊಬ್ಬರೂ ಸಸಿ ನೆಟ್ಟು ಪೋಷಿಸಬೇಕು. ಈ ಮೂಲಕ ಭೂಮಿ ಸಂರಕ್ಷಿಸಬೇಕು ಎಂದರು.

ಸಿವಿಲ್ ನ್ಯಾಯಾಧೀಶ ಕೆ.ಅಂಬಣ್ಣಾ, ಹಿರಿಯ ನ್ಯಾಯವಾದಿ ರಾಮಚಂದ್ರ ಜೋಶಿ, ಲಾವಣ್ಯ ಸೌಂಸದಿ ಮಾತನಾಡಿದರು. ಸಮೀರ್ ಲೋಕಾಪುರ ಸ್ವಾಗತಿಸಿದರು. ಕೃಷಿಕ ಸಮಾಜದ ಅಧ್ಯಕ್ಷ ಬಿ.ಕೆ.ಮಗೆನ್ನವರ ವಂದಿಸಿದರು.

ಅಪರ ಸರಕಾರಿ ವಕೀಲ ಎ.ಸಿ.ಕರೋಶಿ, ಸಹಾಯಕ ಸರಕಾರಿ ಅಭಿಯೋಜಕ ಶೇಖರ ಬಡಗಾಂವೆ, ನ್ಯಾಯವಾದಿ ಸಂಘದ ಉಪಾಧ್ಯಕ್ಷ ಬಿ.ಎಂ.ಜಿನರಾಳಿ, ಕಾರ್ಯದರ್ಶಿ ಎಸ್.ಜಿ. ನದಾಫ್, ಜಂಟಿ ಕಾರ್ಯದರ್ಶಿ ವಿ.ಎಲ್.ಗಸ್ತಿ, ಖಜಾಂಚಿ ಎ.ಎ.ಬಾಗೇವಾಡಿ, ಮಹಿಳಾ ಪ್ರತಿನಿಧಿ ಎ.ಬಿ.ಕುಲಕರ್ಣಿ, ಟಿಎಚ್ಓ ಡಾ.ಉದಯ ಕುಡಚಿ, ಹಿರಿಯ ತೋಟಗಾರಿಕೆ ನಿರ್ದೇಶಕ ತಾತ್ಯಾಸಾಬ ನಾಂದನಿ, ಅಂಗನವಾಡಿ ಹಿರಿಯ ಮೇಲ್ವಿಚಾರಕಿ ನಿರ್ಮಲಾ ಕುರಬೇಟ ಮತ್ತಿತರರು ಉಪಸ್ಥಿತರಿದ್ದರು.

ತಾಲೂಕು ಕಾನೂನು ಸೇವಾ ಸಮಿತಿ, ನ್ಯಾಯವಾದಿಗಳ ಸಂಘ, ಕೃಷಿ ಇಲಾಖೆ, ಕೃಷಿಕ ಸಮಾಜ ಹಾಗೂ ಸರಕಾರಿ ವಿವಿಧ ಇಲಾಖೆಗಳ ಸಂಯುಕ್ತ ಆಶ್ರಯದಲ್ಲಿ ಈ ಕಾರ್ಯಕ್ರಮ ನಡೆಯಿತು.

## ಜನರ ಕಷ್ಟಕ್ಕೆ ಸ್ಪಂದಿಸಿ, ಪರಿಹರಿಸುವುದರಲ್ಲಿರುವ ಸಂತೋಷ ಬೇರೆಲ್ಲೂ ಸಿಗದು: ಮೃಣಾಲ ಹೆಬ್ಬಾಳಕರ್



ಬೆಳಗಾವಿ : ಬೆಳಗಾವಿ ಲೋಕಸಭಾ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಮೃಣಾಲ ಹೆಬ್ಬಾಳಕರ್ ಕೆಎಲ್‌ಎಸ್ ಸಂಸ್ಥೆಯ ಗೋಗಟೆ ಇನ್ ಸ್ಟಿಟ್ಯೂಟ್ ಆಫ್ ಎಂಜಿನಿಯರಿಂಗ್ ಕಾಲೇಜಿನಲ್ಲಿ ಎಂಜಿನಿಯರಿಂಗ್ ಪದವಿ ಪಡೆದಿದ್ದಾರೆ. ತಾವು ಕಲಿತ ಕಾಲೇಜಿನಲ್ಲಿ ಸೋಮವಾರ ವಿದ್ಯಾರ್ಥಿಗಳೊಂದಿಗೆ ಅವರು ಸುಮಾರು 2 ಗಂಟೆಗಳಿಗೂ ಹೆಚ್ಚು ಸಮಯ ಸಂವಾದ ನಡೆಸಿ, ವಿದ್ಯಾರ್ಥಿಗಳ ಪ್ರಶ್ನೆಗೆ ಅತ್ಯಂತ ಸಮರ್ಪಕ ಉತ್ತರ ನೀಡಿದರು.

ವಿದ್ಯಾರ್ಥಿಗಳು ಹತ್ತಾರು ಪ್ರಶ್ನೆಗಳನ್ನು ಕೇಳುವ ಮೂಲಕ ತಮ್ಮ ಮನಸ್ಸಿನಲ್ಲಿರುವ ಸಂಶಯಗಳಿಗೆ ಪರಿಹಾರ ಕಂಡುಕೊಂಡರು. ನೀವು ರಾಜಕೀಯಕ್ಕೆ ಬಂದಿದ್ದೇಕೆ? ಇದಕ್ಕೆ ಪ್ರೇರಣೆ ಏನು? ನಿಮ್ಮ ಗುರಿ ಏನು? ನಿಮ್ಮ ವಿದ್ಯಾರ್ಥಿ ಜೀವನ ಹೇಗಿತ್ತು? ಪ್ರಸ್ತುತ ರಾಜ–ಕೀಯ ವ್ಯವಸ್ಥೆಯನ್ನು ಸುಧಾರಿಸುವುದು ಹೇಗೆ? ಹೀಗೆ ಹತ್ತಾರು ಪ್ರಶ್ನೆಗಳನ್ನು ವಿದ್ಯಾರ್ಥಿಗಳು ಕೇಳಿದರು. ಎಲ್ಲದಕ್ಕೂ ಸಮರ್ಥವಾಗಿ ಉತ್ತರಿಸುವ ಮೂಲಕ ತಮ್ಮಲ್ಲಿರುವ ನಾಯಕತ್ವ ಗುಣವನ್ನು ಸಾಬೀತುಪಡಿಸಿದರು.

ಜನನಾಯಕನಾಗಬೇಕೆನ್ನುವ ಬಯಕೆ ನಿಮಗೆ ಹುಟ್ಟಿದ್ದು ಹೇಗೆ ಎನ್ನುವ ಪ್ರಶ್ನೆಗೆ ಉತ್ತರಿಸಿದ ಮೃಣಾಲ ಹೆಬ್ಬಾಳಕರ್, ನಾನು ಕಳೆದ 10 ವರ್ಷದಿಂದ ತಾಯಿ ಲಕ್ಷ್ಮೀ ಹೆಬ್ಬಾಳಕರ್ ಅವರು ಸಮಾಜ ಸೇವೆ ಮತ್ತು ರಾಜಕೀಯದಲ್ಲಿ ಕೆಲಸ ಮಾಡುವುದನ್ನು ಹತ್ತಿರದಿಂದ ನೋಡುತ್ತ ಬಂದಿದ್ದೇನೆ. ಅವರ ಕೆಲಸಕ್ಕೆ ನನ್ನಿಂದಾದ ಸಹಾಯವನ್ನೂ ಮಾಡುತ್ತ ಬಂದಿದ್ದೇನೆ. ಹಾಗೆ ಮಾಡುವಾಗ ಅತ್ಯಂತ ಕಷ್ಟದಲ್ಲಿರುವವರು ಬಂದು ಸಹಾಯಕ್ಕಾಗಿ ಮೊರೆ ಇಡುವುದನ್ನು ನೋಡಿ ತಾಯಿಯವರು ಬಹಳ ಕನಿಕರದಿಂದ ಅವರ ಸಹಾಯಕ್ಕೆ ನಿಲ್ಲುವುದನ್ನು, ಅವರ ಸಮಸ್ಯೆ ಪರಿಹರಿಸಿ, ಖುಷಿ ಪಡುವುದನ್ನು ನೋಡಿದ್ದೇನೆ. ಹಾಗಾಗಿ ಜನರ ಕಷ್ಟಕ್ಕೆ ಸ್ಪಂದಿಸುವುದರಲ್ಲಿ, ಅವರ ಕಷ್ಟವನ್ನು ಪರಿಹ–ರಿಸುವುದರಲ್ಲಿ ಇರುವ ಸಂತೋಷ ಬೇರೆಲ್ಲೂ ಸಿಗುವುದಿಲ್ಲ ಎಂದು ಅರಿತ ನಾನು, ನಾನೂ ಕೂಡ ರಾಜಕೀಯದ ಮೂಲಕ ಸಮಾಜ ಸೇವೆಯಲ್ಲಿ ತೊಡಗಿಕೊಳ್ಳಬೇಕೆಂದು ನಿರ್ಧರಿಸಿದೆ. ಹಾಗಾಗಿ ಆ ದಿಸೆಯಲ್ಲಿ 10 ವರ್ಷದಿಂದ ಕೆಲಸ ಮಾಡುತ್ತ ಇಂದು ನಿಮ್ಮ ಮುಂದೆ ಲೋಕಸಭೆಯ ಅಭ್ಯರ್ಥಿಯಾಗಿ ನಿಂತಿದ್ದೇನೆ ಎಂದರು.

ನಿಮ್ಮ ಕಾಲೇಜು ಜೀವನ ಹೇಗಿತ್ತು ಮತ್ತು ರಾಜಕೀಯಕ್ಕಿಳಿಯಲು ವಿದ್ಯಾರ್ಥಿ ಜೀವನದಲ್ಲಿ ಹೇಗೆ ಪ್ರೇರಣೆ ಸಿಕ್ಕಿತು ಎನ್ನುವ ಪ್ರಶ್ನೆಗೆ, ನಾನು ವಿದ್ಯಾರ್ಥಿಯಾಗಿದ್ದಾಗಿನಿಂದಲೂ ನಾಯಕತ್ವ ಗುಣ ಬೆಳೆಸಿಕೊಂಡು ಬಂದವನು. ಆಗಿನಿಂದಲೂ ಎಲ್ಲರ ಜೊತೆ ಸ್ನೇಹಪರ ವ್ಯಕ್ತಿತ್ವ ಇಟ್ಟುಕೊಂಡಿದ್ದೆ. ಸ್ನೇಹಿತರಿಗೆ ನನ್ನಿಂದಾದ ಸಹಾಯ ಮಾಡುತ್ತ ಬಂದಿದ್ದೆ.

ವಿದ್ಯಾರ್ಥಿ ಜೀವನದಲ್ಲಿ ಕಲಿತ ಬಹಳಷ್ಟು ವಿಷಯಗಳು, ಇಲ್ಲಿ ಪಡೆದ ಅನುಭವ ನನ್ನನ್ನು ಇಂದು ಈ ಹಂತಕ್ಕೆ ತಂದು ನಿಲ್ಲಿಸಿದೆ. ಹಾಗಾಗಿ ವಿದ್ಯಾರ್ಥಿ ಜೀವನವನ್ನು ಯಾರೂ ವ್ಯರ್ಥವಾಗಿಸಿಕೊಳ್ಳಬಾರದು. ಅದು ಭವಿಷ್ಯದ ದಿಕ್ಸೂಚಿಯಾಗುವುದರಲ್ಲಿ ಸಂದೇಹವಿಲ್ಲ ಎಂದು ಉತ್ತರಿಸಿದರು.

ಇಲ್ಲಿರುವ ವಿದ್ಯಾರ್ಥಿಗಳು ಮತ್ತು ಇತರ–ರಿಗೆ ಬರಲಿರುವ ಚುನಾವಣೆ ವಿಷಯದಲ್ಲಿ ಯಾವ ಸಂದೇಶ ನೀಡಲು ಬಯಸುತ್ತೀರಿ ಎನ್ನುವ ಪ್ರಶ್ನೆಗೆ, ಉತ್ತಮ ವ್ಯಕ್ತಿ ನೋಡಿ ಮತ ಕೊಡಿ. ಜಿವನದಲ್ಲಿ ಬದ್ಧತೆ ಮುಖ್ಯ.

ಕೇವಲ ಸ್ವಾರ್ಥಕ್ಕಾಗಿ ಕೆಲಸ ಮಾಡುವವರು, ಅಧಿಕಾರಕ್ಕಾಗಿಯೇ ರಾಜ–ಕಾರಣ ಮಾಡುವವರನ್ನು ದೂರವಿಟ್ಟಾಗ ಮಾತ್ರ ಸ್ವಚ್ಛ ಸಮಾಜ ನಿರ್ಮಾಣ ಸಾಧ್ಯ. ಯುವಜನರು ಇದರ ಮುಂದಾಳತ್ವ ವಹಿಸಬೇಕು. ಎಲ್ಲರೊಂದಿಗೆ ಬೆರೆತು ಕೆಲಸ ಮಾಡುವಂತವರನ್ನು ಆಯ್ಕೆ ಮಾಡಬೇಕು ಎಂದರು.

ನೀವು ಆಯ್ಕೆಯಾದಲ್ಲಿ ನಿಮ್ಮ ಪ್ರಮುಖ ಗುರಿ ಏನು, ವಿಶೇಷವಾಗಿ ಯುವಜನರಿಗಾಗಿ ಏನು ಮಾಡಲಿದ್ದೀರಿ ಎನ್ನುವ ಪ್ರಶ್ನೆಗೆ, ಮೊಟ್ಟ ಮೊದಲು ವಿದ್ಯಾವಂತರಿಗೆ ಇಲ್ಲೇ ಉದ್ಯೋಗ ಮಾಡುವಂತಹ ಅವಕಾಶ ಕಲ್ಪಿಸುವುದು ನನ್ನ ಗುರಿ. ತನ್ಮೂಲಕ ನಿರುದ್ಯೋಗ ಸಮಸ್ಯೆ ನಿವಾರಣೆ, ಜೊತೆಗೆ ಪ್ರತಿಭಾ ಪಲಾಯನ ತಡೆಯಲು ಆದ–್ಯತೆ ನೀಡಿ ಕೆಲಸ ಮಾಡುತ್ತೇನೆ. ಕೌಶಲ್ಯಾಭಿವೃದ್ಧಿ ಕೇಂದ್ರ ತೆರೆಯುವ ಮೂಲಕ ಉದ್ಯೋಗಸ್ಥರಾಗಲು ಮತ್ತು ಉದ್ಯಮಿಗಳಾಗಲು ಅಗತ್ಯ ನೆರವು ನೀಡುತ್ತೇನೆ.

ಜೊತೆಗೆ ಜಿಲ್ಲೆಗಾಗಿ ಇನ್ನೂ ಹತ್ತಾರು ಕನಸುಗಳನ್ನು ಕಟ್ಟಿಕೊಂಡಿದ್ದೇನೆ. ಖಂಡಿತ ಜನರ ನಿರೀಕ್ಷೆಯಂತೆ ಕೆಲಸ ಮಾಡಿ, ನಮ್ಮ ಮತ ಸಾರ್ಥಕವಾಯಿತು ಎನ್ನುವಂತೆ ಕೆಲಸ ಮಾಡುತ್ತೇನೆ ಎಂದು ಮೃಣಾಲ ಹೆಬ್ಬಾಳಕರ್ ಉತ್ತರಿಸಿದರು.

ಪ್ರಸ್ತುತ ರಾಜಕೀಯ ವ್ಯವಸ್ಥೆಯನ್ನು ಬದಲಾಯಿಸಲು ನಿಮ್ಮ ಯೋಜನೆ ಏನು ಎನ್ನುವ ಪ್ರಶ್ನೆಗೆ, ಇದು ನನ್ನೊಬ್ಬನಿಂದ ಸಾಧ್ಯವಿಲ್ಲ. ಆದರೆ ಆ ದಿಸೆಯಲ್ಲಿ ನಾನು ಹೆಜ್ಜೆ ಹಾಕುತ್ತೇನೆ. ಅದಕ್ಕೆ ನಿಮ್ಮೆಲ್ಲರ ಸಹಕಾರ ಅಗತ್ಯವಿದೆ. ನಾನೊಬ್ಬನೇ ಅಲ್ಲ, ಇನ್ನೂ ನೂರಾರು ಪ್ರಾಮಾಣಿಕ ಯುವಕರು ರಾಜಕೀಯಕ್ಕೆ ಬರಬೇಕು. ರಾಜಕೀಯ ವ್ಯವಸ್ಥೆಯನ್ನು ಸುಧಾರಿಸಲು ಎಲ್ಲರೂ ಕೈಜೋಡಿಸಿದಾಗ ಅದು ಸಾಧ್ಯವಿಲ್ಲದ ಕೆಲಸವಲ್ಲ ಎಂದು ಹೇಳಿದರು.

ಪದೇ ಪದೆ ಕೇಳಿಬರುತ್ತಿರುವ ಗಡಿ ವಿವಾದ ಪರಿಹರಿಸಲು ನಿಮ್ಮ ಯೋಜನೆ ಏನು ಎನ್ನುವ ಪ್ರಶ್ನೆಗೆ, ನಾನು ನನ್ನ ಪ್ರಣಾಳಿಕೆಯಲ್ಲಿ ಈಗಾಗಲೆ ಹಾಕಿದ್ದೇನೆ, ನೆಮ್ಮದಿಯ ಮತ್ತು ಸುರಕ್ಷಿತ ಬೆಳಗಾವಿ ನನ್ನ ಕನಸು. ಇಲ್ಲಿ ಬೇಡದ ಕಾರಣಕ್ಕೆ ಗಲಭೆಗಳಾಗುವುದಕ್ಕೆ ಶಾಶ್ವತ ಪರಿಹಾರ ಕಲ್ಪಿಸಲು ನನ್ನಿಂದಾದ ಪ್ರಾಮಾಣಿಕ ಪ್ರಯತ್ನ ಮಾಡುತ್ತೇನೆ.

ಒಟ್ಟಾರೆ ಬೆಳಗಾವಿ ಒಂದು ಆದ–ರ್ಶ ನಗರವಾಗಬೇಕು. ಲೋಕಸಭಾ ಕ್ಷೇತ್ರದ ಒಂದು ಮಾದರಿ ಕ್ಷೇತ್ರವಾಗಬೇಕು ಈ ದಿಸೆಯಲ್ಲಿ ನಾನು ಹೆಜ್ಜೆ ಇಡುತ್ತೇನೆ ಎಂದು ಉತ್ತರಿಸಿದರು.

ಮೃಣಾಲ ಹೆಬ್ಬಾಳಕರ್ ಜೊತೆಗಿನ ಸಂವಾದಕ್ಕೆ ವಿದ್ಯಾರ್ಥಿಗಳು ಅತ್ಯಂತ ಖುಷಿಪಟ್ಟು, ಅವರ ಉತ್ತರಗಳಿಗೆ ಕರತಾಡನದ ಮೂಲಕ ಮೆಚ್ಚುಗೆ ವ್ಯಕ್ತಪಡಿಸಿದರು. ತಾವೊಬ್ಬ ಸಮರ್ಥ ಸಂಸದನಾಗಬಲ್ಲೆ ಎನ್ನುವುದನ್ನು ಅವರು ನಿರೂಪಿಸುವಲ್ಲಿ ಯಶಸ್ವಿಯಾದರು.

BELAGAVI VARADI KANNADA DAILY MORNING : Editor, Printer, Publisher & Owned By : Satish Basavani Gudagenatti. Basavani House No.53, Ashray Colony Sarathi Nagar, Tv Center - 590019, TQ & DIST Belagavi, Karnataka.
Printed At : LAXMI PRINTERS, No.627. Auto Nagar - 590016.TQ & DIST Belagavi, Karnataka Mob : 9900332089